21 December 2025 Sunday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

**ಭಾವನಾಂತರಂಗ**

ಕಷ್ಟಗಳು ಅಲೆಗಳ ಹೊಡೆತದಂತೆ,
ಬದುಕಿನಲ್ಲಿ ಆಗಾಗ ಬಂದು ಅಪ್ಪಳಿಸುತ್ತವೆ!
ಶಾಶ್ವತವಾಗಿ ಅಲ್ಲೇ ನಿಲ್ಲುವುದಿಲ್ಲ!
ಸ್ನೇಹಾ ಆನಂದ್

# ವರ್ತಮಾನ

ಸಂಪಾದಕ: ಕೆ.ಎನ್.ರವಿ
info.varthaman@gmail.com
ಭವಿಷ್ಯದ ಮುನ್ನುಡಿ

**ಒಂದೊಳ್ಳೆ ಮಾತು**

ಬದುಕಿನಲ್ಲಿ ವೈವಿಧ್ಯತೆ ಹೆಚ್ಚು ಏಕೆಂದರೆ.....??, ಶಾಲೆ ಒಂದು ಪಾಠವನ್ನು ಎಲ್ಲರಿಗೂ ಒಂದೇ ರೀತಿ ಕಲಿಸುತ್ತದೆ....., ಬದುಕು ಹಾಗಲ್ಲ... ಒಂದು ಪಾಠವನ್ನು ಪ್ರತಿಯೊಬ್ಬರಿಗೂ ಒಂದೊಂದು ರೀತಿಯಲ್ಲಿ ಕಲಿಸುತ್ತದೆ
ಮೈಲಾರ ಸಾವಿತ್ರಿಬಾಯಿ

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್
VARTHAMAN Volume: 69 Issue: 58 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಅರಮನೆಯಲ್ಲಿ ಸ್ತುತಿಶಂಕರ ಸ್ತೋತ್ರ ಮಹಾಸಮರ್ಪಣೆ




**ಮೈಸೂರು:** ಜಗತ್ಪ್ರಸಿದ್ಧ ಮೈಸೂರು ಅರ ಮನೆ ಆವರಣದಲ್ಲಿಂದು ಸ್ತುತಿಶಂಕರ ಸ್ತೋತ್ರ ಮಹಾ ಸಮರ್ಪಣೆ ಕಾರ್ಯಕ್ರಮ ಶನಿವಾರ ಸಾವಿರಾರು ಭಕ್ತರ ಸಮ್ಮುಖ ದಲ್ಲಿ ಸಂಪನ್ನಗೊಂಡಿತು.

ಶ್ರೀ ಶೃಂಗೇರಿ ಶಾರದಾಪೀಠದ ಶಂಕ ರಾಚಾರ್ಯ ಶ್ರೀ ಭಾರತೀತೀರ್ಥ ಸ್ವಾಮೀಜಿ ಸನ್ಯಾಸ ಸ್ವೀಕರಿಸಿ 50ನೇ ವರ್ಷದ ಶುಭ ಸಂದರ್ಭ ದಲ್ಲಿ ಸುವರ್ಣಭಾರತೀ ಎಂಬ ಶೀರ್ಷಿಕೆಯ



ಅಡಿಯಲ್ಲಿ ಕಲ್ಯಾಣವೃಷ್ಟಿ ಮಹಾಭಿಯಾನದ ಸ್ತೋತ್ರ ಮಹಾಸಮ ರ್ಪಣೆ ಕಾರ್ಯಕ್ರಮವನ್ನು ಮೈಸೂರು ಅರಮನೆ ಆವರಣದಲ್ಲಿ ಆಯೋಜನೆ ಮಾಡಿದ್ದರು.

ಶ್ರೀ ಶಂಕರಭಾರತಿ ಸ್ವಾಮೀಜಿ, ಶ್ರೀ ಬ್ರಹ್ಮಾನಂದ ಭಾರತಿ ಸ್ವಾಮೀಜಿ, ಶ್ರೀ ವೇದಾಂತ ಭಾರತಿ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ನಡೆದ ಸ್ತುತಿ ಶಂಕರ ಸ್ತೋತ್ರ ಮಹಾಸಮರ್ಪಣೆ ಕಾರ್ಯಕ್ರಮ ಜರುಗಿತು. ಮೈಸೂರು ರಾಜಮ ನೆತನದ ಪ್ರಮೋ ದಾದೇವಿ ಒಡೆಯರ್, ಸಂಸದ ಯದು ವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕುಟುಂಬ ಸಮೇತರಾಗಿ ಕಾರ್ಯಕ್ರಮ ದಲ್ಲಿ ಭಾಗಿ ಯಾಗಿದ್ದರು.

ಶಾಸಕ ಶ್ರೀವತ್ಸ, ಸ್ತುತಿಶಂಕರ ಸಂಚಾಲನ ಸಮಿತಿಯ ಕಾರ್ಯಾಧ್ಯಕ್ಷ ಸುಧಾಕರಶೆಟ್ಟಿ, ಜಿಎಸ್ ಸಮೂಹ ಸಂಸ್ಥೆಗಳ ಮುಖ್ಯಸ್ಥ ಯೋಗಾತ್ಮ ಶ್ರೀಹರಿ, ಕಾಂಗ್ರೆಸ್ ಮುಖಂಡ ಹೆಚ್.ವಿರಾಜೀವ್, ಬಿಜೆಪಿ ಮುಖಂಡ ರಘು ಕೌಟಿಲ್ಯ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಇನ್ನಿತರರು ಉಪಸ್ಥಿತರಿದ್ದರು.



## ಶಾಸಕ ಬೈರತಿ ಬಸವರಾಜ್ ಎಸ್ಕೇಪ್: ಪತ್ತೆಗೆ 3 ಪೊಲೀಸ್ ತಂಡ ರಚನೆ

**ಬೆಂಗಳೂರು:** ನಿರೀಕ್ಷಣಾ ಜಾಮೀನು ಅರ್ಜಿ ಹೈಕೋರ್ಟ್‌ನಲ್ಲಿ ವಜಾಗೊಂಡ ಬೆನ್ನಲ್ಲೇ ಬಿಜೆಪಿ ಶಾಸಕ ಬೈರತಿ ಬಸ ವರಾಜ್ ಅವರು ಮೊಬೈಲ್ ಸ್ವಿಚ್ ಆಫ್ ಮಾಡಿ ನಾಪತ್ತೆ ಯಾಗಿದ್ದಾರೆ.

ಈ ನಡುವೆಯೇ ಬೈರತಿ ಬಸವ ರಾಜ್ ಬಂಧನಕ್ಕಾಗಿ ಸರ್ಕಾರ 3 ವಿಶೇಷ ಪೊಲೀಸ್ ತಂಡವನ್ನು ರಚನೆ ಮಾಡಿದೆ. ಬೈರತಿ ಪುಣೆಯಲ್ಲಿ ತಲೆ ಮರೆಸಿಕೊಂಡಿರುವ ಮಾಹಿತಿ ಪೊಲೀ ಸರಿಗೆ ಲಭ್ಯವಾಗಿದೆ. ಅವರ ಲೈವ್ ಲೊಕೇಷನ್ ಮಹಾರಾಷ್ಟ್ರದ ಪುಣೆ ಯಲ್ಲಿ ಕೊನೆಯದಾಗಿ ಪತ್ತೆಯಾ ಗಿದೆ ಎಂದು ತನಿಖಾ ಮೂಲ ಗಳು ತಿಳಿಸಿವೆ.

ಬೆಳಗಾವಿಯ ಚಳಿಗಾಲದ ಅಧಿ ವೇಶನಕ್ಕೆ ಬೈರತಿ ಬಸವರಾಜ್ ಹಾಜರಾಗಿದ್ದರು. ನಂತರ ಅಲ್ಲಿಂದಲೇ ನಾಪತ್ತೆಯಾಗಿದ್ದಾರೆ. ಸಿಐಡಿ ಅಧಿಕಾರಿಗಳ ತಂಡ ಬೈರತಿ ಬಸವ ರಾಜ್ ಉಳಿದುಕೊಂಡಿದ್ದ ಜಾಗಕ್ಕೆ ಹೋಗಿ ಅಲ್ಲಿನ ಸಿಸಿಟಿವಿ, ಯಾವ ರಸ್ತೆಯ ಮೂಲಕ ಯಾವ ಕಡೆಗೆ ಹೋಗಿದ್ದಾರೆ ಅನ್ನೋದು ಸೇರಿದಂತೆ ಬೇರೆ ಬೇರೆ ಜಿಲ್ಲೆ ಮತ್ತು ರಾಜ್ಯಕ್ಕೆ ಕನೆಕ್ಟ್ ಆಗಿರುವ ಟೋಲ್‌ಗಳ ಸಿಸಿಟಿವಿ ದೃಶ್ಯಾವಳಿ ಗಳನ್ನ ಪರಿಶೀಲಿಸಿದ್ದಾರೆ.

ಬೈರತಿ ಬಸವರಾಜ್ ಗೋವಾ ಅಥವಾ ಮಹಾರಾಷ್ಟ್ರಕ್ಕೆ ಹೋಗಿರುವ ಮಾಹಿತಿ ಸಿಕ್ಕಿದೆ. ಮಹಾರಾಷ್ಟ್ರದ ಪುಣೆಯಲ್ಲಿ ಮೊಬೈಲ್ ಸ್ವಿಚ್ ಆಫ್





## ಡಿಕೆಶಿಗೆ ಹರಿದ್ವಾರದಿಂದ ಬಂದ ನಾಗ ಸಾಧುಗಳಿಂದ ಆಶೀರ್ವಾದ

**ಬೆಂಗಳೂರು:** ರಾಜ್ಯ ಕಾಂಗ್ರೆಸ್‌ನಲ್ಲಿ ಸಿದ್ದ ರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನಡು ವಿನ ಮುಖ್ಯಮಂತ್ರಿ ಕುರ್ಚಿಯ ಸಮರ ತೀವ್ರಗೊಂಡಿರುವ ಸಂದರ್ಭದಲ್ಲಿಯೇ ಹರಿದ್ವಾರದಿಂದ ಬಂದ ನಾಗ ಸಾಧು ಗಳಿಂದ ಶನಿವಾರ ಡಿಸಿಎಂ ಡಿ.ಕೆ.ಶಿವ ಕುಮಾರ್ ಆಶೀರ್ವಾದ ಪಡೆದಿದ್ದಾರೆ.

ಕಾಶಿಯಿಂದ ಬಂದಿದ್ದ ನಾಗಸಾಧು ಗಳು ಇತ್ತೀಚೆಗೆ ಡಿಕೆಶಿ ಮನೆಗೆ ಭೇಟಿ ನೀಡಿ ಸಿಎಂ ಆಗಲೆಂದು ಆಶೀರ್ವಾದ ಮಾಡಿ ದ್ದರು. ಸದಾಶಿವನಗರದಲ್ಲಿರುವ ಅವರ ನಿವಾಸಕ್ಕೆ ಶನಿವಾರ ಆಗಮಿಸಿದ್ದ 20ಕ್ಕೂ ಹೆಚ್ಚು ನಾಗ ಸಾಧುಗಳು ಡಿಕೆಶಿಗೆ ಆಶೀ ರ್ವಾದ ಮಾಡಿದರು.

ಆಶೀರ್ವಾದ ಪಡೆದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಡಿಕೆಶಿ, ನಾಗಸಾಧುಗಳು ಮನೆಯ ಬಾಗಿ ಲಿಗೆ ಬಂದಿದ್ದರು. ಅವರು, ಬಂದಾಗ ಹೋಗಿ ಎನ್ನಲು ಆಗೋದಿಲ್ಲ. ಅವರು ಬಂದು ಆಶೀರ್ವಾದ ಮಾಡಿದರು. ಯಾರಾದ್ರೂ ನಿಮ್ಮ ಮನೆಗೆ ಬಂದರೆ ನೀವೂ ಹಾಗೇ ಕಳಿಸ್ತೀರಾ? ಹಾಗೆ ಧಾರ್ಮಿಕತೆಯಲ್ಲಿ ಬಂದಿದ್ದರು. ಅವರ ಆಶೀರ್ವಾದ ಪಡೆದುಕೊಂಡೆ ಎಂದು ಹೇಳಿದರು.

## ಹೈಕಮಾಂಡ್ ಭರವಸೆಯೂ ಸಿಕ್ಕಿದೆ

### ಸೂಕ್ತ ಸಮಯದಲ್ಲಿ ಸಿಎಂ–ನನ್ನನ್ನೂ ದೆಹಲಿಗೆ ಕರೆಸಲಿದೆ: ಡಿಕೆಶಿ



**ಬೆಂಗಳೂರು:** ಕಾಂಗ್ರೆಸ್ ಹೈಕಮಾಂಡ್ ನಾಯ ಕರು ಮುಖ್ಯಮಂತ್ರಿ ಮತ್ತು ನನಗೆ ಇಬ್ಬರಿಗೂ ಏನೋ ಭರವಸೆ ನೀಡಿದೆ. ನಿಮ್ಮನ್ನು ಸೂಕ್ತ ಸಮಯದಲ್ಲಿ ಕರೆಸುತ್ತೇವೆ ಎಂದು ಇಬ್ಬರಿಗೂ ಹೇಳಿದ್ದಾರೆ. ಅವರು ಕರೆದಾಗ ಇಬ್ಬರೂ ದಿಲ್ಲಿಗೆ ಹೋಗುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ವಿಧಾನ ಮಂಡಲ ಅಧಿವೇಶನದ ಬಳಿಕ ನೀವು ಮತ್ತು ಸಿಎಂ ದೆಹಲಿಗೆ ಹೋಗಿ ಹೈಕ ಮಾಂಡ್ ನಾಯಕರನ್ನು ಭೇಟಿ ಮಾಡುವ ಎಂದು ಚರ್ಚೆ ಇದೆಯಲ್ಲ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಆ ರೀತಿ ಇದ್ದರೆ ನಿಮಗೂ ತಿಳಿಸುತ್ತೇವೆ. ನಿಮಗೆ ತಿಳಿಸದೆ ಏನೂ ಮಾಡು ವುದಿಲ್ಲ. ನಾನು ಕದ್ದುಮುಚ್ಚಿ ಹೋಗುವುದಿಲ್ಲ ಎಂದು ಹೇಳಿದರು.

ತಮ್ಮ ನಿವಾಸದ ಬಳಿ ಶನಿವಾರ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ಇ.ಡಿ ಹಾಕಿದ್ದ ಚಾರ್ಜ್ಶೀಟ್ ಕೋರ್ಟ್ನಲ್ಲಿ ತಿರಸ್ಕೃತಗೊಂ ಡಿದೆ. ಈಗ ಒಂದು ಎಫ್‌ಐಆರ್ ಬಾಕಿ ಉಳಿಸಿ ಕೊಂಡಿದೆ. ನಮ್ಮ ಮೇಲೆ ಯಾವ ರೀತಿ ದಬ್ಬಾ ಳಿಕೆ ನಡೆಯುತ್ತಿದೆ ಎಂದು ತಿಳಿಸಲು ನಾವು ಪ್ರತಿಭಟನೆ ನಡೆಸುತ್ತಿದ್ದೇವೆ ಎಂದು ಹೇಳಿದರು.

ನಾನು ಮಂಗಳವಾರ ದೆಹಲಿಗೆ ಹೋಗುತ್ತಿದ್ದೇನೆ. ಅಂದು ಕೇಂದ್ರ ಜಲಶಕ್ತಿ ಸಚಿವರು ನದಿ ಜೋಡಣೆ ವಿಚಾರವಾಗಿ ಸಭೆ ಕರೆದಿದ್ದಾರೆ. ಅಂದು ನಮ್ಮ ರಾಜ್ಯದ ಪ್ರಮುಖ ಯೋಜನೆಗಳಾದ ಮಹದಾಯಿ, ಕೃಷ್ಣ ಮೇಲ್ದಂಡೆ, ಮೇಕೆದಾಟು, ಭದ್ರಾ ಮೇಲ್ದಂಡೆ ಯೋಜನೆ ವಿಚಾರವಾಗಿ ಚರ್ಚೆ ಮಾಡುವೆ.

ಇದೇ ವೇಳೆ ಕೇಂದ್ರ ಅರಣ್ಯ ಸಚಿವರು, ನಗರಾಭಿವೃದ್ಧಿ ಸಚಿವರನ್ನು ಭೇಟಿ ಮಾಡಲು ಸಮಯ ಕೇಳಿರುವೆ. ರಾಜ್ಯದ ಹಿತಾಸಕ್ತಿ ವಿಚಾರವಾಗಿ ನಾನು ಅವರನ್ನು ಭೇಟಿ ಮಾಡಲು ತೀರ್ಮಾನಿಸಿರುವೆ. ರಾಜ್ಯದ ಸಂಸದರ ಜೊತೆಗೆ ಭೇಟಿಯಾಗುವ ಆಲೋಚನೆ ಇತ್ತು. ಇವೆಲ್ಲ ಆದ ನಂತರ ಅವರು ಬಂದರೆ ಪ್ರಧಾನ ಮಂತ್ರಿಗಳನ್ನೂ ಭೇಟಿ ಮಾಡುವೆ. ಇದೇ ಸಂದರ್ಭದಲ್ಲಿ ದೆಹಲಿ ಪೊಲೀಸರನ್ನು ಭೇಟಿ ಮಾಡುತ್ತೇನೆ ಎಂದು ತಿಳಿಸಿದರು.

### ನೋಟಿನಲ್ಲೂ ಗಾಂಧಿ ತೆಗೆಯಲಿ!

ನರೇಗಾ ಯೋಜನೆಯ ಹೆಸರು ಬದಲಾವಣೆ ವಿಚಾರವಾಗಿ ಮಾತನಾಡಿದ ಡಿ. ಕೆ.ಶಿವಕುಮಾರ್ ಅವರು, ಬಿಜೆಪಿಯವರು ಬೇಕಾದರೆ ನೋಟ್‌ನಲ್ಲಿರುವ ಗಾಂಧೀಜಿ ಫೋಟೋ ಅನ್ನೂ ತೆಗೆಯಲಿ. ಆದರೆ ಇಂದು ಮಾಡಿರುವುದು ದೊಡ್ಡ ಅನ್ಯಾಯ. ಗಾಂಧಿ ಮಹಾತ್ಮರು. ಅವರ ಹೆಸರು ತೆಗೆಯೋದು ಸರಿಯಲ್ಲ. ಇದು ಕೇಂದ್ರ ಸರ್ಕಾರ ಮಾಡಿದ ದೊಡ್ಡ ತಪ್ಪು. ಇದಕ್ಕೆ ಜನ ಬಿಜೆಪಿಗೆ ಸರಿಯಾಗಿ ಉತ್ತರ ನೀಡುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

## 2 ಸಾವಿರ ಹೊಸ ಬಸ್ ಖರೀದಿ

**ವಿಜಯಪುರ:** ಕೆಎಸ್‌ಆರ್‌ಟಿಸಿಗೆ ಎರಡು ಸಾವಿರ ಹೊಸ ಬಸ್‌ಗಳನ್ನು ಖರೀದಿಸಲಾಗುತ್ತಿದೆ. ಟೆಂಡರ್ ಪ್ರಕ್ರಿಯೆ ನಡೆದಿದೆ ಎಂದು ಸಾರಿಗೆ ಖಾತೆ ಸಚಿವ ರಾಮಲಿಂಗರೆಡ್ಡಿ ತಿಳಿಸಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗ ಮದ 102 ನೂತನ ನಗರ ಸಾರಿಗೆ ಬಸ್ ಗಳನ್ನು ಶನಿವಾರ ಲೋಕಾರ್ಪಣೆಗೊಳಿಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತ ನಾಡಿದರು. ಈ ಪೈಕಿ ಕೆಕೆಆರ್‌ಟಿಸಿಗೆ 400 ಬಸ್ ಹಾಗೂ ಕೆಎಸ್‌ಆರ್‌ಟಿಸಿಗೆ 900, ವಾಯವ್ಯ ಕರ್ನಾಟಕ ಸಾರಿಗೆಗೆ 700 ಬಸ್‌ಗಳನ್ನು ಹಂಚಿಕೆ ಮಾಡಲಾಗುವುದು ಎಂದು ಹೇಳಿದರು.

ಎರಡು ತಿಂಗಳಲ್ಲಿ 20 ನಾನ್ ಎಸಿ ಸ್ಲೀಪರ್, 20 ಎಸಿ ಸ್ಲೀಪರ್ ಹಾಗೂ 16 ಎ.ಸಿ. ಸೀಟರ್ ಸೇರಿದಂತೆ ಒಟ್ಟು 56 ಹೊಸ ವಾಹನಗಳ ಖರೀದಿ ನಡೆಯಲಿದೆ ಎಂದು ಹೇಳಿದರು.

## ಪಾಕಿಸ್ತಾನ ಮಾಜಿ ಪ್ರಧಾನಿ ಇಮ್ರಾನ್‌ಗೆ 17 ವರ್ಷ ಶಿಕ್ಷೆ

**ಇಸ್ಲಾಮಾಬಾದ್:** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಹಾಗೂ ಪತ್ನಿ ಬುಷ್ರಾ ಬಿಬಿಗೆ ತೋಷಖಾನ–2 ಭ್ರಷ್ಟಾಚಾರ ಪ್ರಕರಣದಲ್ಲಿ ಪಾಕಿಸ್ತಾನದ ವಿಶೇಷ ನ್ಯಾಯಾಲಯ ತಲಾ 17 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ಇಮ್ರಾನ್ ಖಾನ್ ಪ್ರಸ್ತುತ ಇರುವ ಅಡಿ ಯಾಲಾ ಜೈಲಿನೊಳಗೆ ನಡೆದ ವಿಚಾರಣೆಯ ಸಂದರ್ಭದಲ್ಲಿ ವಿಶೇಷ ಕೋರ್ಟ್ನ ನ್ಯಾಯಾ ಧೀಶ ಸೆಂಟ್ರಲ್ ಶಾರುಖ್ ಅರ್ಜುಮಂಡ್ ತೀರ್ಪು ಪ್ರಕಟಿಸಿದ್ದಾರೆ. ಪುಟ 2ಕ್ಕೆ

## ಹೃದಯಾಘಾತದಿಂದ ಪತ್ರಕರ್ತ ಸಾವು


**ಬೆಂಗಳೂರು:** ಹಿರಿಯ ಪತ್ರಕರ್ತ ಹಾಗೂ ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಉಪಾಧ್ಯಕ್ಷ ದೊಡ್ಡಬೊಮಯ್ಯ ಶನಿವಾರ ಹೃದಯಾಘಾತದಿಂದ ನಿಧನರಾದರು.



ಬೆಳಗಾವಿಯಲ್ಲಿ ಚಳಿಗಾಲ ಅಧಿವೇಶನ ವರದಿಗಾಗಿ ತೆರಳಿದ್ದ ಅವರು ಶನಿವಾರ ಬೆಳಗ್ಗೆ ಬೆಂಗಳೂರಿಗೆ ವಾಪಸ್ಸಾಗಿದ್ದರು. ಬಾಗಲೂರಿನಲ್ಲಿರುವ ತಮ್ಮ ಮನೆ ತಲುಪಲು ಬಿಎಂಟಿಸಿ ಬಸ್ ಹತ್ತಿದ್ದ ಸಂದರ್ಭದಲ್ಲಿ ತೀವ್ರ ಹೃದಯಾಘಾತವಾಗಿದೆ. ಸಹ ಪ್ರಯಾಣಿಕರು ಉಪಚರಿಸಿದ ಹೊರತಾಗಿಯೂ ಬಸ್‌ನಲ್ಲಿಯೇ ನಿಧನರಾದರು. ಪಾವಗಡ ತಾಲ್ಲೂಕಿನ ರೊಪ್ಪ ಗ್ರಾಮದ ದೊಡ್ಡಯ್ಯ ಮತ್ತು ಚಿಕ್ಕಮ ದಂಪತಿಯ ಪುತ್ರರಾದ ಅವರು 30 ವರ್ಷಗಳಿಂದ ಪತ್ರಕರ್ತರಾಗಿ ಕೆಲಸ ಮಾಡುತ್ತಿದ್ದರು.

## ಪೊಲೀಸ್ ರಕ್ಷಣೆ ಕೇಳಿ ಬುರುಡೆ ಚಿನ್ನಯ್ಯ ದೂರು

**ಮಂಗಳೂರು:** ಧರ್ಮಸ್ಥಳ ಷಡ್ಯಂತ್ರ ಪ್ರಕರಣದ ಪ್ರಮುಖ ಆರೋಪಿ ಮಾಸ್ಕ್ ಮ್ಯಾನ್ ಚಿನ್ನಯ್ಯ ಈಗ ಬುರುಡೆ ಗ್ಯಾಂಗ್ ವಿರುದ್ಧವೇ ತಿರುಗಿಬಿದ್ದಿದ್ದಾರೆ.



ಶಿವಮೊಗ್ಗದ ಕೇಂದ್ರ ಕಾರಾಗೃಹದಿಂದ 2 ದಿನಗಳ ಹಿಂದೆಯಷ್ಟೇ ಬಿಡುಗಡೆಯಾಗಿದ್ದ ಚಿನ್ನಯ್ಯ, ಜೀವ ರಕ್ಷಣೆ ಕೋರಿ ಬುರುಡೆ ಗ್ಯಾಂಗ್ ವಿರುದ್ಧ ದೂರು ನೀಡಿದ್ದಾರೆ. ಬುರುಡೆ ಗ್ಯಾಂಗ್‌ನ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣವರ್, ವಿಠಲ್ ಗೌಡ, ಜಯಂತ್ ಟಿ, ಸಮೀರ್ ಎಂ.ಡಿ ವಿರುದ್ಧ ಬೆಳ್ತಂಗಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ತನಗೆ ಹಾಗೂ ತನ್ನ ಪತ್ನಿಗೆ ಜೀವ ಬೆದರಿಕೆ ಹಾಕಬಹುದು.ನಮಗೆ ರಕ್ಷಣೆ ನೀಡಿ ಎಂದು ದೂರು ನೀಡಿದ್ದಾರೆ. ಬೆಳ್ತಂಗಡಿ ಪೊಲೀಸರು ಅರ್ಜಿಯನ್ನ ದಾಖಲಿಸಿಕೊಂಡಿದ್ದಾರೆ.

## ಹಾಸನದಲ್ಲಿ ಮತ್ತೆ ಸರಣಿ ಹೃದಯಾಘಾತ

**ಹಾಸನ:** ಹಠಾತ್ ಹೃದಯಾಘಾತಕ್ಕೆ ಶಿಕ್ಷಕಿ ಸೇರಿ ಇಬ್ಬರು ಬಲಿಯಾಗಿರುವ ಘಟನೆ ಹಾಸನ ಜಿಲ್ಲೆಯಲ್ಲಿ ನಡೆದಿದೆ.

ಅರಕಲಗೂಡು ತಾಲೂಕಿನ ದೊಡ್ಡಳ್ಳಿ ಗ್ರಾಮದ ಶಿಕ್ಷಕಿ ಸುಧಾಮಣಿ (58) ಸಾವನ್ನಪ್ಪಿದ್ದಾರೆ. ಇದೇ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಶಿಕ್ಷಕಿಯಾಗಿದ್ದರು. ನಿವೃತ್ತಿಯಾಗಲು ಇನ್ನೆರಡು ವರ್ಷ ಮಾತ್ರ ಬಾಕಿಯಿತ್ತು. ಶನಿವಾರ ಮುಂಜಾನೆ ಮನೆಯಲ್ಲಿ ಮಲಗಿದ್ದ ವೇಳೆ ಹಠಾತ್ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.


ಹೊಳೆನರಸೀಪುರದ ಹಳ್ಳಿಮೈಸೂರು ಹೋಬಳಿ ಗುಲಗಂಜಿಹಳ್ಳಿ ಗ್ರಾಮದ ಯುವಕ ಹಠಾತ್ ಹೃದಯಾಘಾತದಿಂದ ನಿಧನನಾಗಿದ್ದಾರೆ. ಮೃತರನ್ನು ಪರಮೇಶ್ (35) ಎಂದು ಗುರುತಿ



ಸಲಾಗಿದೆ. ಮಧ್ಯರಾತ್ರಿ 2 ಗಂಟೆ ಸಮಯದಲ್ಲಿ ಮಲಗಿದಲ್ಲಿಯೇ ಅವರಿಗೆ ಹಠಾತ್ ಹೃದಯಘಾತದಿಂದ ಸಾವನ್ನಪ್ಪಿದ್ದಾರೆ. ಹಾಸನ ಜಿಲ್ಲೆಯಲ್ಲಿ ಮತ್ತೆ ಹೃದಯಾಘಾತ ಪ್ರಕರಣಗಳು ಮರುಕಳಿಸಿವೆ. ಈ ಹಿಂದೆ ಸರಣಿ ಹೃದಯಾಘಾತದಿಂದ ಹಲವರು ಸಾವನ್ನಪ್ಪಿದ್ದರು. ಜಿಲ್ಲೆಯ ಜನರಲ್ಲಿ ಆತಂಕ ಉಂಟು ಮಾಡಿದೆ.

## ಮೈಸೂರು ಸೇರಿ ಹಲವು ಜಿಲ್ಲೆಗಳಲ್ಲಿ ತೀವ್ರ ಶೀತಗಾಳಿ

**ಬೆಂಗಳೂರು:** ರಾಜ್ಯದ ಹಲವು ಜಿಲ್ಲೆಗಳಲ್ಲಿ 2 ದಿನಗಳ ಕಾಲ ತೀವ್ರ ಶೀತ ಗಾಳಿ ಇರಲಿದೆ ಎಂದು ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ಮುನ್ನೆಚ್ಚರಿಕೆ ನೀಡಿದೆ.



ರಾಜ್ಯದ ಉತ್ತರ ಒಳನಾಡಿನ ಬೀದರ್, ಬೆಳಗಾವಿ, ಬಾಗಲಕೋಟೆ, ಕಲಬುರಗಿ, ರಾಯಚೂರು, ವಿಜಯಪುರ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಶೀತ ಗಾಳಿಯ ಪ್ರಮಾಣ ಹೆಚ್ಚಿನ ಪ್ರಮಾಣದಲ್ಲಿ ಇರಲಿದೆ ಎಂದು ಮಾಹಿತಿ ನೀಡಿದೆ.

ಧಾರವಾಡ, ಗದಗ, ಹಾವೇರಿ, ಕೊಪ್ಪಳ, ಬಳ್ಳಾರಿ, ಚಿಕ್ಕಬಳ್ಳಾಪುರ, ಚಿಕ್ಕ ಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೋಲಾರ, ಮೈಸೂರು, ಶಿವಮೊಗ್ಗ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಿದೆ. ಉತ್ತರ ಕರ್ನಾಟಕ ಹಲವು ಜಿಲ್ಲೆಗಳಲ್ಲಿ ಡಿ.20 ಹಾಗೂ ಡಿ.21ರಂದು ಪುಟ 2ಕ್ಕೆ

## 5 ಹುಲಿಗಳ ಚಲನವಲನ ಪತ್ತೆ

### ಗಡಿ ಜಿಲ್ಲೆಯಲ್ಲಿ ವನ್ಯಮೃಗಗಳ ಕಾಟಕ್ಕೆ ಕೊನೆಯಿಲ್ಲ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯಲ್ಲಿ ವನ್ಯ ಮೃಗಗಳ ಕಾಟಕ್ಕೆ ಕೊನೆ ಇಲ್ಲದಂತಾಗಿದೆ. ಕಾಡಂಚಿನ ಗ್ರಾಮಗಳಲ್ಲಿ ಕಾಣಿಸಿಕೊಳ್ಳುತ್ತಿದ್ದ ಹುಲಿಗಳು ಈಗ ತಾಲ್ಲೂಕಿನ ಹಲವು ಕಡೆ ಕಾಣಿಸಿಕೊಳ್ಳುವ ಮೂಲಕ ಆತಂಕ ಮೂಡಿಸಿವೆ.

ಚಾಮರಾಜನ ತಾಲ್ಲೂಕಿನ ನಂಜದೇವ ನಪುರ ಗ್ರಾಮದ ಕುಮಾರಸ್ವಾಮಿ ಎಂಬುವರ ಜಮೀನಿನಲ್ಲಿ ಒಂದಲ್ಲ, ಎರಡಲ್ಲ.. 5 ಹುಲಿಗಳು ಕಾಣಿಸಿ ಕೊಂಡಿವೆ. ತೋಟದ ಸಿಸಿಟಿವಿ ಯಲ್ಲಿ ಹುಲಿಗಳು ಹಾದುಹೋದ ದೃಶ್ಯ ಸೆರೆಯಾಗಿದೆ. ಜಮೀ ನಿನ ಪಕ್ಕವೇ ಆನೆಮಡುವಿನ ಕೆರೆ ಇದೆ. ಅಲ್ಲಿಂದ 5 ಹುಲಿ ಗಳು ತೆರಳುವಾಗ ಸಿಸಿಟಿವಿಯಲ್ಲಿ ದೃಶ್ಯ ರೆಕಾರ್ಡ್ ಆಗಿದೆ. ಕೆರೆ ಬಳಿ ಹುಲಿಗಳು ಪ್ರತ್ಯಕ್ಷ ವಾಗಿರುವುದನ್ನು ತಿಳಿದು ಸುತ್ತಮುತ್ತಲಿನ ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ.

ಹಿಂದೆ ನಂಜದೇವನಪುರ ಸುತ್ತಮುತ್ತಲಿನ ಗ್ರಾಮ ಗಳಲ್ಲಿ ಬಿಆರ್‌ಟಿ ಚಾಮರಾಜನಗರ ಬಫರ್ ಅರಣ್ಯ ಇಲಾಖೆ ಸಿಬ್ಬಂದಿ ಹುಲಿಗಳ ಸೆರೆಗಾಗಿ ಕೂಂಬಿಂಗ್




ನಡೆಸಿದ್ದರಾದರೂ ಸೆರೆಯಾಗಿರಲಿಲ್ಲ. ಈಗ ಮತ್ತೆ ಹುಲಿಗಳು ಕಾಣಿಸಿಕೊಂಡಿರು ವುದು ರೈತರನ್ನು ಆತಂಕಕ್ಕೀಡುಮಾ ಡಿದೆ. ಮಾಹಿತಿ ತಿಳಿದು ಅರಣ್ಯಾ ಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಗುಂಡ್ಲುಪೇಟೆ ಬಫರ್ ವಲಯ ವ್ಯಾಪ್ತಿಯ ಮೂಡು ಗೂರು ಗ್ರಾಮದಲ್ಲಿ ಪುಟ 2ಕ್ಕೆ

## ಸಭ್ಯ ಉಡುಪು ಧರಿಸುವುದು ಕಡ್ಡಾಯ

### ಸರ್ಕಾರಿ ನೌಕರರಿಗೆ ಎಚ್ಚರಿಕೆ | ರಾಜ್ಯ ಸರ್ಕಾರದಿಂದ ಸುತ್ತೋಲೆ



**ಬೆಂಗಳೂರು:** ರಾಜ್ಯ ಸರ್ಕಾರಿ ನೌಕ ರರು ಕಚೇರಿಗೆ ಬರುವಾಗ ಯೋಗ್ಯ ಸೂಕ್ತ ಬಟ್ಟೆ ಧರಿಸಿಕೊಂಡು ಬರ ದಿದ್ದರೆ ಸೂಕ್ತ ಕ್ರಮ ಎದು ರಿಸಬೇಕಾಗುತ್ತದೆ ಎಂದು ರಾಜ್ಯ ಸರ್ಕಾರ ಎಚ್ಚ ರಿಕೆ ನೀಡಿದೆ. ಈ ಬಗ್ಗೆ ರಾಜ್ಯ ಸರ್ಕಾರ ಸುತ್ತೋಲೆ ಹೊರಡಿಸಿದೆ.

ಸಿಬ್ಬಂದಿ ಆಡಳಿತ ಮತ್ತು ಸುಧಾ ರಣಾ ಇಲಾಖೆ ವಿವಿಧ ಇಲಾಖೆ ಗಳ ಮುಖ್ಯಸ್ಥರು, ಉಪ ಆಯು ಕ್ತರು, ಮುಖ್ಯಮಂತ್ರಿ ಕಚೇರಿ, ಹೆಚ್ಚುವರಿ ಮುಖ್ಯ ಕಾರ್ಯ ದರ್ಶಿ ಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿ ಗಳು, ಜಿಲ್ಲಾ ಪಂಚಾ ಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಇತರರಿಗೆ ಈ ಸಂದೇಶವನ್ನು ಕಳುಹಿಸಿದೆ. ಸರ್ಕಾರಿ ನೌಕ ರರು ಮಾಡಬೇಕಾದ ಮತ್ತು ಮಾಡಬಾರದ ಕೆಲಸಗಳನ್ನು ಪಟ್ಟಿ ಮಾಡಿದೆ.ರಾಜ್ಯ ಸರ್ಕಾರಿ ಕಚೇರಿಗಳಲ್ಲಿ ಕೆಲವು ನೌಕರರು ಅಸಭ್ಯವಾಗಿ ಬಟ್ಟೆ ಧರಿಸುತ್ತಾರೆ ಎಂದು ಸಾರ್ವಜನಿಕರು ಮತ್ತು ಕೆಲವು ಸಂಸ್ಥೆಗಳಿಂದ ಡಿಪಿಎಆರ್ ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ. ನೌಕರರಿಗೆ ಯೋಗ್ಯವಾದ ಬಟ್ಟೆಗಳನ್ನು ಧರಿಸಲು ಹೇಳಲಾಗಿದ್ದರೂ, ಅನೇಕರು ಸೂಚನೆಗಳನ್ನು ಪಾಲಿಸುತ್ತಿಲ್ಲ. ನಾವು ಅದನ್ನು ಗಂಭೀರವಾಗಿ ಪರಿಗಣಿಸಿದ್ದೇವೆ ಎಂದು ಸುತ್ತೋಲೆಯಲ್ಲಿ ತಿಳಿಸಿದೆ.

ಕಾರ್ಪೊರೇಟ್ ಕಚೇರಿಗಳಿಗಿಂತ ಭಿನ್ನವಾಗಿ, ಸರ್ಕಾರಿ ನೌಕರರಿಗೆ ಯಾವುದೇ ಡ್ರೆಸ್ ಕೋಡ್ ಇಲ್ಲ. ಆದರೂ ಕೆಲವು ಯುವ ನೌಕರರು ಕಾಲೇಜಿಗೆ ಹೋಗುವವರಂತೆ ಬಟ್ಟೆ ಧರಿಸುತ್ತಾರೆ. ಇದು ಸ್ವೀಕಾರಾರ್ಹವಲ್ಲ. ಹರಿದ ಜೀನ್ಸ್, ತೋಳಿಲ್ಲದ ಉಡುಪುಗಳು ಮತ್ತು ತುಂಬಾ ಬಿಗಿಯಾದ ಬಟ್ಟೆಗಳನ್ನು ಧರಿಸಿಕೊಂಡು ಬರುತ್ತಾರೆ ಪುಟ 2ಕ್ಕೆ

### ನಿಮ್ಮಲ್ಲಿರುವ ಹಣ ನಮೂದಿಸಿ

**ಬೆಂಗಳೂರು:** ಸರ್ಕಾರವು ಚಲನಾ ರಿಜಿಸ್ಟರ್ ಮತ್ತು ನಗದು ಘೋಷಣೆ ರಿಜಿಸ್ಟರ್ ಪರಿಚಯಿಸಿದೆ. ಸರ್ಕಾರಿ ನೌಕರರು ಕಚೇರಿಗೆ ಪ್ರವೇಶಿಸುವಾಗ ಮತ್ತು ಹೊರಡುವಾಗ ಈ ಲೆಡ್ಜರ್‌ಗಳಲ್ಲಿ ನಮೂದು ಮಾಡಬೇಕೆಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಆದರೆ ಅನೇಕರು ನಿಯಮವನ್ನು ಪಾಲಿಸುತ್ತಿಲ್ಲ. ಚಲನಾ ರಿಜಿಸ್ಟರ್ ನೌಕರರು ಪುಟ 2ಕ್ಕೆ



## ಮೊದಲ ಪುಟದಿಂದ

### ಶಾಸಕ ಬೈರತಿ ಬಸವರಾಜ್ ಎಸ್ಕೇಪ್: ಪತ್ತೆಗೆ 3 ಪೊಲೀಸ್ ತಂಡ ರಚನೆ

ಮಾಡ್ಕೊಂಡು ನಾಪತ್ತೆಯಾಗಿದ್ದಾರೆ ಅನ್ನೋದು ಗೊತ್ತಾಗಿದೆ. ಬಿಕ್ಲು ಶಿವಪ್ರಕಾಶ್ ಕೊಲೆ ಆರೋಪಿಗಳು ನಂಗೆ ಪರಿಚಯನೇ ಇಲ್ಲ ಅಂದಿದ್ದ ಬೈರತಿ ಬಸವರಾಜ್‌ಗೆ ಈಗ ಸಂಕಷ್ಟ ಎದುರಾಗಿದೆ. ಸಿಐಡಿ ಅಧಿಕಾರಿಗಳ ತನಿಖೆಯಲ್ಲಿ ಆರೋಪಿಗಳ ಜೊತೆಗೆ ಬೈರತಿ ಬಸವರಾಜ್ ಸಂಪರ್ಕದಲ್ಲಿ ಇರೋದು ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಮೈಸೂರು ಸೇರಿ ಹಲವು ಜಿಲ್ಲೆಗಳಲ್ಲಿ ತೀವ್ರ ಶೀತಗಾಳಿ

ತೀವ್ರ ಶೀತ ಗಾಳಿ ಇರಲಿದೆ. ಮುನ್ನೆಚ್ಚರಿಕಾ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಲಾಗಿದೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ಡಿ.21 ರಿಂದ ಡಿ. 25ರ ವರೆಗೆ ಶೀತ ಗಾಳಿ ಮುಂದುವರಿಯಲಿದೆ ಎಂದು ಹೇಳಿದೆ.

### 5 ಹುಲಿಗಳ ಚಲನವಲನ ಪತ್ತೆ

ಗಲೇ ಹುಲಿಯೊಂದು ದಾಳಿ ನಡೆಸಿ ಎರಡು ಹಸುಗಳನ್ನು ಬಲಿ ಪಡೆದ ಘಟನೆ ನಡೆದಿತ್ತು. ಭೀಮನಬೀಡಿನಲ್ಲಿ ಎರಡು ಹಸುಗಳ ಮೇಲೆ ಹುಲಿ ದಾಳಿ ನಡೆಸಿ ಎರಡು ಹಸುಗಳ ಕಾಲಿಗೆ ತೀವ್ರವಾಗಿ ಗಾಯಗೊಳಿಸಿರುವ ಘಟನೆ ಶುಕ್ರವಾರ ನಡೆದಿದೆ.

### ಪಾಕಿಸ್ತಾನ ಮಾಜಿ ಪ್ರಧಾನಿ ಇಮ್ರಾನ್‌ಗೆ 17 ವರ್ಷ ಶಿಕ್ಷೆ

ರಾಜ್ಯದ ಉಡುಗೊರೆಗಳಿಗೆ ಸಂಬಂಧಿಸಿದಂತೆ ಅಧಿಕಾರ ದುರುಪಯೋಗ ಮತ್ತು ನಂಬಿಕೆ ದ್ರೋಹ ಆರೋಪಗಳ ಅಡಿಯಲ್ಲಿ ತಪ್ಪಿತಸ್ಥರೆಂದು ಕೋರ್ಟ್ ಆದೇಶಿಸಿದೆ.


ಇಮ್ರಾನ್ ಖಾನ್ ಮತ್ತು ಪತ್ನಿಗೆ ಪಾಕಿಸ್ತಾನ ದಂಡ ಸಂಹಿತೆ 34 ಮತ್ತು 409ರ ಅಡಿಯಲ್ಲಿ 10 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿತು. ಭ್ರಷ್ಟಾಚಾರ ತಡೆ ಕಾಯ್ದೆ ಸೆಕ್ಷನ್ 5(2) ಅಡಿಯಲ್ಲಿ ಹೆಚ್ಚುವರಿ 7 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಯಿತು. ಇದೇ ಕಾನೂನು ನಿಬಂಧನೆಗಳ ಅಡಿಯಲ್ಲಿ ಬುಷ್ರಾ ಬಿಬಿಗೂ 17 ವರ್ಷ ಜೈಲು ಶಿಕ್ಷೆ ವಿಧಿಸಲಾಯಿತು. ಇದರೊಂದಿಗೆ ಇಬ್ಬರಿಗೂ ತಲಾ 16.4 ಮಿಲಿಯನ್ ಪಾಕಿಸ್ತಾನಿ ರೂಪಾಯಿ (52.39 ಲಕ್ಷ ರೂಪಾಯಿ) ದಂಡ ವಿಧಿಸಲಾಗಿದೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ರಾಮಲಲ್ಲಾ ಉಚಿತ ದರ್ಶನಕ್ಕೆ ಗಣಪತಿ ಶ್ರೀ ಕರೆ

ಮೈಸೂರು: ಉತ್ತರಪ್ರದೇಶದ ಪ್ರಮುಖ ಧಾರ್ಮಿಕ ಕೇಂದ್ರ ಅಯೋಧ್ಯೆಯಲ್ಲಿರುವ ಶ್ರೀರಾಮ ಮಂದಿರ ಹಾಗೂ ಅಲ್ಲಿನ 'ಬಾಲರಾಮ'ನ ವಿಗ್ರಹವನ್ನು ಕಣ್ತುಂಬಿಕೊಳ್ಳಲು ಬಯಸುವವರಿಗೆ ನಗರದ ಅವಧೂತ ದತ್ತಪೀಠದ ಪೀಠಾಧಿಪತಿ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಸುವರ್ಣಾವಕಾಶ ಕಲ್ಪಿಸಿದ್ದಾರೆ

ನಗರದ ಅವಧೂತ ದತ್ತಪೀಠದ ಪೀಠಾಧಿಪತಿ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ ನೇತೃತ್ವದಲ್ಲಿ 'ರಾಮಲಲ್ಲಾ ದರ್ಶನ ಯಾತ್ರೆ' ಆಯೋಜಿಸಲಾಗಿದೆ. ಡಿ.22ರಿಂದ ಡಿ.27ರವರೆಗೆ ಈ ಯಾತ್ರೆ ಆಯೋಜಿಸಲಾಗಿದ್ದು, ಅವಧೂತ ದತ್ತ ಪೀಠದಲ್ಲಿ ನೋಂದಾಯಿಸಿಕೊಂಡವರಿಗೆ ಮಾತ್ರ ಅವಕಾಶ ಇದೆ. ಒಂದು ಸಾವಿರ ಭಕ್ತರನ್ನು ರೈಲಿನಲ್ಲಿ ಉಚಿತವಾಗಿ ಕರೆದುಕೊಂಡು ಹೋಗಿ, ವಾಪಸ್ ತಂದುಬಿಡುವ ಕಾರ್ಯಕ್ರಮ ಇದಾಗಿದೆ. ಅಯೋಧ್ಯೆಯ ಶ್ರೀರಾಮಮಂದಿರವನ್ನು ನೋಡಬೇಕು, ಅಲ್ಲಿ ನಮನ ಸಲ್ಲಿಸಬೇಕು ಎಂಬ ಬಯಕೆ ಭಕ್ತರಿಗೆ ಇರುತ್ತದೆ. ಆದರೆ, ದೂರದ ಆ ತಾಣಕ್ಕೆ ಹೋಗಿಬರುವುದಕ್ಕೆ ಆರ್ಥಿಕವಾಗಿ ಅನುಕೂಲ ಇರುವುದಿಲ್ಲ. ಇದರಿಂದಾಗಿ ಬೇಸರಕ್ಕೆ ಒಳಗಾಗುವ 'ನಿಜವಾದ ಭಕ್ತರಿಗೆ ಮಾತ್ರ ಯಾತ್ರೆ ಕರೆದೊಯ್ಯಲು ನಿರ್ಧರಿಸಲಾಗಿದೆ. ಗಣಪತಿ, ಸಚ್ಚಿದಾನಂದ ಸ್ವಾಮೀಜಿಯವರ ನೇತೃತ್ವದಲ್ಲಿ ಎಲ್ಲ ಸಿದ್ಧತೆಯನ್ನೂ ನಡೆಸಲಾಗಿದ್ದು ಇದಕ್ಕಾಗಿ ಪ್ರತ್ಯೇಕ ರೈಲಿನ ವ್ಯವಸ್ಥೆಯನ್ನೇ ಮಾಡಿಕೊಳ್ಳಲಾಗಿದೆ. ನೋಂದಾಯಿತ ಭಕ್ತರು ಅದರಲ್ಲಿ ಪ್ರಯಾಣಿಸಬಹುದಾಗಿದೆ.



ಈ ಕುರಿತು ಪ್ರತಿಕ್ರಿಯಿಸಿರುವ ಗಣಪತಿ ಸಚ್ಚಿದಾ ನಂದ ಸ್ವಾಮೀಜಿ, 'ಸಾವಿರ ಮಂದಿ ದತ್ತಭಕ್ತರು ಹಾಗೂ ಶ್ರೀರಾಮನ ಭಕ್ತರನ್ನು ಅಯೋಧ್ಯೆಗೆ ಕರೆದೊಯ್ಯಲಾಗುತ್ತಿದೆ. ಮೈಸೂರಿನವರೇ ಆದ ಶಿಲ್ಪಿ ಅರುಣ್ ಯೋಗಿರಾಜ್ ಅವರು ಕೆತ್ತಿ ಪ್ರತಿಷ್ಠಾಪನೆ ಮಾಡಲಾಗಿರುವ ರಾಮಲಲ್ಲಾ (ಬಾಲರಾಮನಮೂರ್ತಿ) ನೋಡಬೇಕು ಎಂದು ಬಯಸುವವರಿಗೆ ನೆರವಾಗುತ್ತಿದ್ದೇವೆ. ಡಿ.22ರಿಂದ 27ರವರೆಗೆ ಯಾತ್ರೆ ನಡೆಯಲಿದೆ. ಡಿ.24ರಿಂದ ವಿವಿಧ ಧಾರ್ಮಿಕ ಕಾರ್ಯಕ್ರಮವನ್ನೂ ಹಮ್ಮಿಕೊಳ್ಳಲಾಗಿದೆ' ಎಂದು ತಿಳಿಸಿದರು.

ಅಲ್ಲಿ ರಾಮಪರಿವಾರ ಪ್ರತಿಷ್ಠೆ, ರಾಮತಾರಕ ಹೋಮ ನಡೆಸಲಾಗುವುದು. ಮೈಸೂರಿನಿಂದ ತೆರಳುವ ಭಕ್ತರ ವಾಸ್ತವ್ಯಕ್ಕೆಂದು 300 ಕೊಠಡಿಗಳನ್ನು ಪಡೆದುಕೊಂಡಿದ್ದೇವೆ. ಊಟ, ಉಪಾಹಾರವನ್ನೂ ಉಚಿತವಾಗಿ ಒದಗಿಸಲಾಗುವುದು. ಚಳಿಯ ಕಾರಣದಿಂದಾಗಿ ಹೊದಿಕೆಯನ್ನೂ ನೀಡಲಾಗುವುದು. ಶ್ರೀರಾಮಮಂದಿರದಲ್ಲಿ ಸುಗಮವಾಗಿ ರಾಮಲಲ್ಲಾ ದರ್ಶನಕ್ಕಾಗಿಯೂ ಅನುಮತಿ ಮೊದಲಾದ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. 'ಬೇರೆ ಬೇರೆ ರಾಜ್ಯಗಳ ದತ್ತ ಮತ್ತು ಶ್ರೀರಾಮನ ಭಕ್ತರು ಕೂಡ ಬಂದು ನಮ್ಮನ್ನು ಕಾರ್ಯಕ್ರಮದಲ್ಲಿ ಸೇರಿಕೊಳ್ಳಲಿದ್ದಾರೆ.ಅಮೆರಿಕ, ಜರ್ಮನಿ ಮೊದಲಾದ ಕಡೆಗಳ ಭಕ್ತರು ಬರುತ್ತಿದ್ದಾರೆ. ಇನ್ಮುಂದೆ, ಪ್ರತಿ ವರ್ಷ ಸಾವಿರ ಮಂದಿಗೆ ಅಯೋಧ್ಯೆಯಾತ್ರೆ-ಯನ್ನು ಹಮ್ಮಿಕೊಳ್ಳುವ ಉದ್ದೇಶವಿದೆ' ಎಂದು ತಮ್ಮ ಯೋಜನೆ ಬಗ್ಗೆ ತಿಳಿಸಿದರು.

ನಾನು ಇದೇ ಮೊದಲ ಬಾರಿಗೆ ಅಷ್ಟು ದೂರ ರೈಲಿನಲ್ಲಿ ಹೋಗುತ್ತಿದ್ದೇನೆ. ಚೆನ್ನೈ, ಬೆಂಗಳೂರಿಗೆ ರೈಲಿನಲ್ಲಿ ಹೋಗಿದ್ದೆ. ಈಗ ಭಕ್ತರೊಂದಿಗೆ ರೈಲಿನಲ್ಲಿ ಅಯೋಧ್ಯೆಗೆ ಹೋಗುತ್ತಿದ್ದೇನೆ. ರೈಲ್ವೆ ಇಲಾಖೆಯಿಂದ ನನಗೆಂದೇ ಪ್ರತ್ಯೇಕ ಬೋಗಿಯನ್ನು ವಿಶೇಷವಾದ ಸೌಲಭ್ಯಗಳೊಂದಿಗೆ ವ್ಯವಸ್ಥೆ ಮಾಡಿಕೊಟ್ಟಿದ್ದಾರೆ. ಅಧಿಕಾರಿಗಳು ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರ ಸಹಕಾರದಿಂದ ಇದು ಸಾಧ್ಯವಾಗಿದೆ. ಒಂದು ಕಡೆಯಿಂದ ಎರಡೂವರೆ ದಿನಗಳ ಪ್ರಯಾಣ ಇರಲಿದೆ' ಎಂದು ತಿಳಿಸಿದರು.

# ಜಿಲ್ಲೆಯಲ್ಲಿ ತಾಯಿ ಮರಣ ಪ್ರಮಾಣ ಗಣನೀಯ ಇಳಿಕೆ

## ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಸಿರಾಜ್ ಮಾಹಿತಿ

ಮೈಸೂರು: ಜನವರಿ ಯಿಂದ ಡಿಸೆಂಬರ್-2024ರವರೆಗೆ 28 ತಾಯಿ ಮರಣ ಎಂಎಂಆರ್ ರೇಟ್ 76.50 ಇದ್ದು, ಜನವರಿ-2025 ರಿಂದ ಡಿಸೆಂಬರ್-2025 ರವರೆಗೆ 11 ತಾಯಿ ಮರಣ ಹೊಂದಿದ್ದು, ಎಂ.ಎಂ.ಆರ್ ರೇಟ್ 30.20 ಗೆ ಇಳಿಕೆಯಾಗಿದೆ ಎಂದು ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಸಿರಾಜ್ ತಿಳಿಸಿದರು.



ತಾಯಿ ಮರಣ ಪ್ರಮಾಣವನ್ನು ಕಡಿಮೆ ಮಾಡಿ ಶೂನ್ಯಕ್ಕೆ ತರಲು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸುತ್ತಿದೆ.

ತಾಯಿಯ ಮರಣ ಎಂದರೆ ಗರ್ಭಧಾರಣೆ, ಹರಿಗೆ ಅಥವಾ ಹೆರಿಗೆಯ ನಂತರದ ಸಮಯದಲ್ಲಿ ಸಂಭವಿಸುವ ತಾಯಿಯ ಸಾವು. ಇದು ಗರ್ಭಧಾರಣೆಗೆ ಸಂಬಂಧಿತ ತೊಡಕುಗಳಿಂದ ಉಂಟಾಗುತ್ತದೆ. ತಾಯಿ ಮರಣಕ್ಕೆ ಮುಖ್ಯ ಕಾರಣಗಳಲ್ಲಿ ತೀವ್ರ ರಕ್ತಸ್ರಾವ, ಸೋಂಕುಗಳು, ಅಧಿಕ ರಕ್ತದೊತ್ತಡ, ಅಸುರಕ್ಷಿತ ಗರ್ಭಪಾತ ಮತ್ತು ಹೃದಯ ಸಂಬಂಧಿ ರೋಗಗಳು ಸೇರಿವೆ. ತಾಯಿ ಮರಣ ಪ್ರಮಾಣ ಹೆಚ್ಚಾದಲ್ಲಿ ಇದು ಕುಟುಂಬ ಹಾಗೂ ಸಮಾಜದ ಮೇಲೆ ಆರ್ಥಿಕ ಮತ್ತು ಭಾವನಾತ್ಮಕ ದುಷ್ಪರಿಣಾಮಗಳನ್ನು ಉಂಟಾಗುತ್ತದೆ.

ಜಿಲ್ಲೆಯಲ್ಲಿ 2024ರ ವರ್ಷದಲ್ಲಿ ಒಟ್ಟು 28 ತಾಯಿ ಮರಣ ಸಂಭವಿಸಿದ್ದು, 2025 ರ ವರ್ಷದಲ್ಲಿ ಒಟ್ಟು 12 ತಾಯಿ ಮರಣಗಳು ಸಂಭವಿಸಿದ್ದು ತಾಯಿ ಮರಣವನ್ನು ಗಣನೀಯ ಪ್ರಮಾಣದಲ್ಲಿ ತಡೆಗಟ್ಟುವಲ್ಲಿ ಬಹಳಷ್ಟು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ತಾಯಿ ಕಾರ್ಡ್ ನ ಮಾಹಿತಿ ಅನುಸಾರ ಸಮಯ ಮತ್ತು ಸಂದರ್ಭದನ್ವಯ ರಕ್ತಹೀನತೆ ಮತ್ತು ಕ್ಯಾಲ್ಸಿಯಂ ಮಾತ್ರೆಗಳನ್ನು ಸಂಪರ್ಕವಾಗಿ ಗರ್ಭಿಣಿ ಮಹಿಳೆಯರಿಗೆ ಒದಗಿಸುವುದು. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಸಮ್ಮುಖದಲ್ಲಿ ಜಿಲ್ಲಾಮಟ್ಟದ ತಾಯಿ ಮರಣ ಪರಿಶೋಧನಾ ಸಮಿತಿಸಭೆಗಳ ಆಯೋಜನೆ ಮತ್ತು ತಾಯಿ ಮರಣ ಪರಿಶೋಧನಾ ಸಮಿತಿಯ ನಿರ್ದೇಶನಗಳ ಪಾಲನೆ ಹಾಗೂ ಈ ಬಗ್ಗೆ ಕ್ಷೇತ್ರಮಟ್ಟದಲ್ಲಿ ಅನುಷ್ಠಾನ ಮಾಡುತ್ತಿರುವುದು.

ಕೆ.ಪಿ.ಎಂ.ಇ.ಎ ಪ್ರಾಧಿಕಾರದಡಿಯಲ್ಲಿ ಬರುವ ಎಲ್ಲಾ ಖಾಸಗಿ ಆಸ್ಪತ್ರೆಗಳನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ ಹಾಗೂ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಪ್ರಾಧಿಕಾರದ ಸಭೆಗಳಲ್ಲಿ ತಾಯಿ ಆರೋಗ್ಯ ಸಂಪರ್ಕವಾಗಿ ನಿರ್ವಹಣೆ ಮಾಡುವಲ್ಲಿ ನ್ಯೂನತೆಗಳು ಕಂಡು ಬಂದ ಖಾಸಗಿ ಆಸ್ಪತ್ರೆಗಳಿಗೆ ದಂಡವನ್ನು ವಿಧಿಸಲಾಗಿದೆ. ತಾಯಿ ಮರಣ ಸಂಭವಿಸಿದಂತೆ ನಿಗದಿತ ಸಮಯದೊಳಗೆ ಸಮುದಾಯ ಮತ್ತು ಸಾಂಸ್ಥಿಕ ಪರಿಶೋಧನೆಗಳನ್ನುನಿರ್ವಹಿಸುತ್ತಿರುವುದು ಹಾಗೂ ಈ ಬಗೆ ಕಂಡು ಬಂದ ನ್ಯೂನತೆಗಳ ಕುರಿತು ಕ್ಷೇತ್ರ ಮಟ್ಟದಲ್ಲಿ ಮಾಹಿತಿ ನೀಡುತ್ತಿರುವುದು. ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಯೋಜನೆಯಡಿಯಲ್ಲಿ ತಾಯಿ ಕಾರ್ಡ್ ಅನುಸಾರ ಸಾಮಾನ್ಯ ಗರ್ಭಿಣಿ ಮತ್ತು ಗರ್ಭಿಣಿಯ ಆರೋಗ್ಯ ತಪಾಸಣೆ. ತುರ್ತು ಹೆರಿಗೆ ನ ನಿರ್ವಹಣೆಗೆ ಹಾಗೂ ಹೆಚ್ಆರ್.ಪಿ ಪ್ರಕರಣಗಳಿಗೆ ಸಂಬಂಧಿಸಿದಂತೆ ವಾಟ್ಸಾಫ್ ಗ್ರೂಫ್ ಗಳನ್ನು ಸೃಜಿಸಿ, ಆಮೂಲಕ ಮಾಹಿತಿಯನ್ನು ರವಾನಿಸಲಾಗುತ್ತಿದೆ. ಗರ್ಭಾವಸ್ಥೆಯ ಕನಿಷ್ಠ ಮೂರು ವರ್ಷಗಳ ಅಂತರದ ಬಗ್ಗೆ ಸಮುದಾಯ ಮಟ್ಟದಲ್ಲಿ ಅರಿವು ಮೂಡಿಸುತ್ತಿರುವುದು ಇಳಿಕೆಗೆ ಕಾರಣವಾಗಿದೆ ಎಂದರು.



**"ಜಿಲ್ಲಾ ಆಡಳಿತವು ಗರ್ಭಿಣಿ-ತಾಯಂದಿರ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತದೆ. ಸರ್ಕಾರಿ ಮತ್ತು ಖಾಸಗಿ ಆರೋಗ್ಯ ಕ್ಷೇತ್ರಗಳ ಸಮನ್ವಯತೆಯಿಂದ ಹಾಗೂ ವಿನೂತನ ಕಾರ್ಯವಿಧಾನಗಳ ಮೂಲಕ, ತಪ್ಪಿಸಬಹುದಾದ ತಾಯಂದಿರ ಮರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲಾ ಮಹಿಳೆಯರಿಗೆ ಸುರಕ್ಷಿತ ತಾಯಿ ನದ ಆರೋಗ್ಯ ಸೇವೆಯನ್ನು ನೀಡುವಲ್ಲಿ ನಾವು ಬದ್ಧರಾಗಿದ್ದೇವೆ."**

**-ಲಕ್ಷ್ಮಿಕಾಂತರೆಡ್ಡಿ ಜಿಲ್ಲಾಧಿಕಾರಿ**

### ಡಿ.22ರಂದು ಕಾರ್ಮಿಕ ವಿರೋಧಿ ಧೋರಣೆ ಖಂಡಿಸಿ ಜಾಥಾ

ಮೈಸೂರು: ಭಾರತ ಕಮ್ಯುನಿಸ್ಟ್ ಪಕ್ಷಕ್ಕೆ ನೂರು ವರ್ಷ ತುಂಬಿದ ಹಿನ್ನೆಲೆಯಲ್ಲಿ ಹಾಗೂ ವಿವಿಧ ಸರ್ಕಾರದ ಕಾರ್ಮಿಕ ವಿರೋಧಿ ಧೋರಣೆ ಖಂಡಿಸಿ ಹಮ್ಮಿಕೊಂಡಿರುವ ಸಮತಾ ರಾಜ್ಯದ ಕನಸುಗಳೊಂದಿಗೆ ಶ್ರಮ ಶಕ್ತಿಯ ಸಂಘರ್ಷದ ಶತಮಾನದ ಪಯಣ ಶೀರ್ಷಿಕೆಯ ಜಾಥಾ ಡಿ.22 ರಂದು ಮೈಸೂರಿಗೆ ಆಗಮಿಸಲಿದೆ ಎಂದು ಸಹ ಕಾರ್ಯದರ್ಶಿ ಕೆ.ಜಿ.ಸೋಮಶೇಖರ್ ಮಾಹಿತಿ ನೀಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಮಧ್ಯಾಹ್ನ 3ಕ್ಕೆ ಹಿನಕಲ್ ಫ್ಲೆಓವರ್ ಬಳಿ ಜಾಥಾವನ್ನು ಬರಮಾಡಿಕೊಳ್ಳಲಾಗುವುದು. ಇದಕ್ಕೆ ಡಿ. 26 ರಂದು ಕೋಲಾರದ ಕೆಜಿಎಫ್ ನಗರದಲ್ಲಿ ಚಾಲನೆ ದೊರೆತಿದೆ. ಜಾಥಾದಲ್ಲಿರುವ ಸುಮಾರು 100 ಬೈಕ್ ಸವಾರರು ಜೆ.ಕೆ. ಮೈದಾನ ತಲುಪಲಿದ್ದಾರೆ. ಅಲ್ಲಿಂದ ಕಾಲ್ನಡಿಗೆ ಮೂಲಕ ಗಾಂಧಿ ವೃತ್ತ ತಲುಪಿ ಅಲ್ಲಿ ಸಂಜೆ 4 ರಿಂದ 6 ರವರೆಗೆ ಬಹಿರಂಗ ಸಭೆ ನಡೆಯಲಿದೆ ಎಂದು ತಿಳಿಸಿದರು.ಬ್ರಿಟಿಷ್ ಸಾಮ್ರಾಜ್ಯ ಶಾಹಿಗಳ ವಿರುದ್ಧ ಮಾತ್ರವಲ್ಲ, ಸ್ವತಂತ್ರ ಭಾರತದಲ್ಲಿಯೂ ಬಂಡವಾಳ ಶಾಹಿ, ಕಾರ್ಪೊರೇಟ್- ಕೋಮುವಾದಿ ಶಕ್ತಿಗಳ ವಿರುದ್ಧ ಜನಸಾಮಾನ್ಯರ ಧ್ವನಿಯಾಗಿ ಸಿಪಿಐ ಹೋರಾಟ ನಡೆಸುತ್ತಿದೆ. ಈಗ ನೂರು ವರ್ಷ ತುಂಬಿದ್ದು, ಅದರ ಶತಮಾನೋತ್ಸವ ಕಾರ್ಯಕ್ರಮ ಅಂಗವಾಗಿ ಈ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು. ಎಚ್.ಬಿ.ರಾಮಕೃಷ್ಣ, ಜೆ.ಶಿವಣ್ಣ, ಬಸವರಾಜು, ಶಿವಮಾದು ಇದ್ದರು.



### ನಾಟಕ ಪ್ರದರ್ಶನ: ಕಾರಣಾಂತರಗಳಿಂದ ಮುಂದೂಡಿಕೆ

ಮೈಸೂರು: ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದವತಿಯಿಂದ 2025 ರ ದಸರಾ ವಸ್ತು ಪ್ರದರ್ಶನ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಉಪಸಮಿತಿ ವತಿಯಿಂದ ಗಾನಕೋಗಿಲೆ ಪಿ.ಕಾಳಿಂಗರಾವ್ ರಂಗಮಂಟಪದಲ್ಲಿ ಡಿಸೆಂಬರ್ 20 ರಂದು ಸಂಜೆ 5 ರಿಂದ 7 ರವರೆಗೆ ಕಲಾವಿದರುಗಳಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮಗಳನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ. ಸದರಿ ಕಾರ್ಯಕ್ರಮವನ್ನು ಡಿಸೆಂಬರ್ 22 ರಂದು ಸಂಜೆ 5.30 ಗಂಟೆಯಿಂದ 7.30 ಗಂಟೆಯವರೆಗೆ ಬದಲಾಯಿಸಲಾಗಿದೆ.

**ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು**
ಝಾನ್ಸಿಲಕ್ಷ್ಮೀಬಾಯಿ ರಸ್ತೆ, ಮೈಸೂರು - 570 005
ಸಂಖ್ಯೆ:ಮೈಅಪ್ರಾ:ನಯೋಶಾ:ಭೂಉಬ:ನಯೋ-1/2025-26 ದಿನಾಂಕ :19.12.2025

**ಸಾರ್ವಜನಿಕ ಪ್ರಕಟಣೆ**

**ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ14(ಎ)ರನ್ವಯ**

ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಕೆ. ಹೆಮ್ಮನಹಳ್ಳಿ ಗ್ರಾಮದ ಸ.ನಂ.281/3, 281/4, 282/5, 282/2, 283/5 & 283/2 ಒಟ್ಟು 03ಎಕರೆ 33.08ಗುಂಟೆ ವಿಸ್ತೀರ್ಣದ ಜಮೀನನ್ನು ಕೆ.ಟಿ.ಸಿ.ಪಿ. ಕಾಯ್ದೆ 1961ರ ಪ್ರಕರಣ 14 (ಎ) ರನ್ವಯ ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂ ಉಪಯೋಗ ಬದಲಾವಣೆ ಮಾಡುವಂತೆ ಶ್ರೀ ಗಿರಿಧರ್.ಎನ್.ಸಿ ಮತ್ತು ಇತರರು ಇವರು ಅರ್ಜಿ ಸಲ್ಲಿಸಿರುತ್ತಾರೆ. ಭೂ ಉಪಯೋಗ ಬದಲಾವಣೆಯಿಂದ **"ಈ ಜಮೀನುಗಳಲ್ಲಿ ವಿನ್ಯಾಸ ಅಭಿವೃದ್ಧಿಪಡಿಸುವುದರಿಂದ ಬಡವರು ಮತ್ತು ಮಧ್ಯಮ ವರ್ಗದವರಿಗೆ ಹಾಗೂ ಸಾರ್ವಜನಿಕರಿಗೆ ಯೋಗ್ಯ ಬೆಲೆಯಲ್ಲಿ ನಿವೇಶನಗಳು ಲಭ್ಯವಾಗುತ್ತವೆ. ವಿನ್ಯಾಸ ಅಭಿವೃದ್ಧಿ ಕಾಮಗಾರಿಗಳು ನಡೆಯುವ ಸಂಧರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಉದ್ಯೋಗ ದೊರಕುತ್ತದೆ ಮತ್ತು ಈ ವಿನ್ಯಾಸ ಅಭಿವೃದ್ಧಿಯಿಂದ ಸುತ್ತಲಿನ ಪ್ರದೇಶದ ಅಭಿವೃದ್ಧಿ ಹೊಂದುತ್ತದೆ"** ಎಂದು ಸಾರ್ವಜನಿಕ ಹಿತಾಸಕ್ತಿ ಕುರಿತು ಮನವಿಯಲ್ಲಿ ತಿಳಿಸಿರುತ್ತಾರೆ. ಸದರಿ ಜಮೀನಿನ ಭೂ ಉಪಯೋಗದ ಬದಲಾವಣೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಈ ಪ್ರಕಟಣೆಯ ಪತ್ರಿಕೆಯಲ್ಲಿ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ನಗರ ಯೋಜಕ ಸದಸ್ಯರು, ಅಭಿವೃದ್ಧಿ ಪ್ರಾಧಿಕಾರ, ಮೈಸೂರು-570005 ಇವರಿಗೆ ಮುದ್ದಾಂ ಅಥವಾ ನೋಂದಾಯಿತ ಅಂಚೆ ಮೂಲಕ ತಲುಪಿಸಬಹುದಾಗಿದೆ.

KEY PLAN




ಸಹಿ/-
ನಗರ ಯೋಜಕ ಸದಸ್ಯರು,
ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು.

ವಾಸಾಸಂಇ/ಮೈಸೂರು/1407/ಶಿರಡಿಸಾಯಿ/2025-26

# ಗುಣಮಟ್ಟದ ಆಹಾರ ಅಗತ್ಯ ಸೇವಿಸಿ

ಮೈಸೂರು: ಜೀವನಕ್ಕೆ ಆಹಾರ ಪದ್ಧತಿ ಅತಿ ಮುಖ್ಯ. ಆಹಾರ ಮತ್ತು ಆರೋಗ್ಯ ಉತ್ತಮ ಹಾಗೂ ಗುಣಮಟ್ಟವಾಗಿದ್ದರೆ ಮಾತ್ರ ಆರೋಗ್ಯರಕ ಜೀವನ. ಆದ್ದರಿಂದ ಆಹಾರದ ಗುಣಮಟ್ಟ ಅತೀ ಅವಶ್ಯಕ ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ತಿಳಿಸಿದರು.

ಮಾನಸ ಗಂಗೋತ್ರಿಯ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದಲ್ಲಿ ರಾಷ್ಟ್ರೀಯ ಉನ್ನತ ಶಿಕ್ಷಣ ಅಭಿಯಾನ 2.0 ಮತ್ತು ಮಾಳವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿರುವ ಏಳು ದಿನಗಳ ಶಿಕ್ಷಕರ ಸುಧಾರಣಾ ಕಾರ್ಯಾಗಾರ 'ಸ್ಥಿತಿ ಸ್ಥಾಪಕತ್ವ ಮತ್ತು ಜವಬ್ದಾರಿಯುತ ಯುವಕರನ್ನು ನಿರ್ಮಿಸುವುದು: 'ಆರೋಗ್ಯಕರ ಮನಸ್ಸು ಮತ್ತು ಸಂಬಂಧಕ್ಕಾಗಿ ಜೀವನ ಕೌಶಲ್ಯಗಳು' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಒಂದು ಬಾರಿ ಆರೋಗ್ಯ ಹದಗೆಟ್ಟರೆ ಅದನ್ನು ಸರಿಪಡಿಸಿಕೊಳ್ಳುವುದು ಕಷ್ಟಕರ. ಈ ದೃಷ್ಟಿಯಿಂದ ಆರೋಗ್ಯದ ಕಾಳಜಿ ವಹಿಸಬೇಕು. ಆಹಾರ ನಮ್ಮ ನಾಲಿಗೆಗೆ ರುಚಿಸುವುದಕ್ಕಲ್ಲ, ಆರೋಗ್ಯಕರ ಬದುಕಿಗಾಗಿ. ಇಂದು ಕರಿದ ಆಹಾರ ಪದಾರ್ಥಗಳಿಗೆ ಹೆಚ್ಚು ಮುಗಿ ಬೀಳುತ್ತಾರೆ. ಅದು



ಆರೋಗ್ಯಕ್ಕೆ ವಿಷಕಾರಿ ಎಂದು ಅವರು ಎಚ್ಚರಿಸಿದರು.

ಯುವಕರು, ಮಕ್ಕಳು ಊಟದ ಸಮಯದಲ್ಲೂ ಮೊಬೈಲ್ ಬಳಸುತ್ತಾ, ಆಹಾರ ಸೇವಿಸುವ ಚಾಳಿ ಬೆಳೆಸಿಕೊಂಡಿದ್ದಾರೆ. ಇದು ಅಪಾಯಕಾರಿ. ಮೊಬೈಲ್ ಕಡಿಮೆ ಬಳಸಬೇಕಿದೆ. ಅದು ನಮ್ಮನ್ನು ಗೊಂದಲಕ್ಕಿಡಾಗಿಸುತ್ತದೆ. ಇದರಿಂದ ಯುವಕರು ಗುರಿ ಕಡೆಗಿನ ಹಾದಿ ತಪ್ಪುತ್ತಿದ್ದಾರೆ. ಯುವಕರಲ್ಲಿ ಇಂದು ಶಿಸ್ತು, ಬದ್ಧತೆ, ಸಮರ್ಪಣೆಯ ಮನೋಭಾವ ಬೆಳೆಯಬೇಕಿದೆ ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಕಾಲೇಜು ಶಿಕ್ಷಣ ವಿಭಾಗ ಬೆಂಗಳೂರು ನಿರ್ದೇಶಕಿ ಪ್ರೊ.ಜಿ.ಶೋಭಾ, ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಎಂ.ಕೋಮಲಾ, ಸಂಶೋಧಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ನಿಮ್ಮಲ್ಲಿರುವ ಹಣ ನಮೂದಿಸಿ

ಕಚೇರಿಯಲ್ಲಿ ಎಷ್ಟು ಹೊತ್ತು ಇರುತ್ತಾರೆ. ಹೇಗೆ ಕೆಲಸ ಮಾಡುತ್ತಾರೆ ಎಂದು ಪತ್ತೆ ಹಚ್ಚುವುದಾಗಿರುತ್ತದೆ. ಉದ್ಯೋಗಿ ಬೆಳಗ್ಗೆ 10 ಗಂಟೆ ಒಳಗಾಗಿ ಕಚೇರಿಯಲ್ಲಿರಬೇಕು. ಕೆಲಸದ ಸಮಯ ಮುಗಿಯುವವರೆಗೆ ತಮ್ಮ ಸೀಟಿನಲ್ಲಿರಬೇಕು. ಅಧಿಕೃತ ಕರ್ತವ್ಯದ ಮೇಲೆ ಹೋಗುತ್ತಿದ್ದರೆ ಅದನ್ನು ರಿಜಿಸ್ಟರ್‌ನಲ್ಲಿ ನಮೂದಿಸಬೇಕು ಎಂದು ಸೂಚಿಸಲಾಗಿದೆ. ನಗದು ಘೋಷಣೆ ರಿಜಿಸ್ಟರ್‌ನಲ್ಲಿ, ಕಚೇರಿಗೆ ಪ್ರವೇಶಿಸುವ ಮೊದಲು ಮತ್ತು ನಿರ್ಗಮಿಸುವಾಗ ತಮ್ಮ ಪರ್ಸ್ ಅಥವಾ ಜೇಬಿನಲ್ಲಿರುವ ಮೊತ್ತವನ್ನು ನಮೂದಿಸಬೇಕು ಎಂದು ಸೂಚಿಸಲಾಗಿದೆ.

### ಸಭ್ಯ ಉಡುಪು ಧರಿಸುವುದು ಕಡ್ಡಾಯ

ಎಂದು ಅಧಿಕಾರಿಯೊಬ್ಬರು ಆಕ್ಷೇಪ ವ್ಯಕ್ತಪಡಿಸಿದ್ದರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಕ್ಷರಿ ಅವರು ಈ ಕ್ರಮವನ್ನು ಸ್ವಾಗತಿಸುತ್ತೇವೆ ಎಂದು ತಿಳಿಸಿದ್ದಾರೆ. ಒಬ್ಬರ ಉಡುಗೆ ಇತರರಿಗೆ ಮುಜುಗರ ಉಂಟುಮಾಡಬಾರದು. ಎಂದು ಹೇಳಿದರು.

**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಮೈಸೂರು**
**ಮೈಸೂರು-ನಂಜನಗೂಡು ರಸ್ತೆ, ಬಂಡೀಪಾಳ್ಯ, ಮೈಸೂರು-570 025.**
**E-Mail:apmcmysore@rediffmail.com**
**apmcmys@gmail.com ದೂರವಾಣಿ:0821-2482389**
**ಸಂ. ಕೃಉಮಾಸ(ಮೈ)/ಲೀ&ಲೈ/ 2147/2025-26 ದಿನಾಂಕ: 18.12.2025**

**ಮರು ಟೆಂಡರ್-ಕಂ-ಬಹಿರಂಗ ಹರಾಜು ಪ್ರಕಟಣೆ**

ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಮೈಸೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಹಣ್ಣುಗಳ ಸಗಟು ಮಾರುಕಟ್ಟೆ ಉಪ ಪ್ರಾಂಗಣದ 2ನೇ ಗೇಟ್ ಬಳಿ ಇರುವ ಟೀ-ಸ್ಟಾಲ್ ನ್ನು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಶಾಸನ 1966, ನಿಯಮ 1968 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ಮಾರುಕಟ್ಟೆ ಸ್ವತ್ತಿನ ಹಂಚಿಕೆ ನಿಯಂತ್ರಣ) ನಿಯಮಗಳು-2004 ರ ನಿಯಮ 14 ರನ್ವಯ ಲೀವ್ ಅಂಡ್ ಲೈಸೆನ್ಸ್ ಶುಲ್ಕದ ಆಧಾರದ ಮೇಲೆ ಗರಿಷ್ಠ 55 ತಿಂಗಳ ಅವಧಿಗೆ ಮರು ಟೆಂಡರ್-ಕಂ-ಬಹಿರಂಗ ಹರಾಜು ಮೂಲಕ ಹಂಚಿಕೆ ಮಾಡಲು ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಕ್ರ.ಸಂ.1 ಕಟ್ಟಡದ ವಿವರ:** ಸಗಟು ಹಣ್ಣುಗಳ ಮಾರುಕಟ್ಟೆ ಉಪ ಪ್ರಾಂಗಣದ 2 ನೇ ಗೇಟ್ ಬಳಿ ಇರುವ ಟೀ-ಸ್ಟಾಲ್. **ನಿಗಧಿಪಡಿಸಿರುವ ಮಾಸಿಕ ಲೀವ್ ಅಂಡ್ ಲೈಸನ್ಸ್ ಶುಲ್ಕ (ರೂ.):** 2,358-00 **ಮುಂಗಡ ಠೇವಣಿ (ರೂ.):** 5,000-00 **ಅರ್ಜಿ ಶುಲ್ಕ (ತೆರಿಗೆ ಸೇರಿ) ರೂ.**590-00

1) ಖಾಲಿ ಟೆಂಡರ್ ಫಾರಂಗಾಗಿ ನಿಗಧಿತ ಅರ್ಜಿ ಶುಲ್ಕವನ್ನು ಸಮಿತಿಗೆ ಪಾವತಿಸಲು ಕೊನೆಯ ದಿ: 08.01.2026 ರ ಮಧ್ಯಾಹ್ನ 03.00 ಗಂಟೆಯವರೆಗೆ 2) ಖಾಲಿ ಟೆಂಡರ್ ಫಾರಂನ್ನು ದಿ: 13.01.2026 ರವರೆಗೆ ಕಛೇರಿಯ ವೇಳೆಯಲ್ಲಿ ಪಡೆಯಬಹುದಾಗಿದೆ. 3) ಭರ್ತಿ ಮಾಡಿದ ಸೀಲ್ಡ್ ಟೆಂಡರನ್ನು ದಿ: 19.01.2026 ರ ಮಧ್ಯಾಹ್ನ 3.00 ಗಂಟೆಯವರೆಗೆ ಸಮಿತಿಯ ಬಂಡೀಪಾಳ್ಯ ಆಡಳಿತ ಕಛೇರಿಯಲ್ಲಿ ಸ್ವೀಕರಿಸಲಾಗುವುದು. ಬಹಿರಂಗ ಹರಾಜನ್ನು ಅದೇ ದಿವಸ 3-00 ಗಂಟೆಗೆ ನಡೆಸಲಾಗುವುದು. ಸಾಧ್ಯವಾದರೆ ಅದೇ ದಿನ ಟೆಂಡರನ್ನು ಹರಾಜು ಮುಗಿದ ನಂತರ ತೆರೆಯಲಾಗುವುದು. ತಪ್ಪಿದ್ದಲ್ಲಿ ಮುಂದಿನ ದಿನಾಂಕ ವನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. 4) ಹೆಚ್ಚಿನ ವಿವರಗಳನ್ನು ರಜಾದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

**ಸಹಿ/- ಕಾರ್ಯದರ್ಶಿ**
**ಕೃಉಮಾಸ., ಮೈಸೂರು.**

**ಸಹಿ/- ಆಡಳಿತಾಧಿಕಾರಿಗಳು**
**ಕೃಉಮಾಸ., ಮೈಸೂರು.**

DIPR/DDMYS/1394/KSMCA/791/2025-26

# ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ

ಗುಂಡ್ಲುಪೇಟೆ: ಬಂಡೀಪುರ ಅಭಯಾರಣ್ಯದ ಕಾಡಂಚಿನ ಗ್ರಾಮಗಳಲ್ಲಿ ಜಾನುವಾರುಗಳ ಮೇಲೆ ವನ್ಯಪ್ರಾಣಿಗಳ ನಿರಂತರ ದಾಳಿ ಖಂಡಿಸಿ ಸಾಮೂಹಿಕ ನಾಯಕತ್ವದ ರೈತ ಸಂಘಟನೆ ಪದಾಧಿಕಾರಿಗಳು ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ಪಟ್ಟಣದ ಪ್ರವಾಸಿ ಮಂದಿರದಿಂದ ಪ್ರತಿಭಟನಾ ಮೆರವಣಿಗೆ ಹೊರಟ ಸಾಮೂಹಿಕ ನಾಯಕತ್ವದ ರೈತ ಸಂಘಟನೆ ಪದಾಧಿಕಾರಿಗಳು ರಾಷ್ಟ್ರೀಯ ಹೆದ್ದಾರಿ-766ರ ಎಂಡಿಸಿಸಿ ಬ್ಯಾಂಕ್ ಸರ್ಕಲ್ ಬಳಿ ರಸ್ತೆ ತಡೆದು ಮಾನವ ಸರಪಳಿ ನಿರ್ಮಿಸಿ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿದರು.



ಈ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಪ್ರಕಾಶ್ ಮಾತನಾಡಿ, ಬಂಡೀಪುರ ಹುಲಿ ಅರಣ್ಯ ಸಂರಕ್ಷಿತ ಪ್ರದೇಶ ವ್ಯಾಪ್ತಿಯ ಗ್ರಾಮಗಳಲ್ಲಿ ನಿತ್ಯ ಒಂದಿಲ್ಲ ಒಂದು ಕಡೆ ಜಾನುವಾರುಗಳ ಮೇಲೆ ದಾಳಿ ನಡೆಯುತ್ತಿವೆ. ಇದರಿಂದ ದನ, ಕರುಗಳು, ಕುರಿ, ಮೇಕೆಗಳನ್ನು ಸಾಕಿ ಜೀವನ ಜೀವನ ಸಾಗಿಸುತ್ತಿರುವ ರೈತ ಕುಟುಂಬಗಳು ಬೀದಿಗೆ ಬೀಳುತ್ತಿವೆ. ಕೃಷಿಯನ್ನೇ ನಂಬಿ ಜೀವನ ಸಾಗಿಸುವ ರೈತರು ಮುಕ್ತವಾಗಿ ಹೊಲಗದ್ದೆಗಳಿಗೆ ಹೋಗಲು ಕಷ್ಟವಾಗುತ್ತದೆ. ತೋಟದ ಮನೆಗಳಲ್ಲಿ ವಾಸಿಸುವರ ಸ್ಥಿತಿ ಹೇಳ ತೀರದಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಮೃತಪಟ್ಟ ಮತ್ತು ಗಾಯಗೊಂಡ ಜಾನುವಾರುಗಳಿಗೆ ಕೊಡುವ ಅಲ್ಪ ಪ್ರಮಾಣದ ಪರಿಹಾರದ ಮೊತ್ತಕ್ಕೆ ವರ್ಷ ಕಾಯಬೇಕು. ಜಾನುವಾರು ಕಳೆದುಕೊಂಡ ರೈತ ಕಷ್ಟ ಅರಿಯದ ಅರಣ್ಯ ಇಲಾಖೆ ಇದ್ದೇನು ಪ್ರಯೋಜನ ಎಂದು ಆಕ್ರೋಶ ವ್ಯಕ್ತಪಡಿಸಿ, ತಾಲೂಕಿನಲ್ಲಿ ಶೇ.30ರಷ್ಟು ಭೂಮಿ ಈಗಾಗಲೇ ಕೇರಳ ರಾಜ್ಯದವರ ಪಾಲಾಗಿದ್ದು, ಕಾಡು ಪ್ರಾಣಿಯಗಳ ಹಾವಳಿಯ ಕಾರಣಕ್ಕೆ ಬೇಸತ್ತ ಇನ್ನಷ್ಟು ರೈತರು ಜಮೀನು ಮಾರಾಟ ಮಾಡಿದರೆ ಸಂಪೂರ್ಣ ಭೂಮಿ ಒಡೆತನವನ್ನು ತಾಲೂಕಿನ ರೈತರು ಕಳೆದುಕೊಳ್ಳುತ್ತಾರೆ. ಆದ್ದರಿಂದ ಅರಣ್ಯ ಇಲಾಖೆ ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕು. ನಾವು ಮಾಡುವ ಎಲ್ಲಾ ಹೋರಾಟಗಳಿಗೂ ಮಧ್ಯ ಪ್ರವೇಶಿಸುವ ಪೊಲೀಸರು ವನ್ಯಪ್ರಾಣಿಗಳಿಂದ ಆಗುವ ತೊಂದರೆ ಬಗ್ಗೆ ಅರಣ್ಯ ಇಲಾಖೆ ವಿರುದ್ಧ ನೀಡುವ ದೂರಿಗೆ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಸಾಂಕೇತಿಕ ಇದೀಗ ಪ್ರತಿಭಟನೆ ನಡೆಸಿದ್ದು, ಅರಣ್ಯ ಇಲಾಖೆಯವರು ಕ್ರಮ ಕೈಗೊಳ್ಳದಿದ್ದರೆ ಮುಂದಾಗುವ ಅನಾಹುತಗಳಿಗೆ ಅರಣ್ಯ ಇಲಾಖೆಯವರೇ ನೇರ ಜವಾಬ್ದಾರಿರಾಗಬೇಕಾಗುತ್ತದೆ ಎಂದು ಎಚ್ಚರಿಸಿದರು. ರೈತ ಸಂಘಟನೆ ಮುಖಂಡರಾದ ಮಾಡ್ರಹಳ್ಳಿ ಪಾಪಣ್ಣ, ಷಣ್ಮುಖಸ್ವಾಮಿ, ಬರಗಿ ಮಹೇಶ್, ಬೇರಂಬಾಡಿ ಶಶಿ, ಭೀಮನಬೀಡು ರಾಜ್, ಮಹದೇವಪ್ರಸಾದ್, ಮಾದಪ್ಪ, ರಘು, ಸಿದ್ದಪ್ಪ ಹಾಜರಿದ್ದರು.

**ಕರ್ನಾಟಕ ಸರ್ಕಾರ**
**ಕಾರ್ಯಪಾಲಕ ಅಭಿಯಂತರವರ ಕಛೇರಿ,**
**ಲೋಕೋಪಯೋಗಿ ಇಲಾಖೆ, ವಿದ್ಯುತ್ ವಿಭಾಗ, ಬೆಂಗಳೂರು**

ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಲೋಕೋಪಯೋಗಿ ವಿದ್ಯುತ್ ವಿಭಾಗ, ಬೆಂಗಳೂರು ಇವರ ವತಿಯಿಂದ ಈ ಕೆಳಕಂಡ ಕಾಮಗಾರಿಯನ್ನು KW-1 STD ಷರತ್ತುಗೊಳ್ಳಪಟ್ಟಂತೆ ಅಲ್ಪಾವಧಿ ಟೆಂಡರ್‌ನ ಮೊದಲನೇ ಕರೆಯನ್ನು ಕೆ.ಪಿ.ಪಿ.ಪಿ ಮೂಲಕ ಆಹ್ವಾನಿಸಲಾಗಿದೆ. ಕಾಮಗಾರಿ ವಿವರ ಕೆಳಕಂಡಂತಿದೆ.

**ಕ್ರ.ಸಂ.1 ಕಾಮಗಾರಿಯ ಹೆಸರು:** Providing Street Light Repair, High Mast Repairs, Control Box and Providing LTUG Cable to Suttur Village, Nanjangud Taluk in View of Jathra mohasthava. PWD/2025-26/EL/WORK_INDENT 31045 **ಕಾಮಗಾರಿಗೆ ಇಟ್ಟಿರುವ ಮೊತ್ತ (ರೂ ಲಕ್ಷಗಳಲ್ಲಿ):** 11.02

ಮೇಲಿನ ಟೆಂಡರ್‌ನಲ್ಲಿ ಭಾಗವಹಿಸಲು ಇಚ್ಚಿಸುವರು ವೆಬ್ ಸೈಟ್ ಸಂ: https://kppp.karnataka.gov.in ನಲ್ಲಿ ಟೆಂಡರ್ ಡಾಕ್ಯೂಮೆಂಟ್‌ಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ದಿ: 19.12.2025 ರಿಂದ 29.12.2025 16:00 ಗಂಟೆಯವರೆಗೆ ಹಾಗೂ ಭರ್ತಿ ಮಾಡಿದ ಟೆಂಡರ್ ಹಿಂತಿರುಗಿಸುವ ದಿ: 29.12.2025 ರಂದೆ 16:00 ಗಂಟೆಯವರೆಗೆ ನಿಗದಿಪಡಿಸಲಾಗಿದೆ. ಟೆಂಡರ್ ವಿವರಗಳನ್ನು Karnataka Public Procurement Portal ನಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಈ ಕೆಳಗೆ ಸಹಿ ಮಾಡಿರುವ ಅಧಿಕಾರಿಗಳ ಕಛೇರಿಯಲ್ಲಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದು.

**ಸಹಿ/- ಕಾರ್ಯಪಾಲಕ ಅಭಿಯಂತರರು(ವಿ), ಲೋಕೋಪಯೋಗಿ ವಿದ್ಯುತ್ ವಿಭಾಗ, ಬೆಂಗಳೂರು.**

DIPR/DDMYS/1398/KSMCA/793/2025-26

# ಗುರುಕುಲ ಮಾನ್ಯತೆ ರದ್ದಿಗೆ ಆಗ್ರಹ



ಮೈಸೂರು: ನಂಜನಗೂಡು ತಾಲೂಕು ಕಳಲೆ ಗ್ರಾಮದ ಶ್ರೀ ಆಚಾರ್ಯ ಗುರುಕುಲ ಶಾಲೆ ಶಿಕ್ಷಣ ಇಲಾಖೆಯ ಎಲ್ಲಾ ನಿಯಮಗಳನ್ನು ಗಾಳಿಗೆ ತೂರುತ್ತಿದ್ದು, ಲಂಚ ಪಡೆದು ಮಾನ್ಯತೆ ನವೀಕರಣ ಮಾಡುತ್ತಿರುವ ಅಧಿಕಾರಿಗಳನ್ನು ಅಮಾನತುಗೊಳಿಸಿ, ಶಾಲೆಯ ಮಾನ್ಯತೆ ರದ್ದುಗೊಳಿಸಬೇಕೆಂದು ಒತ್ತಾಯಿಸಿ ಜನ ಸಂಗ್ರಾಮ ಪರಿಷತ್ ವತಿಯಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಕಳಲೆ ಗ್ರಾಮದಲ್ಲಿ ಸುಮಾರು 15 ವರ್ಷದಿಂದ ಅಚಾರ್ಯ ಗುರುಕುಲ ಶಾಲೆ ನಡೆಯುತ್ತಿದ್ದು, ಆರಂಭದಿಂದಲೂ ಗ್ರಾಮದ ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನದ ಕಲ್ಲಿನ ಮಂಟಪದ ಜಾಗವನ್ನು ಒತ್ತುವರಿ ಮಾಡಿಕೊಂಡು ಕಾನೂನು ಬಾಹಿರವಾಗಿ ಶಾಲೆ ನಡೆಸುತ್ತಿದ್ದಾರೆ. ಗ್ರಾಮದ ಸರ್ಕಾರಿ ಶಾಲೆಯಲ್ಲಿ ಹಿಂದೆ 1200 ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದರು. ಆದರೆ, ಈ ಅನಧಿಕೃತ ಶಾಲೆಗೆ ಭ್ರಷ್ಟ ಶಿಕ್ಷಣಾಧಿಕಾರಿಗಳು, ಉಪನಿರ್ದೇಶಕರು ಹಣದಾಸೆಗೆ ಬಲಿಯಾಗಿ ಶಾಲೆಯ ಮಾನ್ಯತೆ ನವೀಕರಣ ಮಾಡುತ್ತಿದ್ದಾರೆ ಎಂದು ದೂರಿದರು.

ಈ ಅಕ್ರಮದ ತನಿಖೆ ನಡೆಸಿದ ಅಧಿಕಾರಿಗಳು ವಾಸ್ತವ ವರದಿ ನೀಡದೆ ನಿಯಮಬಾಹಿರವಾಗಿ ಖಾಸಗಿ ಶಾಲೆಯ ಅಭಿವೃದ್ಧಿಗೆ ಪೂರಕವಾದ ವರದಿ ನೀಡಿದ್ದಾರೆ. ಸರ್ಕಾರಿ ಸಂಬಳ ಪಡೆದು ಖಾಸಗಿ ಶಾಲೆಗೆ ಬೆಂಬಲವಾಗಿ ನಿಂತಿರುವ ಎಲ್ಲಾ ಭ್ರಷ್ಟ ಅಧಿಕಾರಿಗಳನ್ನು ಅಮಾನತು ಮಾಡಿ, ಕಳೆದ 15 ವರ್ಷಗಳಿಂದ ಅಕ್ರಮವಾಗಿ ನಡೆಯುತ್ತಿರುವ ಶ್ರೀ ಆಚಾರ್ಯ ಗುರುಕುಲ ಶಾಲೆಯ ಮಾನ್ಯತೆ ರದ್ದು ಮಾಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಚಾಲಕ ವಿನೋದ್ ದೇಬೂರು, ರಾಜ್ಯ ಉಪಾಧ್ಯಕ್ಷ ಪಾಲಹಳ್ಳಿ ಪ್ರಸನ್ನ, ಗೌರವಾಧ್ಯಕ್ಷ ನಗರ್ಲೆ ಎಂ.ವಿಜಯಕುಮಾರ್, ಚೋರನಹಳ್ಳಿ ಶಿವಣ್ಣ, ಶಶಿಧರ್ ಕಳಲೆ, ಕುಮುದಾ, ಕೃಷ್ಣ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಕಲ್ಲಂಗಡಿ ಬೆಳೆಯಿಂದ ಅಧಿಕ ಲಾಭ: ಪಾಲಾಕ್ಷ
## ಹೊನ್ನೂರಿನಲ್ಲಿ ಕಲ್ಲಂಗಡಿ ಬೆಳೆ ಕ್ಷೇತ್ರೋತ್ಸವ



ಚಾಮರಾಜನಗರ, ಯಳಂದೂರು ತಾಲ್ಲೂಕಿನ ಹೊನ್ನೂರು ಗ್ರಾಮದ ಪ್ರಗತಿ ಪರ ರೈತ ಸಿದ್ದಯ್ಯ ಅವರ ಹೊಲದಲ್ಲಿ ನಾಮ್ ಧಾರಿ ಸೀಡ್ಸ್ ಕಂಪನಿ ವತಿಯಿಂದ ಕಲ್ಲಂಗಡಿ ಬೆಳೆ ಕ್ಷೇತ್ರೋತ್ಸವ ನಡೆಯಿತು. ಈ ವೇಳೆ ಮಾತನಾಡಿದ ಕಂಪನಿ ಅಧಿಕಾರಿಗಳು, ಉತ್ತಮ ಆದಾಯ ತಂದು ಕೊಡುವ ನಾಮ್ ಧಾರಿ ಎನ್ ಎಸ್ 7285 ತಳಿಯ ಕಲ್ಲಂಗಡಿ ಬೆಳೆಯಲು ಜಿಲ್ಲೆ ಸೂಕ್ತವಾಗಿದೆ.

65 ರಿಂದ 70 ದಿನಗಳಲ್ಲಿ ಕಟಾವಿಗೆ ಬರುವ ಈ ತಳಿ ಎಕರೆಗೆ 25ರಿಂದ 30 ಟನ್ ಇಳುವರಿ ಕೊಡಲಿದೆ. ಜಿಲ್ಲೆಯಲ್ಲಿ ಅನೇಕ ರೈತರು ನಾಮ್ ಧಾರಿ ತಳಿ ಕಲ್ಲಂಗಡಿ ಬೆಳೆದಿದ್ದಾರೆ ಎಂದು ಹೇಳಿದರು. ಸ್ಥಳೀಯ ಮಾರುಕಟ್ಟೆ ಅಧಿಕಾರಿ ಹೊಮ್ಮ ಪಾಲಾಕ್ಷ ಮಾತನಾಡಿ, ನಾಮ್ ಧಾರಿ ಸೀಡ್ಸ್‌ನ ಹಿರಿಯ ಅಧಿಕಾರಿ ಕೆ.ಮೋಹನ್‌ರಾಜ್ ಅವರ ಮಾರ್ಗದರ್ಶ ನದಂತೆ ನಾಮ್ ಧಾರಿ ಸೀಡ್ಸ್‌ನ ಕಲ್ಲಂಗಡಿ ಬೆಳೆಯಾದ ಎನ್ ಎಸ್ 7285 ಕ್ಷೇತ್ರೋ ತ್ಸವವನ್ನು ಆಯೋಜಿಸಲಾಗಿದ್ದು, ಕಲ್ಲಂಗಡಿ ಬೆಳೆಯು ಅಧಿಕ ಲಾಭ ತಂದು ಕೊಡಲಿದೆ ಎಂದರು.

ಕಂಪನಿ ವಿತರ ಕರ ಎ.ಸಿ.ರವಿಕುಮಾರ್ ಮಾತನಾಡಿದರು.ಕಾವಿಬಸವೇಶ್ವರ ಟ್ರೇಡರ್ಸ್ ಮಾಲೀಕ ಮಹೇಶ್, ಪ್ರಗತಿಪರ ರೈತ ಸಾಹುಕಾರ್ ಮಹೇಂದ್ರ, ಅನಿಲ್ ಇತರರು ಹಾಜರಿದ್ದರು.

# ಎಚ್.ಆರ್.ಸುರೇಶ್ ಉಪನಿರ್ದೇಶಕರಾಗಿ ಮುಂದುವರಿಸಲು ಆದೇಶ

ಚಾಮರಾಜನಗರ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾಗಿ ಎಚ್.ಆರ್.ಸುರೇಶ್ ಅವರನ್ನು ಮುಂದುವರಿಸುವಂತೆ ಇಲಾಖೆಯ ಸರ್ಕಾರಿ ಕಾರ್ಯದರ್ಶಿ –2 ಎಂ.ಎಸ್ ರಶ್ಮಿ ಚಾಮರಾಜನಗರ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಬೆಂಗಳೂರು ಪೀಠ ಇಲ್ಲಿ ದಾಖಲಿಸಿರುವ ಅರ್ಜಿ ಸಂಖ್ಯೆ: 5058/2025 ಪ್ರಕರಣಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ನ್ಯಾಯಮಂಡಳಿಯು ನೀಡಿರುವ ಆದೇಶದನ್ವಯ ಹೆಚ್.ಆರ್.ಸುರೇಶ್, ಉಪ ನಿರ್ದೇಶಕರು ಇವರನ್ನು ಮಾನ್ಯ ನ್ಯಾಯಾಲಯದ ಅಂತಿಮ ತೀರ್ಪಿನ ಷರತ್ತಿಗೊಳಪಟ್ಟು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಾಮರಾಜನಗರ ಹುದ್ದೆಯಲ್ಲಿಯೇ ಮುಂದುವರೆಯುವಂತೆ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ–2 ಎಂ.ಎಸ್ ರಶ್ಮಿ ಚಾಮರಾಜನಗರ ಜಿ.ಪಂ.ಮುಖ್ಯ ಕಾರ್ಯನಿರ್ವಾಹಣಧಿಕಾರಿಗೆ ಆದೇಶ ಹೊರಡಿಸಿದ್ದಾರೆ.

# ಹೇಮಂತ್ ಕುಮಾರ್ ಜಿಲ್ಲಾ ಬಿಜೆಪಿ ಎಸ್‌ಸಿ ಮೋರ್ಚಾದ ಕಾರ್ಯದರ್ಶಿ



ಚಾಮರಾಜನಗರ: ಜಿಲ್ಲಾ ಬಿಜೆಪಿ ಎಸ್‌ಸಿ ಮೋರ್ಚಾದ ಕಾರ್ಯದರ್ಶಿಯಾಗಿ ರಾಮಸಮುದ್ರ ಹೇಮಂತ್‌ಕುಮಾರ್ ಬಿ. ನೇಮಕಗೊಂಡಿದ್ದಾರೆ. ಪಕ್ಷವಹಿಸುವ ಎಲ್ಲಾ ರೀತಿಯ ಸವಾಲುಗಳನ್ನು ಎದುರಿಸಿ ಪಕ್ಷದ ವರ್ಚಸ್ಸನ್ನು ಹೆಚ್ಚಿಸಲು ಶ್ರಮಿಸುವಂತೆ ಜಿಲ್ಲಾಧ್ಯಕ್ಷ ಮೂಡಹಳ್ಳಿ ಮೂರ್ತಿ ಆದೇಶಪತ್ರದಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡಕೂ ಡುಪ್ರಕಾಶ್, ಎಸ್‌ಸಿ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಮುತ್ತಿಗೆಮೂರ್ತಿ, ಮುಖಂಡರಾದ ಮಾಂಬಳ್ಳಿರಾಮಣ್ಣ, ವೇಣುಗೋಪಾಲ್, ಟಗರಪುರ ರೇವಣ್ಣ, ಹೊನ್ನೂರು ಮಹದೇವಸ್ವಾಮಿ, ಕಾಡಹಳ್ಳಿ ಕುಮಾರ್, ವರಹಾಸ್ವಾಮಿ, ಸೋಮಣ್ಣ ಉಪ್ಪಾರ್, ಪರಶಿವಮೂರ್ತಿ, ರಾಜಪ್ಪ ಇತರರು ಹಾಜರಿದ್ದರು.

# ಇಂದಿನಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ

ಎಚ್.ಡಿ.ಕೋಟೆ: ಇಂದಿನಿಂದ ನಾಲ್ಕು ದಿನಗಳ ಕಾಲ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಟಿ.ರವಿಕುಮಾರ್ ಮಾಹಿತಿ ನೀಡಿದ್ದಾರೆ.

ವರ್ತಮಾನ ಪತ್ರಿಕೆ ಜೊತೆ ಮಾತನಾಡಿ, ಡಿ.21 ರಿಂದ ಡಿ.24ರವರೆಗೆ ನಡೆಯುವ ಕಾರ್ಯಕ್ರಮದಲ್ಲಿ ಹೆಚ್.ಡಿ.ಕೋಟೆ ಹಾಗೂ ಸರಗೂರು ತಾಲೂಕಿನ ಐದು ವರ್ಷದೊಳಗಿನ 5804 ಮಕ್ಕಳಿಗೆ ಲಸಿಕೆ ಹಾಕಲಾಗುವುದು. ಈ ಕಾರ್ಯಕ್ಕೆ 66 ಪಲ್ಸ್ ಪೋಲಿಯೋ ಬೂತ್‌ಗಳು, ಒಂದು ಟ್ರಾನ್ಸೇಷನ್ ಬೂತ್, ಒಂದು ಮೊಬೈಲ್ ಟೀಂ ಸೇರಿದಂತೆ 272 ಆರೋಗ್ಯ ಇಲಾಖೆ ಸಿಬ್ಬಂದಿ, ಹದಿನಾಲ್ಕು ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಸರ್ಕಾರದ ವಿವಿಧ ಇಲಾಖೆ ಅಧಿಕಾರಿಗಳು, ಸಂಘ–ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು ಸಹಕಾರ ನೀಡಲಿದ್ದಾರೆ. ಪ್ರತಿ ಗ್ರಾಮಗಳ ಅಂಗನವಾಡಿ ಕೇಂದ್ರಗಳಲ್ಲಿಯೂ ಲಸಿಕೆ ಕಾರ್ಯಕ್ರಮ ನಡೆಯುವುದರಿಂದ ಮಕ್ಕಳಿಗೆ ಹಿಂದೆ ಎಷ್ಟೇ ಬಾರಿ ಲಸಿಕೆ ಹಾಕಿದ್ದರೂ, ಮತ್ತೊಮ್ಮೆ ಲಸಿಕೆ ಹಾಕಿಸುವುದನ್ನು ಮರೆಯಬಾರದು ಎಂದು ಮಾಹಿತಿ ತಿಳಿಸಿದರು.

# ಡಿ.23ಕ್ಕೆ ನರೆಡ್ಕೋ ಪರಿಷತ್ ನೂತನ ಪದಗ್ರಹಣ ಸಮಾರಂಭ

ಮೈಸೂರು: ನರೆಡ್ಕೋ ರಾಷ್ಟ್ರೀಯ ರಿಯಲ್ ಎಸ್ಟೇಟ್ ಅಭಿವೃದ್ಧಿ ಪರಿಷತ್‌ನ ಮೈಸೂರು ಘಟಕದ 2025– 27ನೇ ಅವಧಿಗೆ ಆಯ್ಕೆಯಾಗಿರುವ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಡಿ.23ರ ಸಂಜೆ 5.30ಕ್ಕೆ ನಗರದ ರಾಜರಾಜೇಶ್ವರಿ ನಗರದ ಹೋಟೆಲ್ ಅಟ್ಮಾಸ್ಪಿಯರ್‌ನಲ್ಲಿ ನಡೆಯಲಿದೆ ಎಂದು ಆಡಳಿತ ಮಂಡಳಿ ಸದಸ್ಯ ಎನ್. ದಿವ್ಯೇಶ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಂದಾಯ ಸಚಿವ ಕೃಷ್ಣ ಭೈರೇಗೌಡ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸೆಸ್ಕ್ ಮುಖ್ಯಸ್ಥ ರಮೇಶ್ ಬಂಡಿಸಿದ್ದೇಗೌಡ, ವಿಧಾನ ಪರಿಷತ್ ಸದಸ್ಯ ಶಿವಕುಮಾರ್, ಜಿ. ಹರಿಬಾಬು, ಮಧು ಮಾದೇಗೌಡ ಇನ್ನಿತರರು ಅತಿಥಿಗಳಾಗಿರುವರು. ಇದೇ ವೇಳೆ ಹೊಸ ಸದಸ್ಯರ ಸೇರ್ಪಡೆ ಸಹಾ ನಡೆಯಲಿದೆ ಎಂದರು.

ಈಚಿನ ದಿನಗಳಲ್ಲಿ ನಿರ್ಮಾಣ ಕ್ಷೇತ್ರದಲ್ಲಿ ಕಾರ್ಮಿಕರ ಕೊರತೆ ಎದ್ದು ಕಾಣುತ್ತಿದೆ. ಹೀಗಾಗಿ ದೊಡ್ಡ ದೊಡ್ಡ ನಗರಗಳಲ್ಲಿ ಈ ನಿಟ್ಟಿನಲ್ಲಿ ಅನುಸರಿಸುತ್ತಿರುವ ತಂತ್ರಜ್ಞಾನ, ನಿರ್ಮಾಣ ಕ್ಷೇತ್ರದಲ್ಲಿನ ಈಚಿನ ಬೆಳವಣಿಗೆ, ಗ್ರೇಟರ್ ಮೈಸೂರು ಹಿನ್ನೆಲೆ ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ಆಗಬಹುದಾದ ಬೆಳವಣಿಗೆ, ನಿಗದಿತ ಅವಧಿಯೊಳಗೆ ಯೋಜನೆಗಳನ್ನು ಪೂರ್ಣಗೊಳಿಸುವುದು ಇವೇ ಮೊದಲಾದ ವಿಷಯಗಳಿಗೆ ಸಂಬಂಧಿಸಿದಂತೆ ಸದಸ್ಯರಿಗೆ ಆಗಾಗ್ಗೆ ಕಾರ್ಯಾಗಾರ, ವಿಚಾರ ಸಂಕಿರಣ, ಮುಂಬಯಿ, ದೆಹಲಿ ಮೊದಲಾದ ಕಡೆಗಳಿಗೆ ಅಧ್ಯಯನ ಪ್ರವಾಸ ಮೊದಲಾದ ಕಾರ್ಯಕ್ರಮ ಸಂಸ್ಥೆ ಹಮ್ಮಿಕೊಳ್ಳುತ್ತಿದೆ ಎಂದರು. ಅಧ್ಯಕ್ಷ ಡಾ.ಎಂ.ಡಿ.ರಾಘವೇಂದ್ರ ಪ್ರಸಾದ್, ಚೇರ್ಮನ್ ಎ.ಪಿ.ನಾಗೇಶ, ಜಂಟಿ ಕಾರ್ಯದರ್ಶಿ ಪಿ.ನಂಜುಂಡಸ್ವಾಮಿ, ಆಡಳಿತ ಮಂಡಳಿಯ ರಾಮಪ್ರಸಾದ್ ಇನ್ನಿತರರು ಇದ್ದರು.



# ಸುಜನಾ ಕನ್ನಡ ಸಾಹಿತ್ಯ–ಸಂಸ್ಕೃತಿ ಲೋಕದ ಮೇರು ಸಜ್ಜನ
### ಪ್ರೊ.ಜಿ.ಟಿ ವೀರಪ್ಪ

ಕೆ.ಆರ್.ಪೇಟೆ: ರಾಷ್ಟ್ರಕವಿ ಕುವೆಂಪು ಅವರ ವಿಚಾರಧಾರೆಗಳಿಂದ ಪ್ರಭಾವಿತರಾದ ಅನೇಕರು ಮಹಾಕವಿಗಳಾಗಿ ನಮ್ಮ ನಡುವೆ ಗುರುತಿಸಲ್ಪಡುವ ಕವಿಗಳಲ್ಲಿ ಅಗ್ರಗಣ್ಯರಾಗಿರುವ ನಮ್ಮ ಗುರುಗಳು ಕೆ.ಆರ್.ಪೇಟೆ ಸುಪುತ್ರ ಕವಿ ಸಾಹಿತಿ ಸುಜನಾ ಅವರ ಹೆಸರಿನಲ್ಲಿ ಸಾಧನೆ ಪ್ರಶಸ್ತಿ ಪ್ರತಿಷ್ಠಾನ ರೂಪಿಸುವುದು ಅವಶ್ಯಕ ಎಂದು ಪ್ರೊ.ಜಿ.ಟಿ ವೀರಪ್ಪ ತಿಳಿಸಿದರು.

ಪಟ್ಟಣದ ಜಯನಗರ ಬಡವಣೆಯಲ್ಲಿರುವ ಶ್ರೀ ಮಲ್ಲಿಕಾರ್ಜುನ ಚಾರಿಟೇಬಲ್ ಟ್ರಸ್ಟ್ ಕಚೇರಿಯಲ್ಲಿ ಕರ್ನಾಟಕ ಸಂಘ ಮಂಡ್ಯ,ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಮಲ್ಲಿಕಾರ್ಜುನ ಚಾರಿಟೇಬಲ್ ಟ್ರಸ್ಟ್ ಸಹಯೋಗದೊಂದಿಗೆ ಮಹಾಕಾವ್ಯದ ಮೂಲಕ ಕನ್ನಡ ಸಾಹಿತ್ಯ ಲೋಕದ ಮೌಲ್ಯವನ್ನು ಹೆಚ್ಚಿಸಿರುವ ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ, ಕವಿ,ಸಾಹಿತಿ ಡಾ.ಸುಜನಾ ಒಂದು ನೆನಪು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ದರು. ಕರ್ನಾಟಕ ಸಂಘ ಅಧ್ಯಕ್ಷ ಪ್ರೊ.ಬಿ. ಜಯಪ್ರಕಾಶಗೌಡ ಮಾತನಾಡಿ ಕನ್ನಡ ವಿದ್ಯಾರ್ಥಿಗಳ ಓದುಗರ ಆತ್ಮೀಯರ ಪಾಲಿಗೆ ಅವರು ಎಲ್ಲ ಅರ್ಥದಲ್ಲೂ ಸುಜನಾ. ಅವರು ಕವಿ ಅಷ್ಟೇ ಅಲ್ಲ, ನಿಜವಾದ ಅರ್ಥದಲ್ಲಿ ಕವಿ ಹೃದಯದವರು ಆಗಿದ್ದರು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್, ಮಾಜಿ ಸ್ಪೀಕರ್ ಕೃಷ್ಣ ಪ್ರತಿಷ್ಠಾನ ಗೌರವಾಧ್ಯಕ್ಷೆ ಇಂದ್ರಮ್ಮ ಕೃಷ್ಣಪ್ಪ, ರಾಜ್ಯ ಮಾರಾಟ ಮಹಾ ಮಂಡಳಿ ನಿರ್ದೇಶಕ ಶೀಳನೆರೆ ಮೋಹನ್,ಕೆ.ಜೆ ನಾರಾಯಣ್, ಬಸವರಾಜು, ನಾರಾಯಣ ಶೆಟ್ಟಿ, ಕಿಕ್ಕೇರಿ ಕೃಷ್ಣಮೂರ್ತಿ,ಶಿ.ಕುಮಾರಸ್ವಾಮಿ, ಉದಯರವಿ ಟ್ರಸ್ಟ್ ಅಧ್ಯಕ್ಷ ಕೆ ಎಸ್ ಸೋಮಶೇಖರ್,ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪೂರ್ಣ ಚಂದ್ರ ತೇಜಸ್ವಿ, ಚಾ.ಶಿ ಜಯಕುಮಾರ್, ಕತ್ತರಘಟ್ಟ ವಾಸು,ಇದ್ದರು.



# ಸರ್ಕಾರಗಳು ಜನರನ್ನು ವಂಚಿಸಿವೆ
## ಚಿಂತಕ ಶಿವಸುಂದರ್ ಬೇಸರ | ಚಿಂತನ–ಮಂಥನ ಕಾರ್ಯಾಗಾರ

ಎಚ್.ಡಿ.ಕೋಟೆ: ಕೇಂದ್ರ ಸರ್ಕಾರ ಎಸ್‌ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಯೋಜನೆ ಜಾರಿ ಮಾಡುವ ಮೂಲಕ ಮೌನವಾಗಿಯೇ ಜನರ ಬೆನ್ನಿಗೆ ಚೂರಿ ಇರಿದಿದೆ ಎಂದು ಚಿಂತಕ ಹಾಗೂ ರಾಜಕೀಯ ವಿಶ್ಲೇಷಕ ಶಿವಸುಂದರ್ ವ್ಯಾಖ್ಯಾನಿಸಿದರು.

ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸಂವಿ ಧಾನ ಸಂರಕ್ಷಣಾ ಪಡೆ–ಕರ್ನಾಟಕ ಎಚ್.ಡಿ.ಕೋಟೆ ಮತ್ತು ಸರಗೂರು ಘಟಕದ ವತಿಯಿಂದ ಸಂವಿಧಾನದ ಅಳಿವು–ಉಳಿವು ಸಂರಕ್ಷಣೆ ಕುರಿತು ನಡೆದ ಒಂದು ದಿನದ ಚಿಂತನ–ಮಂಥನ ಕಾರ್ಯಗಾರದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಂದಲ್ಲಾ ಒಂದು ರೀತಿಯಲ್ಲಿ ಜನ ಸಾಮಾನ್ಯರ ಬೆನ್ನಿಗೆ ಇರಿಯುವ ಕೆಲಸ ಮಾಡುತ್ತಿವೆ. ಕೇಂದ್ರ ಸರ್ಕಾರ ಸದ್ದಿಲ್ಲದೆ ಎಸ್‌ಐಆರ್ ಹೆಸರಿನಲ್ಲಿ ಮತದಾನದ ಹಕ್ಕನ್ನೇ ಕಸಿಯುವ, ಒಂದು ಸಮುದಾಯವನ್ನು ಗುರಿಯಾ ಗಿಸಿಕೊಂಡು ನಾಗರಿಕತ್ವ ಇರದಂತೆ ಮಾಡುವ ಹುನ್ನಾರ ನಡೆಸಿದೆ. ರಾಜ್ಯ ಸರ್ಕಾರವೂ ರೈತ ವಿರೋಧಿ ಕಾಯ್ದೆ ಜತೆಗೆ ನಿರಂತರ ದಾಳಿ ನಡೆಸುತ್ತಿದೆ ಎಂದು ದೂರಿದರು.

ಎಸ್‌ಐಆರ್ (ಸ್ಪೆಷಲ್ ಇಂಟನ್ಸಿವ್ ರಿವಿಷನ್) ಅನ್ನು 2025ರ ಅ.27 ಕೇಂದ್ರ ಸರ್ಕಾರ 12 ರಾಜ್ಯಗಳಲ್ಲಿ ಜಾರಿ ಮಾಡಿದೆ. ನಾವು ಈ ಪ್ರಕ್ರಿಯೆ ಹಿಂದಿರುವ ಆತಂಕಕಾರಿ ವಿಷಯಗಳ ಬಗ್ಗೆ ಗಮನಹರಿಸಬೇಕು. ಯೋಜನೆಯ ಉದ್ದೇಶ ಎಲ್ಲ ಅರ್ಹ ಮತದಾರರನ್ನು ಪಟ್ಟಿಯಲ್ಲಿ ಸೇರಿಸುವುದು, ಅನರ್ಹರನ್ನು ತೆಗೆಯುವುದು. ಇದಕ್ಕಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಬಾಗಿಲಿಗೆ ಬರಲಿದ್ದಾರೆ. ಇನ್ನುಮೇರೇಷನ್‌ನಮೂನೆ ನೀಡುತ್ತಾರೆ. ಒಂದು ತಿಂಗಳ ಒಳಗಾಗಿ ಅಗತ್ಯ ದಾಖಲೆಯೊಡನೆ ಸಲ್ಲಿಸ ಬೇಕು. ಇಲ್ಲವಾದಲಿ ಮತದಾರ ಪಟ್ಟಿಯಿಂದ ಅವರ ಹೆಸ ರನ್ನು ಕೈಬಿಡಲಾಗುತ್ತದೆ. ಪ್ರತಿಯೊಬ್ಬರು ತಮ್ಮ ಪೋಷಕರ





ಜನ್ಮ ದಿನಾಂಕ, ಜನ್ಮಸ್ಥಳದ ದಾಖಲೆ ಒದಗಿಸಬೇಕು. ಆದರೇ, ದೇಶದ ಶೇ.60ರಷ್ಟು ಜನರು ಈ ದಾಖಲೆಗಳನ್ನು ಹೊಂದಿಲ್ಲ. ಈ ಕಾರಣಕ್ಕಾಗಿ ಮತದಾನದ ಹಕ್ಕು ಸಿಗುತ್ತ ದೆಯೋ ಇಲ್ಲವೋ ಎಂಬ ಆತಂಕ ಮೂಡಿದೆ ಎಂದರು.

ಸರ್ಕಾರ ವಿದೇಶಿ ನುಸುಳುಕೋರರ ಪತ್ತೆ ಮಾಡುವ ಹಾಗೂ ಭಾರತದಲ್ಲಿ ಅವರು ಮತ ಹಾಕದಂತೆ ಮಾಡಲು ಈ ಯೋಜನೆ ಜಾರಿ ಮಾಡಲಾಗಿದೆ ಎನ್ನುತ್ತಿದೆ. ಇದು ಕೇಲವ ಮತದಾರರ ಪಟ್ಟಿ ಪರಿಷ್ಕರಣೆಯಾಗಿದ್ದರೆ ಇದಕ್ಕೆ ವಿರೋಧ ವ್ಯಕ್ತವಾಗುತಿರಲಿಲ್ಲ. ಬದಲಿಗೆ ಇದೊಂದು ಕೇಂದ್ರ ಸರ್ಕಾರದ ಒಳಸಂಚು ಎಂದು ದೂರಿದರು.

ಜನಶಕ್ತಿ ರಾಜ್ಯಾಧ್ಯಾಕ್ಷ ನೂರ್ ಶ್ರೀಧರ್ ಮಾತನಾಡಿ, ಈ ದೇಶದ ಸಂವಿಧಾನ ಇಂದು ಅಪಾಯ ದಲ್ಲಿದೆ. ಸಂವಿಧಾನದ ಮೂಲ ಆಶಯಕ್ಕೆ ಧಕ್ಕೆ ತರುವ ಹಲವಾರು ಕಾಯ್ದೆಗಳನ್ನು ಜಾರಿಗೆ ತಂದು ಭಾವನಾತ್ಮಕವಾಗಿ ಜನರನ್ನ ಮರಳು ಮಾಡುವ ವ್ಯವಸ್ಥಿತ ಕೆಲಸಗಳು ನಿರಂತರವಾಗಿ ಎಂದು ಆತಂಕ ವ್ಯಕ್ತಪಡಿಸಿದರು.

ಶೋಷಿತ ಸಮುದಾಯಗಳ ಸಾಮರಸ್ಯವನ್ನು ಜಾತಿ, ಧರ್ಮ, ದೇವರ ಹೆಸರಲ್ಲಿ ಹಾಳುಮಾಡಿ, ಸಾಮಾನ್ಯ ಜನರ ಮೇಲೆ ದಾಳಿಯಾಗುತ್ತಿದೆ. ಇದನ್ನು ನಾವು ಗಂಭೀರವಾಗಿ ಚಿಂತಿಸಿ, ಸರ್ಕಾರದ ಈ ಷಡ್ಯಂತ್ರವನ್ನು ಹಿಮ್ಮೆಟ್ಟಿ ಸಬೇಕು. ಆ ಮೂಲಕ ಸಂವಿಧಾನದ ಚೌಕಟ್ಟಿನಲ್ಲಿ ಸಂರಕ್ಷಣೆ ಪಡೆದು ತಳಮಟ್ಟದಿಂದ ಜನ ಸಂಘಟನೆಯಾಗಬೇಕು. ಅದಕ್ಕಾಗಿಯೇ ನಾವು ರಾಜ್ಯಾದ್ಯಂತ ಒಂದು ಲಕ್ಷಕ್ಕೂ ಅಧಿಕ ಕಾರ್ಯಕರ್ತರ ಪಡೆ ಕಟ್ಟಬೇಕಾಗಿದೆ. ಎಲ್ಲರೂ ನೋಂದಣಿ ಮಾಡಿಕೊಳ್ಳಬೇಕು ಎಂದರು.

ಕಾರ್ಯಗಾರದಲ್ಲಿ ಜೀವಿಕ ಸಂಸ್ಥಾಪಕ ಸಂಚಾಲಕ ಕಿರಣ್, ಕಮಲ್ ಪ್ರಸಾದ್, ಮಹಿಳಾ ವಿಶ್ವವಿದ್ಯಾಲಯದ ನಿವೃತ್ತ ಉಪಕುಲಪತಿ ಡಾ.ಸಬೀಹಾ ಭೂಮಿಗೌಡ, ಸಂಚಾಲನ ಸಮಿತಿ ಸದಸ್ಯ ಅಕ್ಬರ್ ಪಾಷ ಮತ್ತಿತರರು ಸಂವಿಧಾನ ಅಳಿವು–ಉಳಿವು, ಸಂರಕ್ಷಣೆ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಗಾರದಲ್ಲಿ ಎಚ್.ಡಿ.ಕೋಟೆ ಮತ್ತು ಸರಗೂರು ತಾಲೂಕುಗಳ ಎಲ್ಲ ಸಮುದಾಯಗಳ ಜನರು, ವಿವಿಧ ಸಂಘ ಸಂಸ್ಥೆಗಳು, ಸಂಘಟನೆಗಳ ಪದಾಧಿಕಾರಿಗಳು, ಮೈಸೂರು, ಕೊಡಗು, ಚಾಮರಾಜನಗರ, ಮಂಡ್ಯ, ಬೆಂಗಳೂರು, ಚಿಕ್ಕಬಳ್ಳಾಪುರ, ಕೋಲಾರ ಮತ್ತಿತರ ಜಿಲ್ಲೆಗಳ ಮುಖಂಡರು ಭಾಗವಹಿಸಿದ್ದರು.

# ಡಿ.23ಕ್ಕೆ ವಿಶ್ವರೈತ ದಿನಾಚರಣೆ




ಮೈಸೂರು: ಕರ್ನಾಟಕ ರಾಜ್ಯ ರೈತ ಸಂಘ ರೈತ ಪರ್ವದ ವತಿಯಿಂದ ಡಿ. 23 ರಂದು ಮಧ್ಯಾಹ್ನ 12.30ಕ್ಕೆ ತುಮಕೂರು ಜಿಲ್ಲೆ ಕುಣಿಗಲ್‌ನ ದಿವ್ಯ ಕನ್ವೆನ್ಷನ್ ಹಾಲ್‌ನಲ್ಲಿ ಸಂಘಟನೆ ವಾರ್ಷಿಕೋತ್ಸವ, ಕನ್ನಡ ರಾಜ್ಯೋತ್ಸವ, ವಿಶ್ವ ರೈತ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಪ್ರಧಾನ ಕಾರ್ಯದರ್ಶಿ ಡಾ.ಉಮಾಪತಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವವರು, ಸಮಾಜ ಸೇವಕರು, ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸಿದ ರೈತರ ಮಕ್ಕಳು, ರೈತರನ್ನು ಸನ್ಮಾನಿಸಲಾಗುವುದು. ಇದಕ್ಕೂ ಮೊದಲು ಬೆಳಗ್ಗೆ 11ಕ್ಕೆ ಅಲ್ಲಿನ ಪ್ರವಾಸಿ ಮಂದಿರದಿಂದ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳಕ್ಕೆ ರೈತರು ಬಳಸುವ ಟ್ರಾ?ಯಕ್ಟರ್, ಜೆಸಿಬಿ ಹಾಗೂ ಎತ್ತಿನ ಗಾಡಿಗಳ ಅದ್ಧೂರಿ ಮೆರವಣಿಗೆ ಆಯೋಜಿಸಲಾಗಿದೆ ಎಂದರು.

ಸಂಸ್ಥಾಪಕ ರಾಜ್ಯಾಧ್ಯಕ್ಷ ಡಾ. ಅರುಣ್‌ಕುಮಾರ್ ಮಾತನಾಡಿ, ವಿಶ್ವ ರೈತ ದಿನಾಚರಣೆ ಹಿನ್ನೆಲೆ ಕೇಂದ್ರ ಸರ್ಕಾರ ರಜೆ ಘೋಷಿಸಿ ರೈತನ್ನು ಗೌರವಿಸುವ ಕೆಲಸ ಮಾಡಬೇಕು ಎಂದು ಪ್ರಧಾನಿಗೆ ಮನವಿ ಸಲ್ಲಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಸುಮಾರು ನಾಲ್ಕು ಸಾವಿರ ರೈತರು, ಅವರ ಕುಟುಂಬದವರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದರು. ರಾಜ್ಯ ಕಾರ್ಯದರ್ಶಿ ಚಾಮರಾಜು ಮಂಡಕಳ್ಳಿ, ಮಲ್ಲೇಶ್ ಬಂಡಿಪಾಳ್ಯ, ಕೃಷ್ಣನಾಯಕ ಇದ್ದರು.

# ಜಿಲ್ಲಾಡಳಿತದ ವಿರುದ್ಧ ಪ್ರತಿಭಟನೆ



ಚಾಮರಾಜನಗರ: ಸರ್ಕಾರಿ ಅನುಮತಿ ಇಲ್ಲದೆ ಕೊಳ್ಳೇಗಾಲದ ಸರ್ಕಾರಿ ಎಂಜಿಎಸ್‌ವಿ ಕಾಲೇಜು ಆವರಣದಲ್ಲಿ ನಡೆಸುತ್ತಿರುವ ಕನ್ನಡ ಹಬ್ಬ ಕಾರ್ಯಕ್ರಮದ ವೇದಿಕೆಯನ್ನು ತೆರವುಗೊಳಿಸುವಂತೆ ಜಿಲ್ಲಾಡಳಿತದ ಗಮನಕ್ಕೂ ತಂದರೂ ಯಾವುದೇ ಕಾರ್ಯಕ್ರಮಕೈಗೊಂಡಿಲ್ಲ ಎಂದು ಆರೋಪಿಸಿ ಪ್ರಗತಿಪರ ವೇದಿಕೆ ಸಂಚಾಲಕ ಶೇಖರಬುದ್ಧ ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಕೆಳಗಡೆ ಕುಳಿತು ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ವಿರುದ್ಧ ಅಕ್ರೋಶ ವ್ಯಕ್ತಪಡಿಸಿದರು. ಇಂದು ನಾಳೆ ಕಿರು ಪರೀಕ್ಷೆ ಇದ್ದು ಈ ಕಾರ್ಯಕ್ರಮದಿಂದ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿದೆ ಎಂದು ದೂರಿದರು. ಕೊಳ್ಳೇಗಾಲದ ಎಂಜಿಎಸ್‌ವಿ ಕಾಲೇಜು ಒಂದು ಸರ್ಕಾರಿ ಕಾಲೇಜು ಆಗಿದ್ದು, ಕಾಲೇಜಿನಿಂದ ಯಾವುದೇ ಅನುಮತಿ ಪಡೆಯದೆ ಖಾಸಗಿ ಸಂಸ್ಥೆಯವರು ಕಾಲೇಜು ಮುಖ್ಯಗೇಟ್ ಬೀಗ ಹಾಕಿದರು ಕೂಡ ಬೀಗ ಒಡೆದು ಅಕ್ರಮವಾಗಿ ಕಾರ್ಯಕ್ರಮ ವೇದಿಕೆ ನಿರ್ಮಾಣ ಮಾಡಿದ್ದಾರೆ. ಅಕ್ರಮ ವೇದಿಕೆಯನ್ನು ತೆರವುಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳ ಗಮನಕ್ಕೂ ತಂದರೂ ಕೂಡ ಜಿಲ್ಲಾಡಳಿತ ಕಾರ್ಯಕ್ರಮ ರದ್ದುಗೊಳಿಸುವಲ್ಲಿ ವಿಫಲವಾಗಿದೆ. ಜಿಲ್ಲಾಡಳಿತ ಅಕ್ರಮ ವೇದಿಕೆ ತೆರವುಗೊಳಿಸಬೇಕು. ಖಾಸಗಿ ಸಂಸ್ಥೆಯವರ ಮೇಲೆ ಕಾನೂನು ಕ್ರಮಕ್ಕೆಗೊಳ್ಳುವ ತನಕ ಅಹೋರಾತ್ರಿ ಧರಣಿ ನಡೆಸುವುದಾಗಿ ಶೇಖರಬುದ್ಧ ಎಚ್ಚರಿಸಿದರು. ಜೊತೆಯಲ್ಲಿ ಆಲೂರುನಾಗೇಂದ್ರ ಭಾಗವಹಿಸಿದ್ದರು.

# 24ಕ್ಕೆ ರೈತ ಹಬ್ಬ ಕಾರ್ಯಕ್ರಮ

ಮೈಸೂರು: ಕರುನಾಡು ರೈತ ರಕ್ಷಣಾ ಪಡೆ ವತಿಯಿಂದ ಡಿ.24ರಂದು ಬೆಳಗ್ಗೆ 11ಕ್ಕೆ ಹೆಬ್ಬಾಳ್ ಕಾಂತನಗರ ವಾರ್ಡ್ ಸ್ಕೇಟಿಂಗ್ ಮೈದಾನದಲ್ಲಿ ರೈತರ ಹಬ್ಬ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ಸಂಸ್ಥಾಪಕ ರಾಜ್ಯಾಧ್ಯಕ್ಷ ಎಂ.ಕೆ.ಸಂಜಯ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸಂಸದ ಯದುವೀರ್, ಸಚಿವರಾದ ಜಮೀರ್ ಅಹಮದ್, ಎನ್.ಚಲುವರಾಯಸ್ವಾಮಿ, ಮಾಜಿ ಸಂಸದ ಪ್ರತಾಪ್‌ಸಿಂಹ, ಶಾಸಕರಾದ ಜಿ.ಟಿ. ದೇವೇಗೌಡ, ಕೆ. ಹರೀಶ್‌ಗೌಡ ಇನ್ನಿತರರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಈ ವೇಳೆ ದಿವಂಗತ ಸಾಲುಮರದ ತಿಮ್ಮಕ್ಕ ಅವರಿಗೆ ನುಡಿನಮನ ಇನ್ನಿತರ ಕಾರ್ಯಕ್ರಮ ನಡೆಯಲಿವೆ. ವರ್ತೂರು ಸಂತೋಷ್‌ಕುಮಾರ್ ಅಧ್ಯಕ್ಷತೆ ವಹಿಸುವರು. ಇದಕ್ಕೂ ಮೊದಲು ಬೆಳಗ್ಗೆ 10ಕ್ಕೆ ವಿಜಯನಗರ ವಾಟರ್ ಟ್ಯಾಂಕ್ ವೃತ್ತದಿಂದ ಸಭಾ ಕಾರ್ಯಕ್ರಮ ನಡೆಯುವ ಸ್ಥಳಕ್ಕೆ ಭವ್ಯ ಮೆರವಣಿಗೆ ಇರಲಿದ್ದು, 10 ಜೊತೆ ಹಳ್ಳಿಕಾರ್ ಹಸುಗಳು ಪಾಲ್ಗೊಳ್ಳಲಿವೆ ಎಂದು ತಿಳಿಸಿದರು. ಇನ್ನಿತರ ಪದಾಧಿಕಾರಿಗಳಾದ ಯತೀಶ್ ಪಟೇಲ್, ಕೆ.ಎಂ.ಶಿವಕುಮಾರ್, ಕೆ.ಜೆ.ಪರಮೇಶ್ ಇದ್ದರು.



### ಅರಣ್ಯ ಸಂಚಾರಿ ದಳದ ಸಬ್‌ಇನ್ಸ್‌ಪೆಕ್ಟರ್ ಯಾಶ್ವಿನ್ ತಾಜ್

# ವನ್ಯ ಜೀವಿಗಳಿಗೆ ವಿಷವಿಕ್ಕುವುದು, ಬೇಟೆಯಾಡುವುದು ಅಪರಾಧ

ಚಾ.ನಗರದಲ್ಲಿ ಅರಣ್ಯ ಸಂರಕ್ಷಣೆ ಮತ್ತು ವನ್ಯ ಜೀವಿ ಅಪರಾಧ ತಡೆ ಮಾಸಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ

ಚಾಮರಾಜನಗರ, ವನ್ಯ ಜೀವಿಗಳಿಗೆ ವಿಷ ಹಾಕಿ ಕೊಲ್ಲುವುದು, ಅಕ್ರಮವಾಗಿ ಸಾಕುವುದು ಹಾಗೂ ಬೇಟೆಯಾಡುವುದು ಘೋರ ಅಪರಾಧವಾಗಿದ್ದು, ಎಲ್ಲರು ಅರಣ್ಯ ಹಾಗೂ ವನ್ಯಪ್ರಾಣ ಗಳನ್ನು ಪ್ರೀತಿಸುವ ಮೂಲಕ ವನ್ಯ ಸಂಕುಲನವನ್ನು ಉಳಿಸಿ ಬೆಳೆಸಬೇಕೆಂದು ಸಿಐಡಿ ಪೊಲೀಸ್ ಅರಣ್ಯ ಸಂಚಾರಿ ದಳದ ಸಬ್‌ಇನ್ಸ್‌ಪೆಕ್ಟರ್ ಯಾಶ್ವಿನ್ ತಾಜ್ ತಿಳಿಸಿದರು.

ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನ ಆವರಣದಲ್ಲಿ ಸಿಐಡಿ ಪೊಲೀಸ್ ಅರಣ್ಯ ಸಂಚಾರಿ ದಳದ ವತಿಯಿಂದ ಅರಣ್ಯ ಸಂರಕ್ಷಣೆ ಮತ್ತು ವನ್ಯ ಜೀವಿ ಅಪರಾಧ ತಡೆ ಮಾಸಾಚರಣೆ ಅಂಗವಾಗಿ ನಡೆದ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾನವನಿಗೆ ಭೂಮಿ ಮೇಲೆ ಬದುಕಲು ಎಷ್ಟು ಹಕ್ಕು ಇದೆಯೋ ಅಷ್ಟೇ ಪ್ರಮಾಣದಲ್ಲಿ ವನ್ಯ ಪ್ರಾಣ ಗಳು ಸಹ ಬದುಕುವ ಹಕ್ಕನ್ನು ಹೊಂದಿವೆ. ಪರಿಸರ ಸಮತೋಲನ ಹಾಗು ಅರಣ್ಯ ಅಭಿವೃದ್ದಿಗಾಗಿ ವನ್ಯ ಪ್ರಾಣ ಗಳು ಇರುವಿಕೆ ಮುಖ್ಯವಾಗಿದೆ. ಹೀಗಾಗಿ ಅಕ್ರಮವಾಗಿ ಅರಣ್ಯ ಪ್ರವೇಶ ಮಾಡುವುದು, ವನ್ಯ ಪ್ರಾಣ ಗಳಿಗೆ ತೊಂದರೆ ನೀಡುವುದು, ಅವುಗಳ ಅವಾಸ ಸ್ಥಾನಗಳಿಗೆ ತೆರಳಿ ಬೇಟೆಯಾವುದು, ಮತ್ತು ವಿಷ ಹಾಕುವುದು ಘೋರ ಅಪರಾಧವಾಗಿದೆ. ಇಂಥ ಅಪರಾಧದಲ್ಲಿ ಭಾಗಿಯಾದವರಿಗೆ ಕಾನೂನಿನಲ್ಲಿ ಕಠಿಣ ಶಿಕ್ಷೆ ವಿಧಿಸಲಾಗುತ್ತದೆ ಎಂದರು.



ವನ್ಯ ಜೀವಿಗಳ ಪರಿಕರಗಳನ್ನು ಟ್ರೋಫಿಗಳೆಂದು ಕರೆಯಲ್ಪಟ್ಟಿದ್ದು, ವನ್ಯ ಪ್ರಾಣ ಗಳ ಚರ್ಮ, ಜಿಪ್ಪು, ಮೂಳೆ, ದಂತ, ಉಗುರು, ಹಲ್ಲು, ಕೊಂಬೆಗಳನ್ನು ಉಪಯೋಗಿಸುವುದು, ಮಾರಾಟ ಮಾಡುವುದು, ತಮ್ಮ ಅಲಂಕಾರಿ ವಸ್ತುಗಳನ್ನಾಗಿ ಇಟ್ಟುಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ ಎಂದರು.

ನಂತರ ವಿದ್ಯಾರ್ಥಿಗಳು ಬಿ.ರಾಚಯ್ಯ ಜೋಡಿ ರಸ್ತೆ ಮಾರ್ಗವಾಗಿ, ಭುವನೇಶ್ವರಿ ವೃತ್ತ ತಲುಪಿ, ಮಾನವ ಸರಪಳಿ ನಿರ್ಮಿಸಿ, ವನ್ಯ ಪ್ರಾಣ ಗಳು ಹಾಗೂ ಅರಣ್ಯ ಸಂರಕ್ಷಣೆ ಕುರಿತು ಘೋಷಣೆಗಳನ್ನು ಕೂಗಿದರು.

ಜಾಥಾದಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾ ಆಧ್ಯಕ್ಷ ಡಾ. ರೇಣುಕಾದೇವಿ , ಪ್ರೌಢಶಾಲೆ ಮುಖ್ಯ ಶಿಕ್ಷಕಿ ಎನ್.ಜಿ. ನಾಗೇಶ್ವರಿ, ಪರಿಸರವಾದಿ ಪುಣಜನೂರು ದೊರೆಸ್ವಾಮಿ, ಪರಿಸರ ಪ್ರೇಮಿ ಸಿ. ಎಂ. ವೆಂಕಟೇಶ್, ರೋಟರಿ ಸಿಲ್ಕ್ ಸಿಟಿ ದೊಡ್ಡರಾಯಪೇಟೆ ಗಿರೀಶ್, ಗೂಳಿಪುರ ಮಣಕಂಠ, ಪೊಲೀಸ್ ಸಿಬ್ಬಂದಿಗಳಾದ ನವೀನ್, ಸ್ವಾಮಿ, ವೀರಭದ್ರಪ್ಪ, ಪ್ರಸಾದ್, ರಾಜು, ಗೋವಿಂದನಾಯಕ ಹಾಗು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ರಸ್ತೆ ಅಪಘಾತಗಳ ಸಂಖ್ಯೆ ಶೂನ್ಯವಾಗಿಸುವ ಗುರಿಯಿರಲಿ

## ನ್ಯಾ.ಅಭಯ್ ಮನೋಹರ್ ಸಪ್ರೆ



ಮೈಸೂರು: ಪ್ರತಿ ಜೀವ ಅಮೂಲ್ಯ, ರಸ್ತೆ ಅಪಘಾತಗಳ ಸಂಖ್ಯೆ ಶೂನ್ಯವಾಗುವುದು ಗುರಿಯಾಗಬೇಕು ಎಂದು ಸುಪ್ರೀಂ ಕೋರ್ಟ್ 9ನ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷ ಹಾಗೂ ಸುಪ್ರೀಂ ಕೋರ್ಟ್9ನ ನಿವೃತ್ತ ನ್ಯಾಯಾಧೀಶರಾದ ಅಭಯ್ ಮನೋಹರ್ ಸಪ್ರೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಯುದ್ಧಗಳು ಉದ್ದೇಶಪುರಿತವಾಗಿ ನಡೆದು ಹಲವರು ಜನರು ಸವಾನ್ನಪ್ಪುತ್ತಾರೆ. ರಸ್ತೆ ಅಪಘಾತದಲ್ಲಿ ಯಾವುದೇ ಉದ್ದೇಶವಿಲ್ಲದೆ ಅಂದಾಜು ದೇಶದಲ್ಲಿ ಪ್ರತಿ ವರ್ಷ ಅಂದಾಜು 2 ಲಕ್ಷ ಜನರು ಮರಣ ಹೊಂದುತ್ತಾರೆ ಎಂದರೆ ಇದು ಚಿಂತಿಸುವ ವಿಷಯವಾಗಿದೆ. ಹೆಲ್ಮೆಟ್ ಹಾಗೂ ಸೀಟ್ ಬೆಲ್ಟ್ ಧರಿಸದೇ ಇರುವುದು, ಅತಿ ವೇಗವಾಗಿ ವಾಹನ ಚಾಲನೆ ಮಾಡುವುದು ರಸ್ತೆ ಅಪಘಾತ ಹಾಗೂ ರಸ್ತೆ ಅಪಘಾತದ ಮರಣಕ್ಕೆ ಮುಖ್ಯ ಕಾರಣವಾಗಿರುತ್ತದೆ. ವಾಹನ ಚಾಲನೆ ಮಾಡುವಾಗ ಹೆಲ್ಮೆಟ್ ಹಾಗೂ ಸೀಟ್ ಬೆಲ್ಟ್ ಧರಿಸಬೇಕು ಎಂಬುವುದು ಸಾಮಾನ್ಯ ಜ್ಞಾನ ಇದಕ್ಕೆ ಯಾವುದೇ ಪದವಿ ಬೇಡ. ಹೆಚ್ಚು ವಿದ್ಯಾವಂತರು ಸಹ ಸೀಟ್ ಬೆಲ್ಟ್ ಹಾಗೂ ಹೆಲ್ಮೆಟ್ ಧರಿಸದೇ ರಸ್ತೆ ಅಪಘಾತದಲ್ಲಿ ಮರಣ ಹೊಂದಿರುವ ಉದಾಹರಣೆಗಳಿವೆ. ಸಾರ್ವಜನಿಕರು ಕಡ್ಡಾಯವಾಗಿ ಸಂಚಾರಿ ನಿಯಮ ಪಾಲನೆ ಮಾಡುವ ರೀತಿ ಮನಸ್ಥಿತಿ ಬದಲಾವಣೆ ಮಾಡಬೇಕು. ಇದಕ್ಕೆ ಇರುವ ದಾರಿ ಎಂದರೆ ಒಂದು ಜಾಗೃತಿ ಮೂಡಿಸುವುದು ಇನ್ನೊಂದು ಪೊಲೀಸ್ ಇಲಾಖೆಯಿಂದ ಕಟ್ಟುನಿಟ್ಟಾಗಿ ಸಂಚಾರಿ ನಿಯಮಗಳನ್ನು ಜಾರಿಗೊಳಿಸುವುದು ಎಂದರು.

ಕಳೆದ 5 ವರ್ಷಗಳಿಂದ ಹೆಚ್ಚು ರಸ್ತೆ ಅಫಘಾತಗಳ ಸಂಖ್ಯೆಯಲ್ಲಿ ಕರ್ನಾಟಕ ರಾಜ್ಯ 5 ನೇ ಸ್ಥಾನ ಹಾಗೂ ಮೈಸೂರು ಜಿಲ್ಲೆ 10 ನೇ ಸ್ಥಾನದೊಳಗಿದೆ. ರಸ್ತೆ ನಿರ್ಮಾಣದ ಸಂದರ್ಭದಲ್ಲಿ ಗುಣಮಟ್ಟದ ಬಗ್ಗೆ ಹಾಗೂ ಮುಂದಿನ ದಿನಗಳಲ್ಲಿ ರಸ್ತೆ ಗುಂಡಿಗಳು ಮತ್ತು ಬ್ಲ್ಯಾಕ್ ಸ್ಪಾಟ್ ಉಂಟಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಮೈಸೂರು ಜಿಲ್ಲೆ ಪ್ರವಾಸಿ ತಾಣವಾಗಿದ್ದು, ಖಾಸಗಿ ಬಸ್ ಗಳ ಸಂಚಾರ ಹೆಚ್ಚಿರುತ್ತದೆ. ಖಾಸಗಿ ಬಸ್ ಗಳು ಉತ್ತಮ ಸ್ಥಿತಿಯಲ್ಲಿರುವ ಬಗ್ಗೆ ಹಾಗೂ ಸರ್ಕಾರ ವಿಧಿಸಿರುವ ನಿಯಮಗಳ ಪಾಲನೆ, ವಾಹನ ಚಾಲಕರ ಪರವಾನಗಿ ಹಾಗೂ ವಾಹನ ವಿಮೆಯ ಬಗ್ಗೆ ನಿಗದಿತವಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ನಗರ ಪ್ರದೇಶಗಳಿಕ್ಕಿಂತ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ರಸ್ತೆ ಅಪಘಾತವಾಗಿ ಜನರು ಮರಣ ಹೊಂದುತ್ತಾರೆ. ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಗ್ರಾಮೀಣ ಪ್ರದೇಶದಲ್ಲೂ ಆಯೋಜಿಸಬೇಕು. ಜಾಗೃತಿ ಮೂಡಿಸಲು ಹೆಚ್ಚಿನ ಜನರನ್ನು ಆಕರ್ಷಿಸುವ ರೀತಿ ತಾಂತ್ರಿಕ ಸಂಚಾರಿ ಪಾರ್ಕ್9 ನಿರ್ಮಿಸಿ ಸಂಚಾರಿ ನಿಯಮಗಳನ್ನು ತಿಳಿಸಿ, ಎಂದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಉದ್ಯೋಗ ಖಾತ್ರಿ ಯೋಜನೆ: ತರಬೇತಿ ಕಾರ್ಯಾಗಾರ

ಎಚ್.ಡಿ.ಕೋಟೆ: ಪಟ್ಟಣದ ನಿಸರ್ಗ ಫೌಂಡೇಶನ್ ಕಚೇರಿಯಲ್ಲಿ ಗ್ರಾಮ ಸ್ವ–ರಾಜ್ ಅಭಿಯಾನ ಕರ್ನಾಟಕ ಹಾಗೂ ನಿಸರ್ಗ ಫೌಂಡೇಶನ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕಾಯಕ ಬಂಧುಗಳಿಗೆ ಹಾಗೂ ಮಾಸ್ಟರ್ ತರಬೇತಿದಾರರಿಗೆ ಪುನಶ್ಚೇತನ ತರಬೇತಿ ಕಾರ್ಯಕ್ರಮ ನಡೆಯಿತು.

ಗ್ರಾಮ ಸ್ವ–ರಾಜ್ ಅಭಿಯಾನ ಕರ್ನಾಟಕ ದಕ್ಷಿಣ ವಿಭಾಗದ ಸಂಯೋಜಕಿ ಶಾಲಿನಿ ಮಾತನಾಡಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯು ಗ್ರಾಮೀಣ ಪ್ರದೇಶದ ಬಡವರಿಗೆ ಕನಿಷ್ಠ 100 ದಿನಗಳ ಉದ್ಯೋಗ ಭದ್ರತೆ ನೀಡುವ, ದೇಶದ ಅತ್ಯಂತ ಮಹತ್ವದ ಯೋಜನೆಯಾಗಿದ್ದು, ಬಡತನ ಮತ್ತು ವಲಸೆಯನ್ನು ತಡೆಗಟ್ಟುವ ಸಲುವಾಗಿ ಜಾರಿಗೆ ತಂದಿದ್ದು ,ಗ್ರಾಮ ಸ್ವರಾಜ್ ಅಭಿಯಾನ ಕರ್ನಾಟಕ ವತಿಯಿಂದ ಎಚ್.ಡಿ.ಕೋಟೆ ತಾಲ್ಲೂಕಿನ 185 ಜನ ಕಾಯಕ ಬಂಧುಗಳಿಗೆ ಇಲಾಖೆಯ ಸಹಕಾರದೊಂದಿಗೆ ನರೇಗಾ ಕಾಯ್ದೆಯ ಬಗ್ಗೆ ತರಬೇತಿ ನೀಡಿಲಾಗಿದೆ ಎಂದು ತಿಳಿಸಿದರು.

ಕೂಲಿಕಾರರನ್ನು ಸಂಘಟಿಸಿ ನರೇಗಾ ಕಾಮಗಾರಿಗಳಲ್ಲಿ ತೊಡಗಿಸಿಕೊಂಡಿರುವುದು ಸಂತೋಷಕರ ವಿಷಯವಾಗಿದ್ದು ಮುಂದಿನ ದಿನಗಳಲ್ಲಿ ಪ್ರತಿಯೊಬ್ಬ ಕಾಯಕ ಬಂಧುಗಳು 30 ರಿಂದ 40 ಜನ ಕೂಲಿಕಾರರನ್ನು ಸಂಘಟಿಸಿ ಪಂಚಾಯಿತಿಗೆ ಹೋಗಿ ಬೇಡಿಕೆ ಸಲ್ಲಿಸಿ ಜನರಿಗೆ ಕೆಲಸ ಸಿಗುವಂತೆ ಮಾಡಬೇಕೆಂದು ಕರೆ ನೀಡಿದರು.

ತಾ.ಪಂ ಐ ಇ ಸಿ ಸಂಯೋಜಕ ನಿಂಗರಾಜು ಮಾತನಾಡಿ,



ನರೇಗಾ ಯೋಜನೆಯಲ್ಲಿ 2026– 2027 ಶಾಲೆಗೆ ಮುಂದಿನ ವರ್ಷಕ್ಕೆ ಕ್ರಿಯಾಯೋಜನೆ ಮಾಡಲು ಪ್ರತಿಯೊಂದು ಗ್ರಾಮ ಪಂಚಾಯಿತಿಗಳಲ್ಲೂ ಗ್ರಾಮ ಸಭೆಗಳು ನಡೆಯುತ್ತಿದ್ದು, ಈ ಗ್ರಾಮ ಸಭೆಗಳಲ್ಲಿ ಕಾಯಕ ಬಂದುಗಳು ಸಕ್ರಿಯವಾಗಿ ಭಾಗವಹಿಸಿ ಕಾಮಗಾರಿಗಳನ್ನು ಕ್ರಿಯಾ ಯೋಜನೆಯಲ್ಲಿ ಸೇರಿಸಬೇಕು. ನರೇಗಾ ಕಾಯ್ದೆಯಡಿ ಕಾಮಗಾರಿಗಳನ್ನು ಮಾಡಬೇಕಾದರೆ ಮೊದಲೇ ಕ್ರಿಯಾ ಯೋಜನೆಯಲ್ಲಿ ಸೇರಿಸಬೇಕಾಗಿದ್ದು, ಪ್ರತಿಯೊಬ್ಬ ಕಾಯಕು ಬಂಧುಗಳು ಕೂಲಿಕಾರರನ್ನು ಸಂಘಟಿಸಿ ಗ್ರಾಮ ಸಭೆಯಲ್ಲಿ ಭಾಗವಹಿಸುವಂತೆ ಮಾಡಬೇಕು ಎಂದು ಮಾಹಿತಿ ನೀಡಿದರು.

ನಿಸರ್ಗ ಫೌಂಡೇಶನ್ ಸಂಸ್ಥೆಯ ನಿರ್ದೇಶಕ ಪ್ರಭು ಮಾತನಾಡಿ,

ಈ ಪುನಶ್ಚೇತನ ತರಬೇತಿ ಕಾರ್ಯಗಾರದಿಂದ ನಿಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಹೆಚ್ಚಿಸುವ ಮೂಲಕ ಯೋಜನೆ ಅನುಷ್ಠಾನದಲ್ಲಿ ದಕ್ಷತೆ, ಪಾರದರ್ಶಕತೆ ಮತ್ತು ಜವಾಬ್ದಾರಿಯನ್ನು ಸುಧಾರಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ. ಈ ಯೋಜನೆ ಮತ್ತು ಫಲಾನುಭವಿಗಳ ನಡುವಿನ ಪ್ರಮುಖ ಸೇತುವೆಯಾಗಿದ್ದು, ನಿಮ್ಮ ಸಹಕಾರದಿಂದ ಯೋಜನೆಯು ಯಶಸ್ವಿಯಾಗಲು ಮುಖ್ಯ ಕಾರಣವಾಗುತ್ತದೆ.ನೀವು ತರಬೇತಿಯಿಂದ ಪಡೆದ ಜ್ಞಾನವನ್ನು ಗ್ರಾಮ ಮಟ್ಟದಲ್ಲಿ ಇತರರಿಗೆ ತಲುಪಿಸಿ, ಕೂಲಿ ಕಾರ್ಮಿಕರಿಗೆ ಸರಿಯಾದ ಮಾರ್ಗದರ್ಶನ ನೀಡಿ ಹಕ್ಕುಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು. ಕೂಲಿ ಕಾರ್ಮಿಕರ ಹಾಜರಾತಿ, ಕೆಲಸದ ಅಳತೆ, ವೇತನ ವಿತರಣೆ ಮತ್ತು ಕಾಮಗಾರಿಯ ಗುಣಮಟ್ಟವನ್ನು ಸಮರ್ಥವಾಗಿ ನಿರ್ವಹಿಸುವಲ್ಲಿ ನಿಮ್ಮ ಪಾತ್ರ ಅತ್ಯಂತ ನಿರ್ಣಾಯಕವಾಗಿದೆ. ಆದರಿಂದ ಪ್ರತಿಯೊಬ್ಬ ಕಾಯಕಬಂಧುಗಳು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕೆಂದು ತಿಳಿಸಿದರು. ನಿಸರ್ಗ ಫೌಂಡೇಶನ್ ಸಂಸ್ಥೆಯ ಕಾರ್ಯಾಚರಣ ವ್ಯವಸ್ಥಾಪಕಿ ತಂಜಿಲಾ ನಾಜ್, ನಿಸರ್ಗ ಫೌಂಡೇಶನ್ ಸಂಸ್ಥೆಯ ಕಾರ್ಯಕರ್ತರಾದ ಚಿಕ್ಕತಿಮ್ಮ ನಾಯಕ, ಜ್ಯೋತಿ, ಬೈರನಾಯಕ, ಗ್ರಾಮ ಕಾಯಕ ಮಿತ್ರ ಸುಕನ್ಯ ,ಕಾಯಕಬಂದುಗಳಾದ ಅಶೋಕ್, ಮಧು, ಕಮಲಾಕುಮಾರಿ, ಅಂಬಿಕಾ, ಈರಣ್ಣ ಗವಿಸಿದ್ದ, ವಸುಕುಮಾರ್, ಯೋಗೇಶ್, ನಾಗರಾಜು ವೈರಮುಡಿ, ಉಮೇಶ್ ಹಾಗೂ ಚೆಲುವಯ್ಯ ಸೇರಿದಂತೆ 25ಕ್ಕಿಂತ ಹೆಚ್ಚು ಕಾಯಕ ಬಂಧುಗಳು ಭಾಗವಹಿಸಿದ್ದರು.

# ಅಸ್ಪೈರಿಂಗ್ ಮೈಸೂರ್‌ಗೆ ತೆರೆ

## ಅತ್ಯುತ್ತಮ ಪ್ರದರ್ಶನ, ಮಾಹಿತಿ ನೀಡಿದವರಿಗೆ ಸಂಸದ ಯಧುವೀರ್ ಪ್ರಶಸ್ತಿ ವಿತರಣೆ

ಮೈಸೂರು: ನಗರದ ಸ್ಕೌಟ್ಸ್ ಅಂಡ್ ಗ್ರೈಡ್ಸ್ ಮೈದಾನದಲ್ಲಿ ನಡೆಯುತ್ತಿರುವ ಕೇಂದ್ರ ಸರಕಾರದ ವಿವಿಧ ವಿಭಾಗಗಳು ನೇತೃತ್ವದ "ಅಸ್ಪೈರಿಂಗ್ ಮೈಸೂರ್" ಮೆಗಾ ಪ್ರದರ್ಶಕ್ಕೆ ಸಂಭ್ರಮದ ತೆರೆ ಕಂಡಿತು. ಮೂರು ದಿನಗಳ ಪ್ರದರ್ಶನದಲ್ಲಿ ಉತ್ತಮ ಮಾಹಿತಿ ವಿನಿಮಯ ಮಾಡಿದವರಿಗೆ ಸಂಸದ ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರಶಸ್ತಿ ಪ್ರಧಾನ ಮಾಡಿದರು.

ಬಳಿಕ ಮಾತನಾಡಿ, ಕಳೆದ ಮೂರು ದಿನಗಳಿಂದ "ಅಸ್ಪೈರಿಂಗ್ ಮೈಸೂರ್" ಮೂಲಕ ಕೇಂದ್ರ ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳಿಂದ ಅನೇಕ ಚಟುವಟಿಕೆ, ಸ್ಥಳೀಯ ಕಲಾವಿದರಿಗೆ ಅವರು ತಯಾರಿಸುವ ಉದ್ದೇಶ ಗುರಿಯೊಂದಿಗೆ ಈ ಕಾರ್ಯಕ್ರಮ ರೂಪಿಸಲಾಗಿತ್ತು. ಪ್ರಮುಖವಾಗಿ ಸಾವಿರಾರು ವಿದ್ಯಾರ್ಥಿಗಳು ಈ ಪ್ರದರ್ಶನ ಮಾಹಿತಿ ಪಡೆದುಕೊಂಡಿದ್ದಾರೆ. ಜತೆಗೆ ಇಲ್ಲಿ ಅನೇಕ ವಿದ್ಯಾರ್ಥಿಗಳು ತಮ್ಮ ಸಾಧನೆಯನ್ನು ಪ್ರದರ್ಶನ ನೀಡಿದ್ದಾರೆಂದು ಹೇಳಿದರು. ಬೆಸ್ಟ್ ಸ್ಟಾಲ್ ಪ್ರಶ್ತಿಯನ್ನು ಸೆಂಟ್ರಲ್ ಇನ್ಸ್ಟ್ಯೂಟ್ ಆಫ್ ಇಂಡಿಯನ್ ಲ್ಯಾಗ್ವೇಜಸ್, ಇಂಡಿಯನ್ ಕೌನ್ಸಿಲ್ ಆಫ್ ಫಾರೆಸ್ಟರಿ ರಿಸರ್ಚ್ ಅಂಡ್ ಎಜುಕೇಷನ್ ಇನ್‌ಸ್ಟೂಟ್ಯೂಟ್ ಆಫ್ ವುಡ್ ಸೈನ್ಸ್ ಅಂಡ್ ಟೆಕ್ನಾಲಿಜಿ, ಸೆಂಟ್ರಲ್ ಕೌನ್ಸಿಲ್ ಫರ್ ರಿಸರ್ಚ್ ಇನ್ ಸೈಡ್ ಪಡೆದುಕೊಂಡವು. ಅತ್ಯುತ್ತಮ ಪ್ರದರ್ಶನ ನೀಡಿದ ಶಾಲೆಗಳಲ್ಲಿ ಜಿಎಸ್ ಎಸ್‌ಎಸ್ ಟೆಕ್ನಾಲಜಿ ಬುಸಿನೆಸ್ ಇನ್ಕ್ಯೂಬ್ಯೂಟರ್ ಪೌಂಡೇಶನ್(ಪ್ರ), ಎಟಿಎಂಇ ಕಾಲೇಜ್ ಆಫ್ ಇಂಜಿನಿಯರಿಂಗ್ (ದ್ವಿ), ಡೆಲ್ಲಿ ಪಬ್ಲಿಕ್ ಶಾಲೆ ತೃತೀಯ ಸ್ಥಾನವನ್ನು ಪಡೆದುಕೊಂಡಿದೆ. ಬೆಸ್ಟ್ ಪ್ರೈಸ್ ಅವಾರ್ಡ್ ನಲ್ಲಿ ಇಸಿಜಿಸಿ ಲಿಮಿಟೆಡ್, ಟೀಬೋರ್ಡ್, ಎಂಆರ್‌ಪಿಎಲ್ ಓಎನ್‌ಜಿಸಿ, ಆರ್ ಸಿಸಿಎಲ್, ಎಚ್‌ಪಿಸಿಎಲ್ ಮೊದಲಾದವರು ಪ್ರಶಸ್ತಿಗಳನ್ನು ಪಡೆದುಕೊಂಡರು. ಇದೇ ಸಂದರ್ಭದಲ್ಲಿ ಮೊಹಮದ್ ಅಫ್ಸಲ್ ಸಿದ್ದಿಕಿ, ವಿಶಾಲ್ ಮಲ್ಲಿಕ್ , ಸಂತೋಷ್ ಪವಾರ್ , ವಿನೋದ್ ಕುಮಾರ್, ಸಭೂರಿ ಪೂರಿ , ಅದಿತಿ ಸಕ್ಸೇನಸ ಸೇರಿ ಹಲವರು ಉಪಸ್ಥಿತರಿದ್ದರು.

# ಮನ್ರೇಗಾ ಬದಲಾವಣೆಯಿಂದ ಹೊಸ ಉದ್ಯೋಗ ಕೊಡುವೆ ಕೆಲಸ: ಯದುವೀರ್

ಮೈಸೂರು: ಕಾಂಗ್ರೆಸ್ ಆರೋಪಕ್ಕೆ ಎನೂ ಬೆಲೆಯಿಲ್ಲ. ಮನ್ರೇಗಾ ಈಗಿನ ಆಧುನಿಕ ಕಾಲಕ್ಕೆ ತಕ್ಕ ನವೀಕರಣ ಆಗಬೇಕಿತ್ತು. ಈ ಹೊಸ ನಿಯಮದ ಮೂಲಕ ಹೊಸ ಉದ್ಯೋಗ ಕೊಡುವ ದೃಷ್ಟಿಯಲ್ಲಿ ಕೇಂದ್ರ ಸರ್ಕಾರ ಕೆಲಸ ಮಾಡಿದೆ ಎಂದು ಸಂಸದ ಯಧುವೀರ ಕೃಷ್ಣ ದತ್ತ ಚಾಮರಾಜ ಒಡೆಯರ್ ತಿಳಿಸಿದರು.






ಮೈಸೂರಿನ ಸ್ಕೌಟ್ಸ್ ಅಂಡ್ ಗ್ರೈಡ್ಸ್ ಮೈದಾನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮನ್ರೇಗಾ ಹೆಸರು ಸೇರಿ ವಿವಿಧ ನಿಯಮ ಬದಲಿಸಿ ಮಸೂದೆ ಜಾರಿಗೊಳಿಸಿರುವ ಕುರಿತ ಪ್ರಶ್ನೆಗೆ ಪ್ರತಿಕ್ರಯಿಸಿದರು. ಪ್ರತಿ ವಾರವೂ ಸಹ ಕೂಲಿ ಕಾರ್ಮಿಕರಿಗೆ ಸಂಬಳ ಹೋಗಲಿದೆ. ಹಿಂದೆ ಕಾಮಗಾರಿ ಬಳಿಕ ಕೊಡುತ್ತಿದ್ದರು. ಈಗ ಅದು ಬದಲಾಗಿದೆ. ಜತೆಗೆ ಕೃಷಿ ಚಟುವಟಿಕೆ ಸಂದರ್ಭದಲ್ಲಿ ಮೈದಾನದ ಕೆಲಸ ಬಿಟ್ಟು ಹೋಗಬಹುದು. ಜತೆಗೆ ತಂತ್ರಜ್ಞಾನಕ್ಕೂ ಅನೂಗೂಣವಾಗಿ ತಕ್ಕ ಮಸೂದೆಯನ್ನು ಅನುಷ್ಠಾನ ಮಾಡಿದ್ದಾರೆ. ಇದರಿಂದ ಎಲ್ಲರಿಗೂ ಅನೂಕೂಲ ಆಗಲಿದೆ. ಕಾಂಗ್ರೆಸ್ ಮಾತಿಗೆ ಬೆಲೆ ಕೊಡುವ ಅಗತ್ಯವಿಲ್ಲ. ನಮ್ಮ ಕಾಲಕ್ಕೆ ಎನೂ ಮಾಡಬೇಕು ಅದನ್ನು ಮಾಡಿದ್ದೇವೆ. ಹೊಸ ಯೋಜನೆ ಹೊಸ ಭಾರತಕ್ಕೆ ಅನೂಕೂಲವಾಗುವ ಹೊಸ ಮಸೂದೆಯಾಗಿದೆ ಎಂಧರು.

ಮಹಾತ್ಮ ಗಾಂಧಿ ಎಲ್ಲರ ಹೃದಯದಲ್ಲೂ ಸದಾ ಇರುವ ವ್ಯಕ್ತಿಯಾಗಿದ್ದಾರೆ. ಎಲ್ಲಾ ಕೆಲಸದಲ್ಲಿಯೂ ಅವರ ಆದರ್ಶಗಳು ಇದ್ದಾವೆ ಎಂಬುದು ನಮ್ಮ ನಂಬಿಕೆಯಾಗಿದೆ. ಪಿಎಂ ಆವಾಸ್, ಜಲಜೀವನ್‌ನಲ್ಲಿ ಅವರ ಆದರ್ಶಗಳಿವೆ. ಪಿಎಂ ಮುದ್ರಾ ಯೋಜನೆ ಸೇರಿ ಅನೇಕ ಯೋಜನೆಗಳಲ್ಲಿ ಅವರ ಆದರ್ಶಗಳಿವೆ. ವಿಕಸಿತ ಭಾರತದ ಗುರಿಯೇ ಗಾಂಧಿಯವರ ಆದರ್ಶದೊಂದಿಗೆ ನಡೆಯುತ್ತಿರುವುದಾಗಿದೆ ಎಂದರು.

ಕ್ಷೇತ್ರದ ಅಭಿವೃದ್ಧಿಗೆ ವಿಚಾರವಾಗಿ ಪ್ರತಿಕ್ರಯಿಸಿ, ಕೇಂದ್ರದಲ್ಲಿ ನಿರಂತರವಾಗಿ ನಮ್ಮ ಬೇಡಿಕೆಯಿದೆ. ವಿಕಸಿತ ಭಾರತದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲಿಯೂ ನಿರಂತರ ಅಭಿವೃದ್ಧಿ ಕಾರ್ಯ ನಡೆಯುತ್ತಿವೆ. ಅದರಲ್ಲೂ ಕುಶಾಲನಗರ ಹೆದ್ದಾರಿ ಮಾಡಲೂ ಎನೆಲ್ಲಾ ಅನುಮತಿಬೇಕು ಮಾಡಬಹುದು ಎಲ್ಲವನ್ನೂ ಮಾಡಲಾಗಿದೆ. ಮಾರ್ಚ್ 2027ರೊಳಗೆ ಸದರಿ ರಸ್ತೆ ಪೂರ್ಣಗೊಳಿಸಲಿದ್ದೇವೆ. ಒಂದೆರಡು ವಾರಗಳಲ್ಲಿ ಕೇಂದ್ರಕ್ಕೆ ಭೂಮಿ ಹಸ್ತಾಂತರ ಪ್ರಕ್ರಿಯೆಯೂ ಪೂರ್ಣಗೊಳ್ಳುವ ಮೂಲಕ ಮೈಸೂರು ವಿಮಾನ ನಿಲ್ದಾಣ ವಿಸ್ತರಣೆ ಅಭಿವೃದ್ಧಿ ಕಾರ್ಯ ಚುರುಕಾಗಲಿದೆ. ಸಿಐಎಲ್ ನಲ್ಲಿರುವ ಕನ್ನಡ ಶಾಸ್ತ್ರೀಯ ಭಾಷಾ ಸಂಸ್ಥಾನವನ್ನು ಪ್ರತ್ಯೇಕಗೊಳಿಸಿ ಅಭಿವೃದ್ಧಿ ಮಾಡುವ ಬಗ್ಗೆಯೂ ಕ್ರಮವಹಿಸಲಾಗಿದೆ. ಮೈಸೂರಿನಲ್ಲಿಯೂ ಇಕೋ ಟೂರಿಸಂ ಜೋನ್ ಅಡಿಯಲ್ಲಿ ಮೃಗಾಲಯದ ಸಮೀಪದ ಪ್ರವಾಸೋದ್ಯಮ ಅಭಿವೃದ್ಧಿಗೆ ಯೋಜನೆ ತಂದಿದ್ದೇವೆ. ಟಾಂಗಾ ಮೂಲಕ ಮೈಸೂರನ್ನು ನೋಡುವುದು ಪ್ರವಾಸೋದ್ಯಮ ಅಭಿವೃದ್ಧಿಗೆ ಉತ್ತೇಜನ ನೀಡಲಾಗಿದೆ. ಹಳೆಯ ಜಿಲ್ಲಾಧಿಕಾರಿ ಕಚೇರಿಯಾದ ಅಠಾರ ಕಚೇರಿ ಭಾರತದ ಪ್ರಥಮ ಅಧಿವೇಶನ ಮಾಡಿದ್ದೇವೆ. ಸಂಗ್ರಹಾಲಯ ಮಾಡುವುದಕ್ಕೂ ಮನವಿ ಮಾಡಲಾಗಿದೆ ಎಂದು ಹೇಳಿದರು.

# ಆರೋಗ್ಯಕರ ಜೀವನಕ್ಕೆ ಗುಣಮಟ್ಟದ ಆಹಾರ ಅಗತ್ಯ

ಮೈಸೂರು: ಜೀವನಕ್ಕೆ ಆಹಾರ ಪದ್ಧತಿ ಅತಿ ಮುಖ್ಯ. ಆಹಾರ ಮತ್ತು ಆರೋಗ್ಯ ಉತ್ತಮ ಹಾಗೂ ಗುಣಮಟ್ಟವಾಗಿದ್ದರೆ ಮಾತ್ರ ಆರೋಗ್ಯರಕ ಜೀವನ. ಆದ್ದರಿಂದ ಆಹಾರದ ಗುಣಮಟ್ಟ ಅತೀ ಅವಶ್ಯಕ ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ತಿಳಿಸಿದರು.

ಮಾನಸ ಗಂಗೋತ್ರಿಯ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದಲ್ಲಿ ರಾಷ್ಟ್ರೀಯ ಉನ್ನತ ಶಿಕ್ಷಣ ಅಭಿಯಾನ 2.0 ಮತ್ತು ಮಾಳವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿರುವ ಏಳು ದಿನಗಳ ಶಿಕ್ಷಕರ ಸುಧಾರಣಾ ಕಾರ್ಯಾಗಾರ 'ಸ್ಥಿತಿ ಸ್ಥಾಪಕತ್ವ ಮತ್ತು ಜವಬ್ದಾರಿಯುತ ಯುವಕರನ್ನು ನಿರ್ಮಿಸಿವುದು: 'ಆರೋಗ್ಯಕರ ಮನಸ್ಸು ಮತ್ತು ಸಂಬಂಧಕ್ಕಾಗಿ ಜೀವನ ಕೌಶಲ್ಯಗಳು' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಒಂದು ಬಾರಿ ಆರೋಗ್ಯ ಹದಗೆಟ್ಟರೆ ಅದನ್ನು



ಸರಿಪಡಿಸಿಕೊಳ್ಳುವುದು ಕಷ್ಟಕರ. ಈ ದೃಷ್ಟಿಯಿಂದ ಆರೋಗ್ಯದ ಕಾಳಜಿ ವಹಿಸಬೇಕು. ಆಹಾರ ನಮ್ಮ ನಾಲಿಗೆಗೆ ರುಚಿಸುವುದಕ್ಕಲ್ಲ, ಆರೋಗ್ಯಕರ ಬದುಕಿಗಾಗಿ. ಇಂದು ಕರಿದ ಆಹಾರ ಪದಾರ್ಥಗಳಿಗೆ ಹೆಚ್ಚು ಮುಗಿ ಬೀಳುತ್ತಾರೆ. ಅದು ಆರೋಗ್ಯಕ್ಕೆ ವಿಷಕಾರಿ ಎಂದು ಅವರು ಎಚ್ಚರಿಸಿದರು.

ಯುವಕರು, ಮಕ್ಕಳು ಊಟದ ಸಮಯದಲ್ಲೂ ಮೊಬೈಲ್ ಬಳಸುತ್ತಾ, ಆಹಾರ ಸೇವಿಸುವ ಚಾಳಿ ಬೆಳೆಸಿಕೊಂಡಿದ್ದಾರೆ. ಇದು ಅಪಾಯಕಾರಿ. ಮೊಬೈಲ್ ಕಡಿಮೆ ಬಳಸಬೇಕಿದೆ. ಅದು ನಮ್ಮನ್ನು ಗೊಂದಲಕ್ಕಿಡಾಗಿಸುತ್ತದೆ. ಇದರಿಂದ ಯುವಕರು ಗುರಿ ಕಡೆಗಿನ ಹಾದಿ ತಪ್ಪುತಿದ್ದಾರೆ. ಯುವಕರಲ್ಲಿ ಇಂದು ಶಿಸ್ತು, ಬದ್ಧತೆ, ಸಮರ್ಪಣೆಯ ಮನೋಭಾವ ಬೆಳೆಯಬೇಕಿದೆ ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಕಾಲೇಜು ಶಿಕ್ಷಣ ವಿಭಾಗ ಬೆಂಗಳೂರು ನಿರ್ದೇಶಕಿ ಪ್ರೊ.ಜಿ.ಶೋಭಾ, ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಎಂ.ಕೋಮಲಾ, ಸಂಶೋಧಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವನ್ಯಜೀವಿ ಛಾಯಾಗ್ರಹಕನಿಗೆ ಕಾಡಿನ ಭಾಷೆಯ ಅರಿವಿರಲಿ

ಮೈಸೂರು: ವನ್ಯಜೀವಿ ಛಾಯಾಗ್ರಹಣ ಹಾಗೂ ಸಾಕ್ಷಾ ?ಯಚಿತ್ರ ತಯಾರಕನಾಗುವ ಮೊದಲು ಕಾಡಿನ ಭಾಷೆ ಅದರ ನಾಡಿಮಿಡಿತ ಚನ್ನಾಗಿ ಅರಿತುಕೊಂಡಿರಬೇಕು ಅದು ವನ್ಯಜೀವಿ ಛಾಯಾಗ್ರಹಕನಾಗುವ ಮೊದಲ ಅರ್ಹತೆ ಎಂದು ಪರಿಸರ, ವನ್ಯಜೀವಿ ಛಾಯಾಗ್ರಹಕರು ಕೃಪಾಕರ್ ಸೇನಾನಿ ತಿಳಿಸಿದರು.

ಶನಿವಾರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ನಡೆದ 3 ನೇ ದಿನದ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಕೃಪಾಕರ್ ಸೇನಾನಿ ಅವರು ಆಗಮಿಸಿದ್ದು, ವೈಲ್ಡ್ ಲೈಫ್ ಡಾಕ್ಯುಮೆಂಟರಿ ಮೇಕಿಂಗ್ ವಿಷಯದ ಕುರಿತು ಸವಿಸ್ತಾರವಾಗಿ ತಿಳಿಸಿಕೊಟ್ಟರು. ಪತ್ರಿಕೋದ್ಯಮದ ಮೂಲತತ್ವ: ಪತ್ರಿಕೋದ್ಯಮದ ಅತ್ಯಂತ ಪ್ರಮುಖ ಅಂಶವೆಂದರೆ ಪ್ರಶ್ನೆಗಳನ್ನು ಕೇಳುವುದು. ಸರಿಯಾದ ಪ್ರಶ್ನೆಗಳನ್ನು ಕೇಳುವ ಮೂಲಕವೇ ನೈಜ್ಯ ಮಾಹಿತಿಯನ್ನು ಹೊರತರಲು ಸಾಧ್ಯ ಎಂದರು.

### ತಾಂತ್ರಿಕ ಅಭಿವೃದ್ಧಿ

ವನ್ಯಜೀವಿ ಚಿತ್ರೀಕರಣದಲ್ಲಿ ಬೆಳಕು, ಲೆನ್ಸ್ ಮತ್ತು ವಿವಿಧ ಉಪಕರಣಗಳ ಬಳಕೆ ಹಾಗೂ ಅವುಗಳನ್ನು ಕಾಲಕ್ಕೆ ತಕ್ಕಂತೆ ಅಭಿವೃದ್ಧಿಪಡಿಸಿಕೊಳ್ಳುವುದು ಅತ್ಯಗತ್ಯ ತಾಂತ್ರಿಕ ಉಪಕರಣಗಳ ಅಭಿವೃದ್ಧಿಯ ಜತೆಗೆ ನಾವೂ ಕಾಲಕ್ಕೆ ತಕ್ಕಂತೆ ಹೊಂದಿಕೊಂಡು ಉನ್ನತ ತಂತ್ರಾಂಶಗಳನ್ನು ಅಳವಡಿಸಿಕೊಂಡು ಉತ್ತಮವಾದ ಸಾಕ್ಷಾ ?ಯಚಿತ್ರಗಳನ್ನು ಮಾಡಬೇಕು ಎಂದರು.

### ಕಾಡಿನ ಭಾಷೆ ಮತ್ತು ಮೌನ

ಎಲ್ಲಕ್ಕಿಂತ ಮುಖ್ಯವಾಗಿ, ಒಬ್ಬ ವನ್ಯಜೀವಿ ಚಿತ್ರನಿರ್ಮಾಪಕ ಮೊದಲು



ಕಾಡಿನ ಮೌನವನ್ನು ಆಲಿಸಬೇಕು ಮತ್ತು ಕಾಡಿನ ಭಾಷೆಯನ್ನು ಅರ್ಥಮಾಡಿಕೊಳ್ಳಲು ಪ್ರಯತ್ನಿಸಬೇಕು. ಇದು ಚಿತ್ರೀಕರಣಕ್ಕೆ ಪೂರಕವಾದ ವಾತಾವರಣವನ್ನು ಕಲ್ಪಿಸಿಕೊಡುತ್ತದೆ ಎಂದು ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಸ್ಫೂರ್ತಿದಾಯಕ ನುಡಿಗಳನ್ನಾಡಿದರು.

ಮಧ್ಯಾಹ್ನದ ಕಾರ್ಯಾಗಾರಕ್ಕೆ ವರದಿಗಾರ ಕಾರ್ಯನಿರ್ವಹಿಸುತ್ತಿರುವ ರವಿ ಪಾಂಡವಪುರ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿ, ದೂರದರ್ಶನಕ್ಕಾಗಿ ಕಥೆಯನ್ನು ಸಿದ್ಧಪಡಿಸುವ ತಂತ್ರಗಳು ಮತ್ತು ದೂರದರ್ಶನಕ್ಕಾಗಿ ಸ್ಕ್ರಿಪ್ಟ್ ಬರವಣಿಗೆ ವಿಷಯದ ಕುರಿತು ವಿದ್ಯಾರ್ಥಿಗಳಿಗೆ ಅನೇಕ ತಂತ್ರಾಂಶಗಳನ್ನು ತಿಳಿಸಿಕೊಟ್ಟರು. ಕಾರ್ಯಾಗಾರದಲ್ಲಿ ವಿಭಾಗದ ಅಧ್ಯಕ್ಷೆ ಪ್ರೊ.ಮಮತ, ಪ್ರಾಧ್ಯಾಪಕರು, ಪ್ರೊ.ನಿರಂಜನ, ಪ್ರೊ, ಸಿ.ಕೆ.ಪುಟ್ಟಸ್ವಾಮಿ, ಅಥಿತಿ ಉಪನ್ಯಾಸಕರಾದ, ಡಾ.ಕುಮಾರಸ್ವಾಮಿ, ಡಾ.ಸಂಜಯ್ ಬಿ.ಸಿ, ಸಂಶೋಧಕರು, ವಿದ್ಯಾರ್ಥಿಗಳು ಹಾಗೂ ವಿಭಾಗದ ಬೋಧಕೇತರ ಸಿಬ್ಬಂದಿ ಹಾಜರಿದ್ದರು.

# ಸೈಂಟ್ ಜೋಸೆಫ್ ಶಾಲೆಯಲ್ಲಿ ಕಲೋತ್ಸವ

ಎಚ್.ಡಿ.ಕೋಟೆ: ಮಕ್ಕಳಿಗೆ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳ ಜೊತೆಗೆ ಮಾನವೀಯ ಮೌಲ್ಯಗಳೊಂದಿಗೆ ಮೌಲ್ಯಯುತ ಶಿಕ್ಷಣ ನೀಡುತ್ತಿದ್ದು, ನಮ್ಮ ಶಾಲೆಯಲ್ಲಿ ಓದಿರುವವರು ಇಂದು ಉನ್ನತ ಸ್ಥಾನದಲ್ಲಿದ್ದಾರೆ ಎಂದು ಸೈಂಟ್ ಜೋಸೆಫ್ ಶಾಲೆಯ ಧರ್ಮದರ್ಶಿ ಬರ್ನಾಡ್ ತಿಳಿಸಿದರು.

ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದ ಚಿಣ್ಣರ ಕಲೋತ್ಸವ ಉದ್ಘಾಟಿಸಿ ಮಾತನಾಡಿ, ಪ್ರಸ್ತುತ ಶಾಲೆಯಲ್ಲಿ ಎರಡು ಸಾವಿರ ವಿದ್ಯಾರ್ಥಿಗಳಿದ್ದಾರೆ. ಕಲಿಕೆಯ ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಿಗೆ ಮಾನವೀಯ ಮೌಲ್ಯಗಳನ್ನು ತಿಳಿಸಿಕೊಡಲಾಗುತ್ತಿದೆ. ಅಧ್ಯಾಪಕ, ಅಧ್ಯಾಪಕೇತರರು ಹೆಚ್ಚಿನ ರೀತಿಯಲ್ಲಿ ಶ್ರಮಿಸುತ್ತಿದ್ದಾರೆ. ಪೋಷಕರು ಸಹಕಾರ, ಸಲಹೆ, ಸೂಚನೆಗಳನ್ನು ನೀಡಿ ನಮ್ಮ ಶಾಲೆಯನ್ನು ಉತ್ತುಂಗಕ್ಕೇರಿ ಸಿದ್ದಾರೆ. ನಮ್ಮ ಶಾಲೆಯ ಹಿರಿಯ ವಿದ್ಯಾರ್ಥಿಗಳು ಇಂದು ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಉನ್ನತ ಹುದ್ದೆಗಳಲ್ಲಿದ್ದಾರೆ ಎಂದು ಹೇಳಿದರು. ಕಳೆದ ಸಾಲಿನಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ಶಾಲೆ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಸಿ.ಆರ್.ಪಿ ನಂಜುಂಡಯ್ಯ, ದೀಪಾ, ಅಂತೋಣಿ ಪ್ರಭುರಾಜ್,



> ನಮ್ಮ ಶಾಲೆಯು ತಾಲೋಕಿನ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಬೇಕು ಅನ್ನುವ ಉದ್ದೇಶದಿಂದ ನುರಿತ ಶಿಕ್ಷಕ ವೃಂದದೊಂದಿಗೆ ದುಡಿಯುತ್ತಿದ್ದೇವೆ, ಕೋವಿಡ್ ಸಂದರ್ಭದಲ್ಲಿ 450 ಮಕ್ಕಳಿದ್ದ ಶಾಲೆ, ಪ್ರಸಕ್ತ ಸಾಲಿನಲ್ಲಿ 940 ಮಕ್ಕಳ ದಾಖಲೆಯೊಂದಿಗೆ ಮುನ್ನಡೆಯುತ್ತಿದೆ. ನಮ್ಮ ಶಾಲೆಯ ಪ್ರತಿ ಮಗುವಿನ ಪೋಷಕರು ಸಹಕಾರ ಮತ್ತು ಬೆಂಬಲ ನೀಡುತ್ತಿದ್ದಾರೆ.
>
> **ಸವಿತಾ** ಮುಖ್ಯ ಶಿಕ್ಷಕಿ, ಸೈಂಟ್ ಜೋಸೆಫ್ ಶಾಲೆ

ಪ್ರಾಂಶುಪಾಲರು ಸಂತೋಷ ಕುಮಾರ್, ಸಂಜೀವಿನಿ ಕಾನ್ವೆಂಟ್ ಮುಖ್ಯಸ್ಥರಾದ ಸಿಸ್ಟರ್ ಫಿಲೋಮಿನ ನಿಮ್ಮಿ, ಸೆಂಟ್ ಮೇರಿಸ್ ಕಾನ್ವೆಂಟ್ ಮುಖ್ಯಸ್ಥರಾದ ಶೀನಾ ಜಾರ್ಜ್ ಸೇರಿದಂತೆ ಪೋಷಕರು ಇದ್ದರು.

**ಜಯಸುಂದರ್ ಆರೋಪ । ಜಿಲ್ಲಾ ಬಿಜೆಪಿ ಎಸ್‌ಟಿ ಮೋರ್ಚಾದ ವಿಶೇಷ ಕಾರಕಾರಿಣಿ ಸಭೆ**

# ರಾಜ್ಯ ಸರ್ಕಾರ ರಾಜ್ಯವನ್ನು ದಿವಾಳಿಮಾಡಿದೆ

ಚಾಮರಾಜನಗರ: ಸುಳ್ಳು ಭರವಸೆ ಮೂಲಕ ಅಧಿಕಾರಕ್ಕೆ ಬಂದ ರಾಜ್ಯ ಕಾಂಗ್ರೆಸ್ ಸರ್ಕಾರ ಕರ್ನಾಟಕವನ್ನು ದಿವಾಳಿ ಮಾಡಿದೆ ಎಂದು ಎಸ್‌ಟಿ ಮೋರ್ಚಾದ ರಾಜ್ಯ ಕಾರ್ಯದರ್ಶಿ ಜಯಸುಂದರ್ ಹೇಳಿದರು.

ನಗರದ ರಾಮಸಮುದ್ರ ಕುಲಮೆ ರಸ್ತೆಯಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಜಿಲ್ಲಾ ಎಸ್‌ಟಿ ಮೋರ್ಚಾದ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಅವರು ಮಾತನಾಡಿ, ಕಾಂಗ್ರೆಸ್ ಸರ್ಕಾರದ ದುರಾಡಳಿತ ವಿರುದ್ಧ ರಾಜ್ಯದ ಜನತೆ ಈಗಾಗಲೇ ಬೇಸತ್ತು ಹೋಗಿದ್ದು, ಶೀಘ್ರದಲ್ಲೇ ರಾಜ್ಯ ಸರ್ಕಾರ ತೊಲಗಲಿ ಎನ್ನುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಪಕ್ಷದ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಕೇಂದ್ರ ಸರ್ಕಾರದ ಜನಪರ ಯೋಜನೆಗಳು, ರಾಜ್ಯ ಸರ್ಕಾರದ ದುರಾಡಳಿತ ವಿರುದ್ಧ ಜಾಗೃತಿ ಮೂಡಿಸಿ ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ತರಲು ನಾವೆಲ್ಲರೂ ಶ್ರಮಿಸೋಣ ಎಂದರು. ಬಿಜೆಪಿ ವಿಶ್ವದಲ್ಲೇ ಅತ್ಯಂತ ದೊಡ್ಡ ಪಕ್ಷವಾಗಿದ್ದು 13 ಸಾವಿರ ಕೋಟಿ ಸದಸ್ಯತ್ವ ಹೊಂದಿರುವ ಏಕೈಕ ಪಕ್ಷವಾಗಿದೆ ಈ ಪಕ್ಷದಲ್ಲಿ



ಜವಾಬ್ದಾರಿ ಹೊಂದಿದ್ದರೆ ಸಮಾಜದಲ್ಲಿ ಒಂದು ಗೌರವ ಸಿಗುತ್ತದೆ ಎಂದರು. ಮುಂದಿನ ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಬರುತ್ತಿದ್ದು ಪಕ್ಷದ ಕಾರ್ಯಕರ್ತರು, ಮುಖಂಡರು ಪಕ್ಷಕ್ಕೆ ನಿಷ್ಠೆ, ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳನ್ನು ಆಯ್ಕೆ ಮಾಡಿ ಅವರಿಗೆ ಅಧಿಕಾರ ಸಿಗುವಂತೆ ನೋಡಿಕೊಳ್ಳಬೇಕಿದೆ' ಎಂದರು. ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧ್ಯಕ್ಷ ಚಂದ್ರಶೇಖರ್ ಮಾತನಾಡಿ, ಬಿಜೆಪಿ ಸರ್ಕಾರ ನಾಯಕ ಸಮುದಾಯದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದು, ಮೀಸಲಾತಿ ಹೆಚ್ಚಳ, ಶ್ರೀಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸಾರ್ವತ್ರಿಕ ರಜೆಯನ್ನಾಗಿ ಘೋಷಿಸಿ ಸರ್ಕಾರದ ವತಿಯಿಂದಲೇ ಜಯಂತಿ ಆಚರಣೆ ಮಾಡುವಂತೆ ಮಾಡಿದೆ. ಜಿಲ್ಲೆಯಲ್ಲಿ ತಳಮಟ್ಟದಿಂದ ಪಕ್ಷವನ್ನು ಸಂಘಟಿಸಲು ಶ್ರಮಿಸಲಾಗುತ್ತಿದೆ ಎಂದರು. ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ನಾಗರಾಜು ಹುತ್ತೂರು, ಮಹೇಶ್ ಬಸವಾಪುರ, ಉಪಾಧ್ಯಕ್ಷರಾದ ಚಂದ್ರಶೇಖರ್, ಪ್ರದೀಪ್, ಸೀಗಮಾರನಾಯಕ, ಸಾಮಾಜಿಕ ಜಾಲತಾಣ ಸಂಚಾಲಕ ರಾಜಶೇಖರನಾಯಕ, ಜಿಲ್ಲಾ ಉಸ್ತುವಾರಿ ಮಹೇಶ್, ಮಂಡಲ ಅಧ್ಯಕ್ಷ ಕೆಂಪನಾಯಕ, ಕೊಳ್ಳೇಗ ಗ್ರಾಮಾಂತರ ಅಧ್ಯಕ್ಷ ಸಿದ್ದರಾಜು, ಗುಂಡ್ಲುಪೇಟೆ ಅಧ್ಯಕ್ಷ ಮಂಜು, ಹನೂರು ಅಧ್ಯಕ್ಷ ಮಣಿ ಚುಂಗವಾಡಿ, ರಘು, ರಾಜೇಶ್ ಇದ್ದರು.

# ಮಾಧ್ಯಮ ಪ್ರತಿನಿಧಿಗಳಿಗೆ 2026ನೇ ಸಾಲಿನ ನೂತನ ದಿನಚರಿಗಳ ವಿತರಣೆ



**ಕೆ.ಆರ್.ನಗರ:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಜನಪರ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನ ಮಾಡಲಾಗುತ್ತಿದೆ ಎಂದು ಯೋಜನೆಯ ಸಾಲಿಗ್ರಾಮ ತಾಲೂಕು ಯೋಜನಾಧಿಕಾರಿ ಉಮೇಶ್ ಪೂಜಾರಿ ಹೇಳಿದರು.

ಅವರು ಸಾಲಿಗ್ರಾಮ ಪಟ್ಟಣದ ಯೋಜನಾ ಕಚೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ 2026ನೇ ಸಾಲಿನ ನೂತನ ದಿನಚರಿಗಳನ್ನು ವಿತರಣೆ ಮಾಡಿ ಮಾತನಾಡಿದರು.

ತಾಲೂಕಿನಲ್ಲಿ ಸಾವಿರಾರು ಸಂಘಟನೆಗಳನ್ನು ರಚಿಸುವ ಕೆಲಸವನ್ನು ಮಾಡಿದ್ದು. ಅವುಗಳ ಮೂಲಕ ಮಹಿಳೆಯರು, ಪುರುಷರು, ರೈತರು ಹಾಗೂ ಯುವಕರುಗಳನ್ನು ಜಾಗೃತಗೊಳಿಸಿ ಅವರುಗಳನ್ನು ಸಬಲರನ್ನಾಗಿ ಮಾಡುವುದರ ಜೊತೆಗೆ ಸಮಾಜದ ಮುಖ್ಯ ವಾಹಿನಿಗೆ ತರುವಂತಹ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು.

ಶಾಲಾ, ಕಾಲೇಜುಗಳಲ್ಲಿ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದಡಿಯಲ್ಲಿ ದುಶ್ಚಟಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯ, ಮದ್ಯವರ್ಜನ ಶಿಬಿರಗಳನ್ನು ನಡೆಸುವ ಮೂಲಕ ಮದ್ಯಪಾನಕ್ಕೆ ದಾಸರಾಗಿರುವವರನ್ನು ಅದನ್ನು ತ್ಯಜಿಸಿ ನವ ಜೀವನವನ್ನು ಆರಂಭಿಸಲು ಅನುಕೂಲವಾಗುವಂತಹ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ನಿರ್ಗತಿಕರಿಗೆ ಮಾಸಾಶಸನವನ್ನು ನೀಡುವುದು, ವಿಶೇಷ ಚೇತನರಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ವಿವಿಧ ಪರಿಕರಗಳ ವಿತರಣೆ, ಸಮುದಾಯ ಭವನಗಳು ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘಗಳ ಕಟ್ಟಡ ನಿರ್ಮಾಣಕ್ಕೆ ಧನಸಹಾಯ, ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ನೆರವು, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವುದು ಸೇರಿದಂತೆ ವಿವಿಧ ಕೆಲಸಗಳನ್ನು ಮಾಡಲಾಗುತ್ತಿದೆ ಎಂದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿವಿಧ ಕಾರ್ಯಕ್ರಮಗಳನ್ನು ಮಾಡುವಂತಹ ಸಂದರ್ಭದಲ್ಲಿ ಹಾಗೂ ಯೋಜನೆಯ ಯಶಸ್ವಿ ನಡೆಗೆ ಮಾಧ್ಯಮದವರ ಸಹಕಾರ ಪ್ರಮುಖವಾದುದು. ಆ ನಿಟ್ಟಿನಲ್ಲಿ ತಾಲೂಕಿನ ಪತ್ರಕರ್ತರುಗಳು ಯೋಜನೆಗೆ ಉತ್ತಮ ಸಲಹೆ ಹಾಗೂ ಸಹಕಾರಗಳನ್ನು ನೀಡುತ್ತಾ ಬರುತ್ತಿದ್ದಾರೆ. ಯೋಜನೆಯ ಎಲ್ಲಾ ಮಾಹಿತಿಗಳನ್ನು ಸಾರ್ವಜನಿಕರಿಗೆ ತಿಳಿಸುವಲ್ಲಿ ಪ್ರಮುಖ ಪಾತ್ರ ವಹಿಸುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವಂತಹ ಪ್ರಾಮಾಣಿಕ ಕೆಲಸವನ್ನು ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿಯೂ ಯೋಜನೆಯ ಎಲ್ಲಾ ಕಾರ್ಯಕ್ರಮಗಳಿಗೆ ಮಾಧ್ಯಮದವರು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಸದಸ್ಯ ಸಿ.ಕೆ.ಬಾಲಮನೋಹರ, ತಾಲೂಕು ಪತ್ರಕರ್ತರ ಸಂಘದ ನಿಕಟಪೂರ್ವ ಅಧ್ಯಕ್ಷ

ವಡ್ಡರಕೊಪ್ಪಲು ಶಿವರಾಮು, ಪತ್ರಕರ್ತರುಗಳಾದ ಕೆ.ಟಿ.ಮೋಹನ್ ಕುಮಾರ್, ಹೊಸೂರ್ ಆನಂದ್ ಎಸ್.ಬಿ.ಹರೀಶ್, ಎಸ್.ಬಿ.ಬಸವರಾಜು, ಪ್ರಶಾಂತ್, ಮೇಲ್ವಿಚಾರಕಿ ಹೇಮಲತಾ, ಯೋಜನೆಯವರಾದ ಚಾಮರಾಜು, ಅಪ್ಸರಾ, ಶಿವರಾಜು, ಸೌಮ್ಯ, ರಂಜಿನಿ, ಜ್ಞಾನದೇವ್, ಅನುಷ ಸೇರಿದಂತೆ ಹಲವರು ಇದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ



**ಕೆ.ಆರ್.ನಗರ:** ಸಾಲಿಗ್ರಾಮ ಪಟ್ಟಣದ ಚಂದನ ಪಾಲಿ ಕ್ಲಿನಿಕ್ ಮತ್ತು ಮೆಡಿಕಲ್ಸ್ ವತಿಯಿಂದ ಮೈಸೂರಿನ ಜೆ ಎಸ್ ಎಸ್ ಆಸ್ಪತ್ರೆಯ ನುರಿತ ತಜ್ಞ ವೈದ್ಯರುಗಳಿಂದ ಚಂದನ ಪಾಲಿ ಕ್ಲಿನಿಕ್ ನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವು ಶನಿವಾರ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಶಿಬಿರದಲ್ಲಿ ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞ ವೈದ್ಯ ಡಾ.ಆರ್.ಪಿ.ಶೃಂಗ, ಡಾ.ಜೆ.ಶ್ರೀ ಹರ್ಷ, ಜನರಲ್ ಫಿಜಿಷಿಯನ್ ತಜ್ಞ ವೈದ್ಯ ಡಾ.ಶರಣಬಸಪ್ಪ ಅವರುಗಳು ತಪಾಸಣೆ ನಡೆಸಿದರು.

ಈ ಶಿಬಿರದಲ್ಲಿ ಸುಮಾರು 200ಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದರು. ಶಿಬಿರದಲ್ಲಿ ವೈದ್ಯರಿಂದ ತಪಾಸಣೆ, ರಕ್ತದೊತ್ತಡ, ಸಕ್ಕರೆ ಕಾಯಿಲೆ, ನಾಡಿ ಮಿಡಿತ, ಹಿಮೋಗ್ಲೋಬಿನ್, ಇಸಿಜಿ ಮಾಡಲಾಯಿತು.

ಡಿ.21ರ ಭಾನುವಾರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1ರ ವರೆಗೆ ಕೀಲು ಮತ್ತು ಮೂಳೆ ತಜ್ಞ ವೈದ್ಯ ಡಾ.ತೇಜಸ್ ಮತ್ತು ಡಾ.ಸಾಕೇತ್ ರವರುಗಳಿಂದ ಕೀಲು ಮತ್ತು ಮೂಳೆ ರೋಗಗಳ ಬಗ್ಗೆ ಉಚಿತ ತಪಾಸಣೆಯನ್ನು ಚಂದನ ಪಾಲಿ ಕ್ಲಿನಿಕ್ ನಲ್ಲಿ ಮಾಡಲಾಗುವುದು ಎಂದು ಶಿಬಿರದ ಆಯೋಜಕ ಚಂದನ ಪಾಲಿ ಕ್ಲಿನಿಕ್ ನ ಗೋಪಾಲ್ ತಿಳಿಸಿದರು. ಈ ಸಂದರ್ಭದಲ್ಲಿ ಚಂದನ್, ಶರತ್, ಸಿಬ್ಬಂದಿಗಳು ಸೇರಿದಂತೆ ಹಲವರು ಇದ್ದರು.

# 'ಮಾಜಿ ಶಾಸಕ ಸುರೇಶ್‌ಗೌಡ ಆರೋಪ ಆಧಾರ ರಹಿತ'



**ಮಂಡ್ಯ:** ನಾಗಮಂಗಲ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುತ್ತಿರುವ ಕಾಮಗಾರಿಗಳ ಸಂಬಂಧ ಸಚಿವ ಎನ್.ಚಲುವರಾಯಸ್ವಾಮಿ ಅವರ ವಿರುದ್ಧ ಮಾಜಿ ಶಾಸಕ ಸುರೇಶ್‌ಗೌಡ ಆರೋಪ ಆಧಾರ ರಹಿತ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹಾಗೂ ಮೈಷುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಖಂಡನೆ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾವು ಕ್ಷೇತ್ರದ ಶಾಸಕರಾಗಿದ್ದಾಗ ಅನುಮೋದನೆ ಪಡೆದ ಕಾಮಗಾರಿಗಳಿಗೆ ಸಚಿವರು ಚಾಲನೆ ನೀಡುತ್ತಿದ್ದಾರೆ ಎಂದು ಮಾಜಿ ಶಾಸಕರು ಹೇಳುತ್ತಿದ್ದಾರೆ. ಈ ಸಂಬಂಧ ಅವರು ತಮ್ಮ ಅವಧಿಯಲ್ಲಿ ಕಾಮಗಾರಿಯ ಕಾರ್ಯಾನುಮೋದನೆ ಪಡೆದ ದಾಖಲೆಗಳನ್ನು ಪ್ರದರ್ಶಿಸಲಿ ಎಂದು ಸವಾಲು ಹಾಕಿದರು.

ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪಿಸುವ ಸಂಬಂಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಜಾಗ ನೀಡುತ್ತಿಲ್ಲ ಎನ್ನುತ್ತಿರುವುದು ಹಾಸ್ಯಾಸ್ಪದ. ಇದಕ್ಕೆ ಮಂಡ್ಯ ಕ್ಷೇತ್ರದ ಶಾಸಕರು ಉತ್ತರ ನೀಡಿದ್ದಾರೆ. ಅವರು ಜಿಲ್ಲೆಗೆ ಕೈಗಾರಿಕೆಗಳನ್ನು ತರುವ ಉತ್ಸಾಹದಲ್ಲಿದ್ದರೆ ಮುಖ್ಯಮಂತ್ರಿ ಅಥವಾ ಕೈಗಾರಿಕಾ ಮಂತ್ರಿಗಳನ್ನು ಭೇಟಿ ಮಾಡಿ ಚರ್ಚೆ ಮಾಡಲಿ. ಅದನ್ನು ಬಿಟ್ಟು ಒಂದೂವರೆ ವರ್ಷದಿಂದ ಕೇವಲ ಹೇಳಿಕೆಗಳಿಗೆ ತಮ್ಮನ್ನು ಸೀಮಿತಗೊಳಿಸಿಕೊಂಡಿದ್ದಾರೆ ಎಂದು ವಿಷಾಧ ವ್ಯಕ್ತಪಡಿಸಿದರು.

ಸ್ವಾರ್ಥಕ್ಕೆ ಶನಿವಾರ ಕ್ಷೇತ್ರಕ್ಕೆ ಬರುತ್ತಾರೆ ಎಂದು ನಮ್ಮ ನಾಯಕರ ವಿರುದ್ಧ ಮಾತನಾಡುವ ಸುರೇಶ್‌ಗೌಡ ಅವರು, 'ತಾನು ಕಳ್ಳ ಪರರ ನಂಬ' ನಾಣ್ನುಡಿಯಂತೆ ಸ್ವತಃ ಕ್ಷೇತ್ರದಲ್ಲಿ ಇರದ ಅವರು ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿಯೇ ಕಾಣದೇ ನಾಪತ್ತೆಯಾಗಿದ್ದರು. ಇವರು ತಮ್ಮ ತಪ್ಪಾದ ಹೇಳಿಕೆಗೆ ಹೈಕೋರ್ಟ್‌ನಲ್ಲಿ ಕ್ಷಮೆ ಕೇಳಿದ್ದಾರೆ. ಇವರಿಗೆ ಸಚಿವರ ಬಗ್ಗೆ ಮಾತನಾಡುವ ನೈತಿಕತೆಯಿದೆಯೇ ಎಂದು ಪ್ರಶ್ನಿಸಿದರು.

ಗೋಷ್ಠಿಯಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸುಂಡಹಳ್ಳಿ ಮಂಜುನಾಥ್, ಎಸ್ಸಿ ವಿಭಾಗದ ಜಿಲ್ಲಾ ಉಪಾಧ್ಯಕ್ಷ ವಿಜಯ್‌ಕುಮಾರ್, ನಗರಸಭೆ ಸದಸ್ಯ ಶ್ರೀಧರ್, ಜಿಲ್ಲಾ ಕಾರ್ಯದರ್ಶಿ ನಾಗರಾಜು, ಗುರುರಾಜ್ ಇದ್ದರು.

# ಪ್ರಜಾಪ್ರಭುತ್ವದಲ್ಲಿ ಉತ್ತಮ ಸಮಾಜ ನಿರ್ಮಾಣ ಮಾಡಲು ಶಿಕ್ಷಣ ಇಲಾಖೆ ಪ್ರಮುಖ ಪಾತ್ರ ವಹಿಸಿದೆ: ಕೃಷ್ಣಪ್ಪ



**ಕೆ ಆರ್ ನಗರ:** ಪ್ರಜಾಪ್ರಭುತ್ವದಲ್ಲಿ ಉತ್ತಮ ಸಮಾಜ ನಿರ್ಮಾಣ ಮಾಡಲು ಶಿಕ್ಷಣ ಇಲಾಖೆ ಪ್ರಮುಖ ಪಾತ್ರ ವಹಿಸಿದ್ದು ಅದರ ಯಶಸ್ವಿಗೆ ಶಿಕ್ಷಕರ ವೃಂದವೇ ಹೆಚ್ಚು ಜವಾಬ್ದಾರಿವಹಿಸಿದೆ ಹಾಗಾಗಿ ಅವರನ್ನು ನಾವೆಲ್ಲರೂ ಗೌರವಿಸೋಣ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣಪ್ಪ ತಿಳಿಸಿದರು ತಾಲೂಕಿನ ಗೇರದಡ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕುಪ್ಪಳ್ಳಿ ಕ್ಲಸ್ಟರ್ ಮಟ್ಟದಲ್ಲಿ ವರ್ಗಾವಣೆಗೊಂಡ ಹಾಗೂ ಆಗಮಿಸಿದ ಶಿಕ್ಷಕರಿಗೆ ಆಯೋಜಿಸಿದ ಬೀಳ್ಕೊಡುಗೆ ಹಾಗೂ ಸ್ವಾಗತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.


ಸರ್ಕಾರದ ಶಿಕ್ಷಣ ಯೋಜನೆಗಳನ್ನು ಸಕಾಲದಲ್ಲಿ ಯಶಸ್ವಿಗೊಳಿಸಲು ಶಾಲೆಯ ಮುಖ್ಯ ಶಿಕ್ಷಕರು ಸಹಶಿಕ್ಷಕರು ಮತ್ತು ಸಿ ಆರ್‌ಪಿ ಹಾಗೂ ಬಿಆರ್‌ಪಿ ಅಧಿಕಾರಿಗಳ ಶ್ರಮ ಬಹುಮುಖ್ಯವಾಗಿರುತ್ತದೆ. ಎಲ್ಲಾ ಕಾರ್ಯಕ್ರಮಗಳ ಮತ್ತು ಸರ್ಕಾರದ ವಿಶೇಷ ಮಾಹಿತಿಗಳು ಹಾಗೂ ಕ್ರೀಡೆ. ಸಾಮಾಜಿಕ ಕಾರ್ಯಕ್ರಮ ಯಶಸ್ವಿಯಾಗಿ ನಿಭಾಯಿಸುವುದು ದೊಡ್ಡ ಕೆಲಸವೇ. ಏಕೆಂದರೆ ಗ್ರಾಮಗಳಲ್ಲಿ ಯಾವುದೇ ಜಾತಿ ಭೇದ ಧರ್ಮ ಅನ್ನದೇ ಎಲ್ಲಾ ಪೋಷಕರು ಮತ್ತು ಚುನಾಯಿತ ಪ್ರತಿನಿಧಿಗಳು ಹಾಗೂ ಸರ್ವ ಜನರ ಮನಸ್ಸನ್ನು ಗೆದ್ದು ಶಾಲೆಯಲ್ಲಿ ಕಾರ್ಯಕ್ರಮ ಯಶಸ್ಸು ಗೊಳಿಸುವುದು ಅಷ್ಟು ಸುಲಭದ ಕೆಲಸವಲ್ಲ. ಅಂತಹ ಜವಾಬ್ದಾರಿಯನ್ನು ನಿಭಾಯಿಸುವ ಮೂಲಕ ಸಿ ಆರ್ ಪಿ ವಸಂತ್ ಕುಮಾರ್ ಮತ್ತು ಬಿ ಆರ್ ಪಿ ಸುಬ್ಬರಾವ್ ಒಳ್ಳೆಯ ಕೆಲಸ ಮಾಡಿದ್ದಾರೆ ಎಂದರು.

ಶಿಕ್ಷಣ ಕ್ಷೇತ್ರದಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ. ಮನರಂಜನೆ ಕಾರ್ಯಕ್ರಮಗಳನ್ನು ಸಾರ್ವಜನಿಕವಾಗಿ ಮಾಡಲು ಶಿಕ್ಷಕರು ಮತ್ತು ಜನರೊಂದಿಗೆ ಉತ್ತಮ ಬಾಂಧವ್ಯ ಒಳ್ಳೆಯ ಸ್ನೇಹ ಪ್ರೀತಿಗಳೊಂದಿಗೆ ಎಲ್ಲರ ಮನ ಗೆದ್ದಿದ್ದ ಸಿ ಆರ್ ಪಿ ವಸಂತಕುಮಾರ್ ಎಲ್ಲಾ ಶಿಕ್ಷಣ ಅಧಿಕಾರಿಗಳೊಂದಿಗೆ ಉತ್ತರ ಒಡನಾಟ ಇಟ್ಟುಕೊಂಡಿದ್ದರು.ಜೊತೆಗೆ ಈ ಭಾಗದಲ್ಲಿ ಹೆಚ್ಚು ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲು ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.ನಾನು ಮಂಗಳೂರಿನಿಂದ ಕೆ ಆರ್ ನಗರಕ್ಕೆ ಬಿಇಓ ಆಗಿ ಬರಲು ಇವರ ಶ್ರಮವು ಇದೆ.ಆದರೇ ಈಗ ಇವರು ಹುಣಸೂರು ತಾಲೂಕಿಗೆ ವರ್ಗಾವಣೆಗೊಂಡಿದ್ದಾರೆ ಅಲ್ಲೂ ಕೂಡ ಹೆಚ್ಚಿನ ಕೆಲಸ ಮಾಡಿ ಹೆಚ್ಚಿನ ಹುದ್ದೆ ಪಡೆದುಕೊಳ್ಳಲಿ ಎಂದು ಶುಭ ಹಾರೈಸಿದರು.

ಅದೇ ರೀತಿ ಸುಬ್ಬರಾವ್ ಶಿಕ್ಷಣ ಇಲಾಖೆಯಲ್ಲಿ ಬಿ ಆರ್ ಪಿ ಆಗಿ ಉತ್ತಮ ಕೆಲಸ ನಿರ್ವಹಿಸಿದ ಇವರು ತಾಲೂಕು ಮಟ್ಟದ ಶಿಕ್ಷಣ ಕಚೇರಿಯಲ್ಲಿ ನಮ್ಮೊಂದಿಗೆ ಹಗಲು ಇರುಳು ಕೆಲಸ ಮಾಡಿದ್ದಾರೆ.ಜಿಲ್ಲೆಗೆ ಮತ್ತು ಸರ್ಕಾರಕ್ಕೆ ತುರ್ತಾಗಿ ಕಳುಹಿಸಬೇಕಾದ ಮಾಹಿತಿಗಳನ್ನು ಸಕಾಲದಲ್ಲಿ ಕಳುಹಿಸಲು ನನ್ನೊಂದಿಗೆ ಒಡಗೂಡಿ ಉತ್ತಮ ಕೆಲಸ ಮಾಡಿದಂತಹವರು. ಇಲಾಖೆಯ ಎಲ್ಲಾ ಅಧಿಕಾರಿಗಳನ್ನು ಪ್ರೀತಿ ವಿಶ್ವಾಸದಿಂದ ಕಾಣುತ್ತಿದ್ದ ವ್ಯಕ್ತಿ ಸುಬ್ಬರಾವ್ , ಇವರ ಜೊತೆ ಕುಪ್ಪಳ್ಳಿ ಕ್ಲಸ್ಟರ್ ನಲ್ಲಿ ಶಿಕ್ಷಕರಾಗಿದ್ದ ಜಲೇಂದ್ರ, ಸುಧಾಮಣಿ, ದಶರಥ, ಉಮೇಶ್ ಕೂಡ ವರ್ಗಾವಣೆಯಾಗಿದ್ದಾರೆ. ಇವರೆಲ್ಲರಿಗೂ ಕ್ಲಸ್ಟರ್ ವ್ಯಾಪ್ತಿಯ ಗೇರದಡ ಶಾಲೆಯಲ್ಲಿ ಬೀಳ್ಕೊಡುಗೆ ನೀಡುತ್ತಿರುವುದು ಉತ್ತಮ ಕಾರ್ಯಕ್ರಮ ಎಂದರು..

ಕುಪ್ಪಳ್ಳಿ ಕ್ಲಸ್ಟರ್ ವ್ಯಾಪ್ತಿ ಶಾಲೆಗಳಿಗೆ ನೂತನ ಶಿಕ್ಷಕರಾಗಿ ಆಗಮಿಸಿದ ಪುಟ್ಟಯ್ಯ, ಹನಸೋಗೆ ತಿಮ್ಮನಾಯಕ, ರೇವಣ್ಣ, ಹರ್ಷಿಯಾ ಫಾತಿಮಾ, ರಾಜೇಗೌಡ ಇವರುಗಳಿಗೆ ಇದೇ ವೇದಿಕೆಯಲ್ಲಿ ಸ್ವಾಗತ ಕಾರ್ಯಕ್ರಮ ಹಮ್ಮಿಕೊಂಡಿರುವುದು ಇರುವ ಶಿಕ್ಷಕರೊಂದಿಗೆ ಒಳ್ಳೆ ಬಾಂಧವ್ಯ ಬಳಸಿಕೊಳ್ಳಲು ಉತ್ತಮ ವೇದಿಕೆ ಕಾರ್ಯಕ್ರಮ ಇದಾಗಿದೆ. ಹಾಗಾಗಿ ವ್ಯಾಪ್ತಿಯ ಎಲ್ಲಾ ಶಿಕ್ಷಕ ವೃಂದದ ಅಧಿಕಾರಿಗಳಿಗೆ ನನ್ನ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷ ಉಮೇಶ್, ನಿರ್ದೇಶಕ ಬಿ ಎಲ್ ಮಹದೇವ್, ಜ್ಯೋತಿ ಕುಮಾರ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸ್ವಾಮಿಗೌಡ ಇಸಿಓ ದಾಸಪ್ಪ, ಜನಾರ್ದನ್, ಸಿ ಆರ್ ಪಿ. ಜಿ ಕೆ ನಾಗರಾಜ್, ರಾಘವೇಂದ್ರ, ಎಸ್ ಡಿ ಎಂ ಸಿ ಅಧ್ಯಕ್ಷ ಪ್ರಕಾಶ್, ಗೇರದಡ ಶಾಲೆಯ ಮುಖ್ಯ ಶಿಕ್ಷಕ ಎಸ್ ಕೆ ರಮೇಶ್, ಶಿಕ್ಷಕರಾದ ಪುಟ್ಟಯ್ಯ ರೇವಣ್ಣ ಚಿಕ್ಕೇಗೌಡ ಪ್ರಕಾಶ್ ಶಿವಣ್ಣ, ಶ್ರುತಿ, ಕವಿತಾ, ಕೋಮಲ, ಭದ್ರಯ್ಯ, ತಿಮ್ಮನಾಯಕ, ಕುಮಾರಶೆಟ್ಟಿ, ಚಿತ್ರಶೇಖರ್, ಲಿಂಗಣ್ಣಯ್ಯ, ಶಿವರಾಂ, ರಾಜೇಶ್ ಸೇರಿದಂತೆ ಇತರರು ಇದ್ದರು.

# ಅರ್ಜಿಗಳ ವಿಲೇವಾರಿಗೆ ಸೂಕ್ತ ಕ್ರಮವಹಿಸಲು ಸೂಚನೆ



**ಹಾಸನ:** ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ನಡೆಸಿದ ಜನ ಸ್ಪಂದನಕಾರ್ಯಕ್ರಮದಲ್ಲಿ ಸ್ವೀಕಾರವಾಗಿರುವ 1069 ಅರ್ಜಿಗಳನ್ನು ವಿಲೇವಾರಿ ಮಾಡಿರುವಕುರಿತುವರದಿ ನೀಡುವುದರಜೊತೆಗೆಇಂದು ಸ್ವೀಕಾರ ಮಾಡಿರುವ 135 ಅರ್ಜಿಗಳ ವಿಲೇವಾರಿಗೆ ಸೂಕ್ತ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜನ ಸ್ಪಂದನ ಸಭೆಯಲ್ಲಿ ಅಹವಾಲು ಸ್ವೀಕಾರ ಮಾಡಿ ಮಾತನಾಡಿದ ಅವರು ಸಾರ್ವಜನಿಕರ ಸ್ವಂತ ಜಮೀನು ಒತ್ತುವರಿ ಆಗಿದ್ದಲ್ಲಿ ನ್ಯಾಯಾಲಯದ ನಿರ್ದೇಶನವಿದ್ದರೆ ಮಾತ್ರ ಬಿಡಿಸಲು ಅವಕಾಶ ಇರುತ್ತದೆಎಂದು ತಿಳಿಸಿದರು.

ಕಳೆದ 20 ವರ್ಷದಿಂದ ಪಡಿತರ ಕಾರ್ಡ್ ಹೊಂದಿದ್ದು, ಆದಾಯ ಹೆಚ್ಚಳವಾಗಿದೆ ಎಂದು ಕಂಪ್ಯೂಟರ್‌ನಲ್ಲಿ ತೋರಿಸುತ್ತಿರುವುದರಿಂದ 5 ವರ್ಷದಿಂದ ಪಡಿತರ ಕಾರ್ಡ್‌ರದ್ದಾಗಿರುವುದನ್ನು ಸರಿಪಡಿಸಲು ಜಂಟಿ ನಿರ್ದೇಶಕರಿಗೆ ಸೂಚಿಸಿದರು. ಅರಕಲಗೂಡು ತಾಲ್ಲೂಕಿನ ಮಾದಿಹಳ್ಳಿಯಲ್ಲಿ ಏತನೀರಾವರಿಗೆ ಭೂಸ್ವಾಧೀನವಾಗಿದ್ದು, ಪರಿಹಾರ ಕೋರಿ ಬಂದ ಮನವಿಗೆ ಖುದ್ದು ತಹಸೀಲ್ದಾರ್ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿದರು.

ಪೌತಿಖಾತೆ, ಹದ್ದುಬಸ್ತು, ವಿದ್ಯುತ್ ಸಂಪರ್ಕ ಕಲ್ಪಿಸುವುದು, ಸಾಗುವಳಿ ಚೀಟಿ, ಕಂದಾಯಗ್ರಾಮ, ಖಾತೆ ಮಾಡುವ ಬಗ್ಗೆ, ಪೋಡಿ ದುರಸ್ತಿ, ಪಹಣಿತಿದ್ದುಪಡಿ, ಹೊಲಕ್ಕೆ ದಾರಿ ಬಿಡಿಸಿಕೊಡುವ ಬಗ್ಗೆ, ಶ್ರವಣಬೆಳಗೊಳದಲ್ಲಿ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ, ಇನಾಮು ರದ್ದು ಪಡಿಸುವಕುರಿತು, ಕೊಣನೂರುಗ್ರಾಮ ಪಂಚಾಯಿತಿಯಲ್ಲಿ ಪೌರಕಾರ್ಮಿಕರಿಗೆ ಹಕ್ಕು ಪತ್ರ ನೀಡಲು ಮನವಿ, ಆಕಾರ ಬಂದುತಿದ್ದುಪಡಿ ಮಾಡಿರುವವರ ಮೇಲೆ ಎಫ್.ಐ.ಆರ್ ದಾಖಲಿಸುವಂತೆ ಸೂಚಿಸಿದರಲ್ಲದೆ, ವಿದ್ಯುತ್ ಲೈನ್ ಹಾದು ಹೋಗಿರುವ ಸ್ಥಳಕ್ಕೆ ಪರಿಹಾರ ನೀಡಲುಒಂದು ಸಭೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಟ್ಟಾಯಗ್ರಾಮದಲ್ಲಿ ಸ್ಮಶಾನಜಾಗಒತ್ತುವರಿ ತೆರವುಗೊಳಿಸಲು, ವಸತಿಯೋಜನೆಯಡಿ ಮಂಜೂರಾದ ಮನೆಗೆ ಅಂತಿಮ ಬಿಲ್ ಹಣ ಪಾವತಿ ಮಾಡುವಂತೆ ಸೂಚಿಸಿದರಲ್ಲದೆ, ಸರ್ಕಾರಿಜಾಗದಲ್ಲಿಅನಧಿಕೃತವಾಗಿ ಶೇಡ್ ಹಾಕಿರುವುದನ್ನು ನಿರ್ದಾಕ್ಷಿಣ್ಯವಾಗಿ ತೆರೆವುಗೊಳಿಸಲು ನಿರ್ದೇಶನನೀಡಿದರು.

ಬೊಮ್ಮನಹಳ್ಳಿಏತನೀರಾವರಿಯೋಜನೆಗೆ ಭೂಸ್ವಾಧೀನವಾಗಿರುವಜಾಗಕ್ಕೆ ಹಾಗೂ ಬೆಳೆ ಪರಿಹಾರ,ಖಾತೆ ಬದಲಾವಣೆ,ಹೊಳೆನರಸೀಪುರ ತಾಲ್ಲೂಕಿನಕಾಮಸಮುದ್ರದಲ್ಲಿ ಗೋಮಾಳದಲ್ಲಿ ಎರಡುಗುಂಟೆಜಾಗಕಲ್ಪಿಸುವಂತೆಅಹವಾಲು ಅರ್ಜಿಗಳು ಸ್ವೀಕಾರವಾಯಿತು.

ಸಾರ್ವಜನಿಕರಿಗೆ ಕಾನೂನು ಸೇವೆಗಳ ಸಹಾಯಕ್ಕೆಜಿಲ್ಲಾಧಿಕಾರಿಗಳ ಕಚೇರಿಯಲ್ಲಿಒಂದು ಕೋಶ ತೆರೆಯಲಾಗಿದೆಯಾರ ಸಹಾಯವಿಲ್ಲದವರುಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಬಾಲ ಗರ್ಭಿಣಿ, ಫೋಕ್ಸೋ ಹಾಗೂ ಮಾದಕ ವಸ್ತುಗಳ ಸೇವನೆಯನ್ನುತಡೆಗಟ್ಟುವ ನಿಟ್ಟಿನಲ್ಲಿಎಲ್ಲಾ ಇಲಾಖಾ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡುವಂತೆ ಸೂಚಿಸಿದರು.

ಜಿಲ್ಲಾಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

# 'ಮಕ್ಕಳು ಸಾಮಾಜಿಕ ಜಾಲ ತಾಣಗಳಿಂದ ದೂರವಿದ್ದು ಗುರಿ ಸಾಧಿಸಿ'



**ಹಾಸನ:** ಮಕ್ಕಳು ಸಮಯ ವ್ಯರ್ಥ ಮಾಡದೆ ಓದಿನಲ್ಲಿ ತೊಡಗಿಸಿಕೊಳ್ಳಿ ಸಾಮಾಜಿಕಜಾಲ ತಾಣಗಳಿಂದ ದೂರವಿದ್ದು, ನಿಮ್ಮಗುರಿ ಸಾಧಿಸಿ ಎಂದುಜಿಲ್ಲಾಧಿಕಾರಿ ಲತಾಕುಮಾರಿಅವರು ತಿಳಿಸಿದ್ದಾರೆ.

ಕೇಂದ್ರ ವಿದ್ಯಾಲಯದ ವಾರ್ಷಿಕೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು ಮಕ್ಕಳು ದೇಶದ ಮುಂದಿನ ರಾಯಭಾರಿಗಳು, ನಿಮ್ಮ ಜೀವನಕ್ಕೆ ನೀವೇ ನಾಯಕರಾಗಿದ್ದೀರಿ ಈ ನಿಟ್ಟಿನಲ್ಲಿ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಲು ತಿಳಿಸಿದರು.

ಪ್ರತಿಯೊಂದು ಮಕ್ಕಳಿಗೆ ಬಾಲ್ಯವುಉತ್ತಮವಾದ ನೆನಪು ಪ್ರತಿಯೊಂದು ಕ್ಷಣಗಳು ಮಕ್ಕಳಿಗೆ ವಿಶೇಷವಾದವುಗಳಾಗಿವೆ ಹಾಗಾಗಿ ಬಾಲ್ಯವನ್ನು ಆನಂದಿಸಿ ಎಂದು ತಿಳಿಸಿದರು.

ಬಾಲ್ಯದಲ್ಲಿ ಬಹಳಷ್ಟು ವಿಷಯಗಳನ್ನು ಕಲಿಯುವುದಕ್ಕೆ ನೋಡಿ, ವೀಕ್ಷಣೆ ಮಾಡಿ ಗ್ರಹಿಸಿ, ಕೇಳಿ ಹೀಗೆ ವಿವಿಧರೀತಿಯಲ್ಲಿಕಲಿಯುವ ವಿಧಾನಗಳಿವೆ ಅವುಗಳನ್ನು ನಾನು ಕೂಡ ಅಳವಡಿಸಿಕೊಂಡಿದ್ದೆ ಎಂದುಅವರ ಬಾಲ್ಯದ ನೆನಪುಗಳನ್ನು ಮೆಲುಕು ಹಾಕಿದರು.

ಮಕ್ಕಳು ಕುಟುಂಬ, ಸ್ನೇಹಿತರು ಹಾಗೂ ಶಿಕ್ಷಕರೊಂದಿಗೆ ಉತ್ತಮ ಬಾಂಧವ್ಯವನ್ನು ರೂಡಿಸಿಕೊಳ್ಳಬೇಕು ಮತ್ತುಅಂಬೇಡ್ಕರ್, ಸುಭಾಷ್‌ಚಂದ್ರ ಬೋಸ್, ಭಗತ್ ಸಿಂಗ್ ರಂತಹ ಮಹಾನುಭಾವರ ಪುಸ್ತಕಗಳನ್ನು ಓದುವ ಹವ್ಯಾಸವನ್ನು ರೂಡಿಸಿಕೊಳ್ಳಬೇಕು ಪುಸ್ತಕಗಳೇ ನಮಗೆ ನಿಜವಾದ ಸ್ನೇಹಿತರುಎಂದರು.

ಮಕ್ಕಳ ಜೀವನದಲ್ಲಿ ಪೋಷಕರ ಪಾತ್ರ ಬಹಳ ಮಹತ್ವವಾದಾಗಿದೆ. ಪೋಷಕರು ಮಕ್ಕಳಿಗೆ ನಿರಂತರವಾಗಿ ಬೆಂಬಲವಾಗಿ ನಿಂತು ಪ್ರೋತ್ಸಾಹ ನೀಡಿಎಂದರಲ್ಲದೆ, ಹೆಚ್ಚು ಸಮಯವನ್ನುತಮ್ಮ ಮಕ್ಕಳೊಂದಿಗೆ ಕಳೆಯಬೇಕು ಎಂದು ತಿಳಿಸಿದರು. ರಾಷ್ಟ್ರಕಟ್ಟುವ ನಿಟ್ಟಿನಲ್ಲಿ ಶಿಕ್ಷಕರ ಪಾತ್ರ ಬಹಳ ಮಹತ್ವದ್ದಾಗಿದೆ ಈ ನಿಟ್ಟಿನಲ್ಲಿ ಮಕ್ಕಳನ್ನು ತಯಾರಿಸುವ ಶಿಕ್ಷಕರಿಗೆ ಅಭಿನಂದನೆಗಳನ್ನು ತಿಳಿಸಿದರು.

ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ವಿಜೇತರಾಗಿ ಬಹುಮಾನ ಪಡೆದಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆಗಳನ್ನು ತಿಳಿಸಿದರು. ಪ್ರಾಂಶುಪಾಲರಾದ ಎಂ. ಜಯಶೀಲನ್, ಡಾ.ಮಿನಿ ವರ್ಗೀಸ್‌ಉಪಸ್ಥಿತರಿದ್ದರು.

# 'ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಕೆ; 30 ದಿನದೊಳಗೆ ಮಾಹಿತಿ ಒದಗಿಸಿ'



ಮಡಿಕೇರಿ: ಮಾಹಿತಿ ಹಕ್ಕು ಕಾಯ್ದೆಯು ಸರ್ಕಾರಿ ನೌಕರರ ರಕ್ಷಣೆ ಮತ್ತು ಭದ್ರತೆಗೆ ಇದೆ ಎಂದು ಭಾವಿಸಬೇಕೇ ಹೊರತು, ಇದರಿಂದ ಸರ್ಕಾರಿ ಕೆಲಸಕ್ಕೆ ಅಡ್ಡಿ ಎಂದು ತಿಳಿದುಕೊಳ್ಳಬಾರದು ಎಂದು ರಾಜ್ಯ ಮಾಹಿತಿ ಆಯುಕ್ತರಾದ ಬದ್ರುದ್ದೀನ್ ಕೆ. ಮತ್ತು ಡಾ॥ ಹರೀಶ್ ಕುಮಾರ್ ಅವರು ಪ್ರತಿಪಾದಿಸಿದ್ದಾರೆ.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ನಡೆದ ಮಾಹಿತಿ ಹಕ್ಕು ಕಾಯ್ದೆ ಕುರಿತು ಜಾಗೃತಿ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಸುಮಾರು ಎರಡುವರೆ ಗಂಟೆಗಳ ಕಾಲ ಮಾಹಿತಿ ಆಯುಕ್ತರು ಅಧಿಕಾರಿಗಳಿಗೆ ಪಾಠ ಮಾಡಿದರು.

ಮಾಹಿತಿ ಆಯುಕ್ತರಾದ ಬದ್ರುದ್ದೀನ್ ಕೆ. ಅವರು ಮಾತನಾಡಿ ಮಾಹಿತಿ ಹಕ್ಕು ಕಾಯ್ದೆಯು ಸರಳವಾಗಿದ್ದರೂ ಸಹ ಗಂಭೀರವಾಗಿದೆ. ಅದನ್ನು ಅರ್ಥಮಾಡಿಕೊಂಡು ಕಚೇರಿಗೆ ಸಲ್ಲಿಕೆಯಾದ ಅರ್ಜಿಗೆ ನಿಯಮಾನುಸಾರ 30 ದಿನದೊಳಗೆ ಮಾಹಿತಿ ಒದಗಿಸಬೇಕು ಎಂದು ಸಲಹೆ ಮಾಡಿದರು.

'ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರಿ ನೌಕರರು ಉತ್ತರದಾಯಿತ್ವ ಹೊಂದಿರಬೇಕು. ಜೊತೆಗೆ ಪಾರದರ್ಶಕತೆ ಇದ್ದಲ್ಲಿ ವಿಚಲಿರಾಗುವ ಅಗತ್ಯವಿಲ್ಲ. ಆ ದಿಸೆಯಲ್ಲಿ ಪ್ರಾಮಾಣಿಕತೆ ಇರಬೇಕು ಎಂದು ಬದ್ರುದ್ದೀನ್ ಅವರು ಒತ್ತಿ ಹೇಳಿದರು.'

'ಎಲ್ಲರೂ ಸಹ ಮನುಷ್ಯರೇ ಆಗಿದ್ದು, ತಪ್ಪುಗಳು ಆಗುತ್ತವೆ. ಅದನ್ನು ತಿದ್ದಿ ನಡೆಯುವುದು ಅತ್ಯಗತ್ಯ. ಅದನ್ನು ಬಿಟ್ಟು ಸುಳ್ಳು ಮಾಹಿತಿ ನೀಡಿ ಪೇಚಿಗೆ ಸಿಲುಕಬಾರದು. ಸತ್ಯದ ಮಾಹಿತಿ ನೀಡಿದ್ದಲ್ಲಿ ಕ್ಷಮೆಗೂ ಅರ್ಹರಿರುತ್ತಾರೆ ಎಂಬುದನ್ನು ಮರೆಯಬಾರದು ಎಂದು ಅವರು ಹೇಳಿದರು.' ಕೆಡಿಪಿ ಸಭೆಯಲ್ಲಿ ಮಾಹಿತಿ ಹಕ್ಕು ಅರ್ಜಿಗಳ ಸಲ್ಲಿಕೆ, ವಿಲೇವಾರಿ ಮತ್ತಿತರ ಸಂಬಂಧ ಚರ್ಚಿಸಿದ್ದಲ್ಲಿ ಸಮಸ್ಯೆಯನ್ನು ಜಿಲ್ಲಾ ಮಟ್ಟದಲ್ಲಿಯೇ ಪರಿಹರಿಸಿಕೊಳ್ಳಬಹುದು ಎಂದು ಮಾಹಿತಿ ಆಯುಕ್ತರು ಅಭಿಪ್ರಾಯಪಟ್ಟರು.

ಸಾರ್ವಜನಿಕ ಜೀವನದಲ್ಲಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಲು ಮಾಹಿತಿ ಹಕ್ಕು ಸಹಕಾರಿಯಾಗಿದ್ದು, ಸದಾ ಎಚ್ಚರ ನೀಡುತ್ತದೆ. ಹಾಗಾಗಿ ಅಧಿಕಾರಿಗಳು ಸಾಧ್ಯವಾದಷ್ಟು ಮುನ್ನೆಚ್ಚರದಿಂದ ಕರ್ತವ್ಯ ನಿರ್ವಹಿಸಬೇಕು. ಮಾಹಿತಿ ಹಕ್ಕು ಕಾಯ್ದೆಯನ್ನು ಮನನ ಮಾಡಿಕೊಳ್ಳಬೇಕು ಎಂದು ಹೇಳಿದರು.

'ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸಿದವರ ಜೊತೆ ಯಾವುದೇ ಕಾರಣಕ್ಕೂ ಕರೆ ಮಾಡಿ ಮಾತನಾಡಬಾರದು. ಅಡ್ಡದಾರಿ ಹಿಡಿಯಬಾರದು ಎಂದು ಬದ್ರುದ್ದೀನ್ ಅವರು ಸಲಹೆ ಮಾಡಿದರು.'

ನಿಯಮ 4(1)ಎ ಮತ್ತು 4(1) (ಬಿ)ರಡಿ ವೆಬ್‌ಸೈಟ್‌ನಲ್ಲಿ ಮಾಹಿತಿ ಪ್ರಕಟಿಸಬೇಕು. ನಿಖರ, ನಿರ್ದಿಷ್ಟ ಹಾಗೂ ಸ್ಪಷ್ಟವಾಗಿ 150 ಪದಕ್ಕಿಂತ ಕಡಿಮೆ ಮಾಹಿತಿ ಒದಗಿಸಬೇಕು. ಯಾವುದೇ ಕಾರಣಕ್ಕೂ ಕ್ರೋಢೀಕರಿಸಿ ಮಾಹಿತಿ ನೀಡಬಾರದು ಎಂದರು.

ಮಾಹಿತಿ ಹಕ್ಕು ಕಾಯ್ದೆಯಡಿ ರಾಷ್ಟ್ರದಲ್ಲಿ 60 ಲಕ್ಷ ಅರ್ಜಿಗಳು ಬಾಕಿ ಇವೆ. ರಾಜ್ಯದಲ್ಲಿ 6 ಲಕ್ಷ ಅರ್ಜಿಗಳು, ಹಾಗೆಯೇ ಜಿಲ್ಲೆಯಲ್ಲಿ 38 ಸಾವಿರ ಅರ್ಜಿಗಳು ಇದ್ದು, ರಾಜ್ಯದಲ್ಲಿ ಕೊಡಗು ಜಿಲ್ಲೆ ಕೊನೆ ಸ್ಥಾನದಲ್ಲಿದೆ. ಇದನ್ನು ಸೊನ್ನೆಗೆ ತರಬೇಕು ಎಂದರು.

ಮಾಹಿತಿ ಆಯುಕ್ತರಾದ ಡಾ//ಹರೀಶ್ ಕುಮಾರ್ ಅವರು ಮಾತನಾಡಿ ಸರ್ಕಾರಿ ನೌಕರರನ್ನು ಸಾರ್ವಜನಿಕರು ನೋಡುವ ದೃಷ್ಟಿ, ಸರ್ಕಾರಿ ನೌಕರರು ಸಮಾಜವನ್ನು ನೋಡುವ ದೃಷ್ಟಿ ಎರಡನ್ನು ಗಮನಿಸಬೇಕು ಎಂದರು.

ಸ್ವೀಡನ್ ದೇಶದಲ್ಲಿ 1776 ರಲ್ಲಿಯೇ ಮಾಹಿತಿ ಹಕ್ಕು ಕಾಯ್ದೆ ಜಾರಿಗೊಳಿಸಲಾಗಿದೆ. ಕರ್ನಾಟಕ ಇಡೀ ದೇಶದಲ್ಲಿ ಮಾಹಿತಿ ಹಕ್ಕು ಕಾಯ್ದೆಯನ್ನು ಜಾರಿಗೊಳಿಸಿದ ಪ್ರಥಮ ರಾಜ್ಯವಾಗಿದೆ ಎಂದು ತಿಳಿಸಿದರು.

ಮಾಹಿತಿ ಹಕ್ಕು ಅಧಿನಿಯಮವು 2005 ರಲ್ಲಿ ಜಾರಿಗೆ ಬಂದಿದ್ದು, ಉತ್ತಮ ಆಡಳಿತ, ದಕ್ಷತೆ ಮತ್ತು ಪಾರದರ್ಶಕತೆ ತರುವುದು ಉದ್ದೇಶವಾಗಿದೆ ಎಂದರು.

ಮಾಹಿತಿ ಹಕ್ಕು ಕಾಯ್ದೆ ಇರುವುದರಿಂದ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸುತ್ತಿದ್ದು, ಇದರಿಂದ ಸರ್ಕಾರಿ ನೌಕರರ ರಕ್ಷಣೆ ಇದೆ ಎಂಬುದನ್ನು ತಿಳಿದುಕೊಳ್ಳಬೇಕು ಎಂದರು.

'ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಕೆಯಾದ 30 ದಿನದೊಳಗೆ ಮಾಹಿತಿ ನೀಡಬೇಕು. ಮಾಹಿತಿ ನೀಡದಿದ್ದಲ್ಲಿ 25 ಸಾವಿರ ದಂಡ ವಿಧಿಸಲಾಗುತ್ತದೆ. ಜೊತೆಗೆ ತಪ್ಪು ಮಾಡಿದ್ದಲ್ಲಿ 5 ವರ್ಷ ಜೈಲು ಶಿಕ್ಷೆ ಇದೆ. ಆದ್ದರಿಂದ ದಾಖಲೆ ನಿರ್ವಹಣೆ ಅತೀ ಮುಖ್ಯ ಎಂದು ಡಾ.ಹರೀಶ್ ಕುಮಾರ್ ಅವರು ಹೇಳಿದರು.'

# ಟ್ರ್ಯಾಪ್ ಪ್ರಕರಣ ಆರೋಪಿತರಿಗೆ ಶಿಕ್ಷೆ

**ಹಾಸನ:** ಹಾಸನ ಲೋಕಾಯುಕ್ತ ಪೊಲೀಸ್‌ಠಾಣೆ ಮೊ.ನಂ 07/2011, ಕಲಂ7, 13(1)(ಡಿ) ಸಹವಾಚನ 13(2) ಕರ್ನಾಟಕ ಭ್ರಷ್ಟಚಾರ ನಿಗ್ರಹಕಾಯಿದೆ 1988 ರರಡಿ ದಿನಾಂಕ 01–04–2011 ರಂದುಆಪಾದಿತರಾದ ಪಾಪೇಗೌಡ, ಉಪ ಜಿಲ್ಲಾಆರೋಗ್ಯ ಶಿಕ್ಷಣಾಧಿಕಾರಿ. ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಹಾಸನ ರವರ ವಿರುದ್ದಟ್ರ್ಯಾಪ್ ಪ್ರಕರಣ ವರದಿಯಾಗಿದ್ದು ಈ ಪ್ರಕರಣದಲ್ಲಿ ತನಿಖಾಧಿಕಾರಿಗಳು ತನಿಖೆ ಪೂರೈಸಿ ಆಪಾದಿತರ ವಿರುದ್ದ ಹಾಸನದ ಘನ ಪ್ರಧಾನಜಿಲ್ಲಾ ಸತ್ರ ಮತ್ತು ವಿಶೇಷ ನ್ಯಾಯಾಲಯಕ್ಕೆದೋಷಾರೋಪಣ ಪತ್ರ ಸಲ್ಲಿಸಿದ್ದು ಮಾನ್ಯ ನ್ಯಾಯಾಲಯವು ಸ್ಪೆಷಲ್ ಸಿ.ಸಿ. ನಂ 73/2013 ರಡಿ ವಿಚಾರಣೆಕೈಗೊಂಡು ಪ್ರಕರಣದಆರೋಪಿತರಾದ ಪಾಪೇಗೌಡ ಉಪ ಜಿಲ್ಲಾಆರೋಗ್ಯ ಶಿಕ್ಷಣಾಧಿಕಾರಿ, ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಹಾಸನ ರವರಿಗೆ ದಿನಾಂಕ 18–12–2025 ರಂದು ಶಿಕ್ಷೆಯನ್ನು ವಿಧಿಸಿದ್ದು, ಕಲಂ 7 ಪಿಸಿ ಆಕ್ಟ್‌ಗೆ 6 ತಿಂಗಳ ಸದಾ ಶಿಕ್ಷೆ ಮತ್ತು 25,000 ರೂದಂಡ ಹಾಗೂ 13(1) (ಡಿ) ರೆ.ವಿ. 13(2) ಆಫ್ ಪಿಸಿ ಆಕ್ಟ್ ಗೆ ಒಂದು ವರ್ಷ ಸಾದಾ ಶಿಕ್ಷೆ ಹಾಗೂ 25,000ರೂದಂಡ ವಿಧಿಸಿದ್ದು, ದಂಡಕಟ್ಟಲು ವಿಫಲವಾದಲ್ಲಿ 5 ತಿಂಗಳು ಸಾದಾ ಶಿಕ್ಷೆಯನ್ನು ವಿಧಿಸಿ ತೀರ್ಪನ್ನು ಹೊರಡಿಸಿರುತ್ತೆ. ಈ ಪ್ರಕರಣದಲ್ಲಿ ತನಿಖಾಧಿಕಾರಿಗಳಾಗಿ ರುದ್ರಮುನಿ ಪೊಲೀಸ್ ನಿರೀಕ್ಷಕರು, ಕ.ಲೋ ಹಾಸನ ರವರುತನಿಖೆ ಪೂರೈಸಿ ನ್ಯಾಯಾಲಯಕ್ಕೆದೋಷಾರೋಪಣ ಪತ್ರ ಸಲ್ಲಿಸಿದ್ದು, ಹಾಗೂ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪರವಾಗಿ ವಿಶೇಷಅಭಿಯೋಜಕರಾದ ಪರಶುರಾಮ್‌ರವರು ಮಾನ್ಯ ನ್ಯಾಯಾಲಯದಲ್ಲಿ ವಾದ ಮಂಡಿಸಿರುತ್ತಾರೆಎಂದುಕರ್ನಾಟಕ ಲೋಕಾಯುಕ್ತ ಹಾಸನ ಪೊಲೀಸ್‌ಅಧೀಕ್ಷಕರು ತಿಳಿಸಿದ್ದಾರೆ.

